ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 207

8–2–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 206

## ಮೂಡಾ; ಉಚ್ಚ ನ್ಯಾಯಾಲಯದ ತೀರ್ಪು ಸ್ವಾಗತಾರ್ಹ



**ದಾವಣಗೆರೆ:** ವಿರೋಧ ಪಕ್ಷಗಳು ದುರುದ್ದೇಶದಿಂದ ಆಡಳಿತ ಪಕ್ಷ ಕಾಂಗ್ರೆಸ್ ಸರ್ಕಾರವನ್ನು ಬುಡಮೇಲು ಮಾಡಲು ಮುಖ್ಯಮಂತ್ರಿ ಸಿದ್ಧರಾಮಯ್ಯ ವಿರುದ್ಧ ಮೂಡಾ ಹಗರಣದ ಆರೋಪ ಹೋರಿಸಿದ್ದವು. ಆದರೆ, ಹೈಕೋರ್ಟ್ ತೀರ್ಪಿನಿಂದ ವಿಪಕ್ಷಗಳಿಗೆ ಉತ್ತರ ಸಿಕ್ಕಿದೆ ಎಂದು ಮಾಜಿ ನಗರಸಭೆ ಅಧ್ಯಕ್ಷ ಬಿ. ವೀರಣ್ಣ ಹೇಳಿದ್ದಾರೆ.

ಪತ್ರಿಕಾ ಹೇಳಿಕೆ ನಿಡಿರುವ ಅವರು, ಲೋಕಾಯುಕ್ತ ಸಂಸ್ಥೆಯ ಬಗ್ಗೆ ನಮಗೆ ನಂಬಿಕೆ ಇರಬೇಕು. ಅದರಂತೆ ನ್ಯಾಯಾಲಯ ಲೋಕಾಯುಕ್ತ ಸಂಸ್ಥೆ ಮೇಲೆ ವಿಶ್ವಾಸವಿಟ್ಟು ಸಿಬಿಐ ತನಿಖೆಗೆ ನಿರಾಕರಿಸಿದೆ ಎಂದು ಅವರು ಹೇಳಿದರು.

ಲೋಕಾಯುಕ್ತ ಪೊಲೀಸರ ತನಿಖೆ ಅಸಮರ್ಪಕ ಎನ್ನುವುದಕ್ಕೆ ಕಾರಣಗಳಿಲ್ಲ. ಲೋಕಾಯುಕ್ತ ತನಿಖೆ ತಾರತಮ್ಯ ಪೂರಿತ ಎಂಬುದಕ್ಕೆ ಆಧಾರಗಳಿಲ್ಲ. ಲೋಕಾಯುಕ್ತ ಸ್ವತಂತ್ರ ತನಿಖಾ ಸಂಸ್ಥೆಯಾಗಿದೆ ಎಂದು ನ್ಯಾ. ನಾಗಪ್ರಸನ್ನ ಅವರ ಹೈಕೋರ್ಟ್ ಪೀಠ ಹೇಳಿ, ಮುಡಾ ಪ್ರಕರಣದ ಸಿಬಿಐ ತನಿಖೆಯಾಕಾಂಕ್ಷೆಯನ್ನು ತಿರಸ್ಕರಿಸಿ ಆದೇಶ ಹೊರಡಿಸಿದೆ. ಸತ್ಯಕ್ಕೆ ಜಯ ಸಂದಿದೆ ಎಂದಿದ್ದಾರೆ.

## ಪ್ರಕರಣ ಸಿಬಿಐಗೆ ವಹಿಸಲು ಕೋರಿದ್ದ ಅರ್ಜಿ ವಜಾ:

# ಸಿಎಂ ಸಿದ್ದರಾಮಯ್ಯಗೆ ರಿಲೀಫ್

**ಬೆಂಗಳೂರು,ಫೆ.7:** ರಾಜ್ಯದಾದ್ಯಂತ ತೀವ್ರ ಕುತೂಹಲ ಕೆರಳಿಸಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಕರ್ಮಕಾಂಡ ಆರೋಪದಲ್ಲಿ ಸಿಲುಕಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಇದೀಗ ನಿರಾಳಾರಾಗಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮೂಲಕ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ. ಪಾರ್ವತಿ ಅವರಿಗೆ ಪರ್ಯಾಯ ನಿವೇಶನ ದೊರಕಿಸಿ ಕೊಡುವಲ್ಲಿ ತಮ್ಮ ಪ್ರಭಾವ ಬೀರಿದ್ದಾರೆ ಎಂದು ಆರೋಪಿಸಲಾಗಿತ್ತು.

ಇದೊಂದು ಬಹುಕೋಟಿ ಕರ್ಮಕಾಂಡವಾಗಿದೆ ಎಂಬ ಆರೋಪ ಕೇಳಿ ಬಂದ ಬೆನ್ನಲ್ಲೇ, ರಾಜ್ಯ ಸರ್ಕಾರ ಪ್ರಕರಣದ ಬಗ್ಗೆ ಲೋಕಾಯುಕ್ತ ತನಿಖೆಗೆ ಆದೇಶಿಸಿತ್ತು.

ಆದರೆ ಇದಕ್ಕೆ ತಕರಾರು ಸಲ್ಲಿಸಿದ್ದ ಮೈಸೂರಿನ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಎಂಬುವವರು ಹಗರಣ ಆರೋಪದ ಬಗ್ಗೆ ಸಿಬಿಐ ತನಿಖೆಗೆ ಆದೇಶಿಸುವಂತೆ ಕೋರಿ ಹೈಕೋರ್ಟಿಗೆ ರಿಟ್ ಅರ್ಜಿ ಸಲ್ಲಿಸಿದ್ದರು

ಸ್ನೇಹ ಮಯಿ ಕೃಷ್ಣ ಸಲ್ಲಿಸಿದ್ದ ತಕರಾರು



ಅರ್ಜಿ ವಿಚಾರಣೆಯನ್ನು 2025ರ ಜನವರಿ 27ರಂದು ಪೂರ್ಣಗೊಳಿಸಿ, ಕಾಯ್ದಿರಿಸಿರುವ ತೀರ್ಪನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ ಶುಕ್ರವಾರ ಪ್ರಕಟಿಸಿತು.

ಆರೋಪದ ಬಗ್ಗೆ ಈಗಾಗಲೇ ಲೋಕಾಯುಕ್ತ ತನಿಖೆ ನಡೆಯುತ್ತಿದೆ. ಲೋಕಾಯುಕ್ತ ಪೊಲೀಸರ ತನಿಖೆ ಅಸಮರ್ಪಕ ಎನ್ನುವುದಕ್ಕೆ ಕಾರಣಗಳಿಲ್ಲ, ಜೊತೆಗೆ ಲೋಕಾಯುಕ್ತ ತನಿಖೆ ತಾರತಮ್ಯಪೂರಿತ ಎಂಬುದಕ್ಕೆ ಆಧಾರಗಳಿಲ್ಲ. ಲೋಕಾಯುಕ್ತ ಸ್ವತಂತ್ರ ತನಿಖಾ ಸಂಸ್ಥೆಯಾಗಿದೆ ಎಂದು ಎಂದು ಹೇಳಿದ ನ್ಯಾಯ ಪೀಠ ಸ್ನೇಹ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿತು.

ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಪರವಾಗಿ ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ಮಣೀಂದ್ರ್ ಸಿಂಗ್, ರಾಜ್ಯ ಸರ್ಕಾರದ ಪರವಾಗಿ ಸುಪ್ರೀಂಕೋರ್ಟ್ ಹಿರಿಯ ವಕೀಲ ಕಪಿಲ್ ಸಿಬಲ್ ಹಾಗೂ ಸಿದ್ದರಾಮಯ್ಯ ಪತ್ನಿ ಪರ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಹಾಗೂ ಪ್ರೊ.ರವಿವರ್ಮ ಕುಮಾರ್ ವಾದ ಮಂಡಿಸಿದ್ದರು.

**ಕಾಂಗ್ರೆಸ್ ಸಂಭ್ರಮ:** ಕೋರ್ಟ್ ತೀರ್ಪು ಹೊರಬೀಳುತ್ತಿದ್ದಂತೆ ರಾಜ್ಯ ಸರ್ಕಾರದ ಸಚಿವರು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಬಣ ಅತೀವ ಸಂತಸ ವ್ಯಕ್ತಪಡಿಸಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಮೈಸೂರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸಿದರು

ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ನಾವು ಕಾನೂನನನ್ನು ಗೌರವಿಸುತ್ತೇವೆ. ಆದರೆ, ಈ ಪ್ರಕರಣದಲ್ಲಿ ರಾಜಕೀಯ ಮಾಡುವುದೇ ಪ್ರತಿಪಕ್ಷಗಳ ಗುರಿಯಾಗಿ–ತ್ತು ಎಂದು ಹೇಳಿದರು

ಆದರೆ ಈಗ ಕೋರ್ಟ್ ಎಲ್ಲಾ ಅಂಶಗಳನ್ನು ಪರಾಮರ್ಶಿಸಿ ಅರ್ಜಿ ವಜಾಗೊಳಿಸಿದೆ. ನಾವು ಲೋಕಾಯುಕ್ತಕ್ಕೆ ಗೌರವ ನೀಡಬೇಕು. ಅದೊಂದು ಸ್ವತಂತ್ರ ಸಂಸ್ಥೆ. ಇದನ್ನು ರಾಜಕೀಯ ಉದ್ದೇಶದಿಂದ ವಿರೋಧ ಮಾಡುತ್ತಲೇ ಬಂದಿದ್ದಾರೆ" ಎಂದು ದೂರಿದರು.

ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಮಾತನಾಡಿ, ನ್ಯಾಯಾಂಗ ವ್ಯವಸ್ಥೆ ಮೇಲೆ ನಂಬಿಕೆ ಬಂದಿದೆ ಪ್ರಕರಣದಲ್ಲಿ ಸಿಬಿಐ ಬಳಸಿಕೊಂಡು ರಾಜಕೀಯ ಬೇಳೆ ಬೇಯಿಸಿಕೊಳ್ಳಲು ನೋಡಲಾಗಿತ್ತು. ಇದು ದ್ವೇಷದ ರಾಜಕಾರಣ. ತನಿಖಾ ಸಂಸ್ಥೆಗಳನ್ನು ಬಳಸಿಕೊಳ್ಳುವುದನ್ನು ನಾವು ಮೊದಲಿನಿಂದಲೂ ನೋಡ್ತಿದ್ದೇವೆ ಎಂದು ಹೇಳಿದರು

## ಬಿ.ವೈ. ಯಡಿಯೂರಪ್ಪ ವಿರುದ್ಧದ ಪೋಕ್ಸ್ ಪ್ರಕರಣ:

# ಹೈಕೋರ್ಟ್‌ನಿಂದ ನಿರೀಕ್ಷಣಾ ಜಾಮೀನು



**ಬೆಂಗಳೂರು,ಫೆ.7:** ಅಪ್ರಾಪ್ತಗೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದ ಪೋಸ್ಕೋ ಪ್ರಕರಣವನ್ನು ರದ್ದುಪಡಿಸಲು ನಿರಾಕರಿಸಿರುವ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ಆದರೆ ಅವರ ವಿರುದ್ಧ ದಾಖಲಾಗಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಮುಂದುವರೆಸಲಿದೆ. ತಾಂತ್ರಿಕ ಕಾರಣಕ್ಕೆ ಈ ಪ್ರಕರಣವನ್ನು ಹೈಕೋರ್ಟ್ ಪೋಸ್ಕೋ ಕೋರ್ಟ್‌ಗೆ ಮರಳಿಸಿದೆ. ಹೀಗಾಗಿ ಯಡಿಯೂರಪ್ಪ ಅವರು ವಿಚಾರಣೆಯನ್ನು ಎದುರಿಸಲೇಬೇಕು ಎಂದು ಹೇಳಿರುವ ನ್ಯಾಯಾಲಯ ವಿಚಾರಣೆಗೆ ತನಿಖಾಧಿಕಾರಿಗಳು ಎಲ್ಲಾ ರೀತಿಯ ಸಹಕಾರ ನೀಡಬೇಕೆಂದು ಅರ್ಜಿದಾರರ ಪರ ವಕೀಲರಿಗೆ ಸೂಚನೆ ಕೊಟ್ಟಿದೆ

ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ 2024ರ ಮಾರ್ಚ್ 3ರಂದು ಯಡಿಯೂರಪ್ಪ ವಿರುದ್ಧ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಆರೋಪದ ಮೇಲೆ ಪ್ರಕರಣ ದಾಖಲು ಮಾಡಲಾಗಿತ್ತು.

ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ. ಪ್ರಕರಣದ ಗಂಭೀರತೆ ಪರಿಗಣಿಸಿ ಸರ್ಕಾರವು ಸಿಐಡಿಗೆ ವರ್ಗಾವಣೆ ಮಾಡಿತ್ತು. ಸಿಐಡಿ ಅಧಿಕಾರಿಗಳು ಯಡಿಯೂರಪ್ಪ ಅವರಿಗೆ ನೋಟಿಸ್ ನೀಡಿ, ವಿಚಾರಣೆಗೆ ಹಾಜರಾಗಲು ಸೂಚಿಸಿದ್ದರು. ಅದರಂತೆ ಯಡಿಯೂರಪ್ಪ ವಿಚಾರಣೆಗೆ ಹಾಜರಾಗಿ ತಮ ಹೇಳಿಕೆಗಳನ್ನು ನೀಡಿದ್ದರು. ಈ ನಡುವೆ ತಮ ವಿರುದ್ಧದ ಪ್ರಕರಣ ರದ್ದು ಮತ್ತು ನಿರೀಕ್ಷಣಾ ಜಾಮೀನು ಮಂಜೂರು ಮಾಡುವಂತೆ ಕೋರಿ ಯಡಿಯೂರಪ್ಪ ಹೈಕೋರ್ಟ್ಗೆ ಎರಡು ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸಿದ್ದರು.

## ಕೃಷಿ ಉತ್ಸವ ಮುಂದೂಡಿಕೆ

**ದಾವಣಗೆರೆ:** ಹಸಿರೋತ್ಸವ ಫೋರಮ್‌ನಿಂದ ಇದೇ ಫೆಬ್ರವರಿ 19ರಿಂದ 23ರವರೆಗೆ ನಿಗದಿಯಾಗಿದ್ದ ಕೃಷಿ ಉತ್ಸವವನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದ್ದು, ಶೀಘ್ರದಲ್ಲಿಯೇ ಕಾರ್ಯಕ್ರಮದ ಮುಂದಿನ ದಿನಾಂಕವನ್ನು ಪ್ರಕಟಿಸುವುದಾಗಿ ತಿಳಿಸಲಾಗಿದೆ.

## ಇಂದು ವಿಶೇಷ ಸಭೆ, ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ

**ದಾವಣಗೆರೆ:** ಕರ್ನಾಟಕ ರಾಜ್ಯ ಸರ್ಕಾರಿ ರೇಡಿಯೋಲಜಿ ಇಮೇಜಿಂಗ್ ಆಫೀಸರ್ಸ್ ಕೇಂದ್ರ ಸಂಘ ಜಿಲ್ಲಾ ಘಟಕದ ವಿಶೇಷ ಸಭೆ ಮತ್ತು ಹೊಸ ವರ್ಷ 2025ರ ಕ್ಯಾಲೆಂಡರ್ ಬಿಡುಗಡೆ ಸಮಾರಂಭವು ಫೆ.8ರ ಇಂದು ಬೆಳಗ್ಗೆ 10.30 ಕ್ಕೆ ನಗರದ ಜಿಲ್ಲಾ ಗುರುಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್ ಷಡಕ್ಷರಿ ಉದ್ಘಾಟಿಸಲಿದ್ದು, ಸಂಘದ ಜಿಲ್ಲಾಧ್ಯಕ್ಷ ಜೆ ನಾಗಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ್ ಬಳ್ಳಾರಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ ಒಡೆನಪುರ, ಡಿ ಎಚ್ ಓ ಡಾ. ಷಣ್ಮುಖಪ್ಪ, ಸಿಜಿ ಆಸ್ಪತ್ರೆಯ ಅಧೀಕ್ಷಕ ಡಾ. ನಾಗೇಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಅಧ್ಯಕ್ಷರಾದ ಡಾ. ಎಸ್ ಪಿ ಮಧು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಜಿ.ಡಿ ರಾಘವನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ಅತಿಥಿಗಳಾಗಿ ಸಂಘದ ಗೌರವಾಧ್ಯಕ್ಷ ರಾಮಪ್ಪ ವಿ. ಹೊಳೆಪ್ಪನವರ್ ಉಪಾಧ್ಯಕ್ಷ ಎಂ.ಎನ್. ವಿನಯ್ ಕುಮಾರ್ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದು ವಿಶೇಷ ಅತಿಥಿಗಳಾಗಿ ಸಂಘದ ಮಾಜಿ ಅಧ್ಯಕ್ಷ ಭೋಜೇಗೌಡ, ಡಾ. ರಾಮಚಂದ್ರರೆಡ್ಡಿ, ನಂಜುಂಡಸ್ವಾಮಿ ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ನೂತನ ಜಿಲ್ಲಾಧ್ಯಕ್ಷರಿಗೆ ಪ್ರಮಾಣ ಪತ್ರ ವಿತರಣೆ ನಡೆಯಲಿದ್ದು, ರೆಡಿಯಾಲಜಿ ಇಮೇಜಿಂಗ್ ಆಫೀಸರ್ಸ್‌ಗಳಿಗೆ ಸನ್ಮಾನ ನಡೆಯಲಿದೆ.

## ಜನಸಂಪರ್ಕ ಸಭೆ

**ಚಿಕ್ಕಮಗಳೂರು: ಫೆ. 07:** ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ವತಿಯಿಂದ ಲಕ್ಕಮ್ಮನಹಳ್ಳಿ ಮತ್ತು ಬಿಳೇಕಲ್ಲಹಳ್ಳಿ ಎರಡು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಜನ ಸಂಪರ್ಕ ಸಭೆಯನ್ನು ಫೆಬ್ರವರಿ 15 ರಂದು ಬೆಳಿಗ್ಗೆ 10.30 ಗಂಟೆಗೆ ಲಕ್ಯಾ ಹೋಬಳಿ ಲಕ್ಕಮ್ಮನಹಳ್ಳಿ ಗ್ರಾಮ ಪಂಚಾಯಿತಿ ಹತ್ತಿರ ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್.ಡಿ. ತಮ್ಮಯ್ಯ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ–ಕೆವೈಸಿ ಕಡ್ಡಾಯ

**ಚಿಕ್ಕಮಗಳೂರು: ಫೆ. 07:** ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಪಡಿತರ ಚೀಟಿ ಪಡೆದ ಎಲ್ಲಾ ಸದಸ್ಯರು ಕಡ್ಡಾಯವಾಗಿ ನ್ಯಾಯಬೆಲೆ ಅಂಗಡಿಗಳಲ್ಲಿ ಇ–ಕೆವೈಸಿ (ಜೀವಮಾಪಕ ಮರು ಧೃಢೀಕರಣ) ಮಾಡಿಸಬೇಕಾಗಿದೆ.

ಇ–ಕೆವೈಸಿ (ಜೀವಮಾಪಕ ಮರು ಧೃಢೀಕರಣ) ಮಾಡಿಸಲು ಫೆಬ್ರವರಿ 15 ಕೊನೆಯ ದಿನವಾಗಿರುತ್ತದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಾನ್ಯ ಸಭೆ

**ಚಿಕ್ಕಮಗಳೂರು: ಫೆ. 07:** ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆ ಫೆಬ್ರವರಿ 11 ರಂದು ಬೆಳ್ಳಿಗೆ 10.30 ಗಂಟೆಗೆ ತಾಲ್ಲೂಕು ಪಂಚಾಯಿತಿಯ ಡಾ. ಬಿ. ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ (ಆಡಳಿತ)ಗಳಾದ ಎಸ್.ಜಿ. ಕೊರವರ ರವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಸದಸ್ಯ ಕಾರ್ಯದರ್ಶಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ, ಅನುದಾನಿತ, ಕಲ್ಯಾಣ ಕರ್ನಾಟಕದಲ್ಲಿನ ಖಾಲಿ ಇರುವ 25 ಸಾವಿರ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಬಜೆಟ್‌ನಲ್ಲಿ ಅನುಮೋದನೆಗೆ ಪ್ರಸ್ತಾವನೆ : ಮಧು ಬಂಗಾರಪ್ಪ

**ದಾವಣಗೆರೆ:** ರಾಜ್ಯದಲ್ಲಿ 50 ಸಾವಿರ ಶಿಕ್ಷಕರ ಹುದ್ದೆಗಳ ಕೊರತೆ ಇದ್ದು 2025–26 ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ 25 ಸಾವಿರ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಬಜೆಟ್‌ನಲ್ಲಿ ಅನುಮೋದನೆ ನೀಡಲು ಪ್ರಸ್ತಾವನೆ ಸಿದ್ದಪಡಿಸಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಾದ ಎಸ್. ಮಧು ಬಂಗಾರಪ್ಪ ತಿಳಿಸಿದರು.

ಅವರು ಶುಕ್ರವಾರ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದಲ್ಲಿ ವಿಧಾನ ಪರಿಷತ್ ಸದಸ್ಯರು, ರಾಜ್ಯಸಭಾ ಸದಸ್ಯರು ಹಾಗೂ ಸರ್ಕಾರದ ಅನುದಾನ ಸೇರಿ ರೂ.3.5 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹೈಟೆಕ್ ಕಟ್ಟಡವನ್ನು ಲೋಕಾರ್ಪಣೆ ಮಾಡಿ ಸಮಾರಂಭದಲ್ಲಿ ಮಾತನಾಡಿದರು. ಶಿಕ್ಷಕರ ಕೊರತೆ ನೀಗಿಸಲು ಈಗಾಗಲೇ 13500 ಶಿಕ್ಷಕರ ನೇಮಕಾತಿಗೆ ಆದೇಶ ನೀಡಲಾಗಿದೆ. ಆದರೂ 50 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ಹಂತ ಹಂತವಾಗಿ ಖಾಲಿ ಹುದ್ದೆಗಳನ್ನು ಭರ್ತಿಗೆ ಕ್ರಮ ವಹಿಸಲಾಗುತ್ತದೆ ಎಂದರು.

ರಾಜ್ಯದಲ್ಲಿ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಸೇರಿ 76 ಸಾವಿರದಷ್ಟು ಶಾಲೆಗಳಿದ್ದು 1.08 ಕೋಟಿ ವಿದ್ಯಾರ್ಥಿಗಳು 1 ರಿಂದ 12 ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿದ್ದು ಒಟ್ಟು ನೌಕರರಲ್ಲಿ ಶೇ 37 ರಷ್ಟು ಸಿಬ್ಬಂದಿ ಶಿಕ್ಷಣ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಸರ್ಕಾರಿ ಹಾಗೂ ಅನುದಾನಿತ ಶಾಲೆಯಲ್ಲಿ 57 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ






ಮಾಡುತ್ತಿದ್ದಾರೆ. ಇಲ್ಲಿ ಅಗತ್ಯವಿರುವ ಮೂಲಭೂತ ಸೌಕರ್ಯಗಳ ಕೊರತೆಯೂ ಇದ್ದು ಹಂತ ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಜೊತೆಗೆ ದಾನಿಗಳಿಂದ ಶಾಲೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ನಮ್ಮ ಶಾಲೆ, ನಮ್ಮ ಜವಾಬ್ದಾರಿ ಪರಿಕಲ್ಪನೆಯನ್ನು ಜಾರಿಗೆ ತರಲಾಗಿದೆ ಎಂದರು.

ಪೌಷ್ಟಿಕತೆ ಹೆಚ್ಚಿಸಲು ಪ್ರತಿನಿತ್ಯ ಮೊಟ್ಟೆ; ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಗಾಗಿ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಪ್ರತಿನಿತ್ಯ ಮೊಟ್ಟೆ ನೀಡಲಾಗುತ್ತಿದೆ. ಇದರಲ್ಲಿ ಆಜೀಂ ಪ್ರೇಂಜೀ ಪೌಂಡೇಷನ್‌ನಿಂದ ನಾಲ್ಕು ದಿನ, ಸರ್ಕಾರದಿಂದ 2 ದಿನ ಮೊಟ್ಟೆ ನೀಡಲಾಗುತ್ತಿದ್ದು ಸ್ಥಳೀಯವಾಗಿ ಬಾಳೆಹಣ್ಣು ಅಥವಾ ಶೇಂಗಾ ಚಿಕ್ಕಿ ನೀಡಲಾಗುತ್ತಿದೆ. ಎಲ್ಲ ದಿನವೂ ಮೊಟ್ಟೆ ನೀಡಿದರೆ ಉತ್ತಮ ಎಂದು ಅಭಿಪ್ರಾಯ ಪಟ್ಟ ಅವರು ಶಾಲೆಯಲ್ಲಿ ಮಕ್ಕಳ ಹಾಜರಾತಿ ಹೆಚ್ಚಿಸಲು ಮತ್ತು ಪೋಷಕರೊಂದಿಗೆ ಮಕ್ಕಳನ್ನು ಕರೆದುಕೊಂಡು ಹೋಗದೆ ಶಾಲೆಗೆ ಕಳುಹಿಸಬೇಕೆಂದು ಮಾಜಿ ಮುಖ್ಯಮಂತ್ರಿ ಬಂಗಾರಪ್ಪನವರು ಪ್ರತಿ ದಿನದ ಹಾಜರಾತಿಗೆ ರೂ.1 ರಂತೆ ಮಕ್ಕಳಿಗೆ ನೀಡಲಾಗುತ್ತಿತ್ತು, ನಂತರ ಮಧ್ಯಾಹ್ನ ಊಟ ನೀಡುತ್ತಾ ಬಂದು ಈಗ ಹಾಲು, ಮೊಟ್ಟೆಯನ್ನು ನೀಡಲಾಗುತ್ತಿದೆ. ಭವಿಷ್ಯದ ಪ್ರಜೆಗಳಾಗುವ ಮಕ್ಕಳು ಆರೋಗ್ಯವಂತರಾಗಿ ಉತ್ತಮ ಶಿಕ್ಷಣ ಪಡೆದು ದೇಶದ ಆಸ್ತಿಯಾಗಬೇಕು ಮತ್ತು ಸಂವಿಧಾನ ಉಳಿಯಲು ಎಲ್ಲರೂ ಶಿಕ್ಷಣವಂತರಾಗಬೇಕೆಂದರು.

**ಗ್ರಂಥಾಲಯಗಳಿಗೆ ಮಹತ್ವ;** ಶಾಲೆಗಳಿಗೆ ನೀಡುವ ಮಹತ್ವವನ್ನು ಗ್ರಂಥಾಲಯಗಳಿಗೆ ನೀಡುವ ಅವಶ್ಯಕತೆ ಇದೆ. ಜಗಳೂರು ಪಟ್ಟಣದಲ್ಲಿ ಮುಖ್ಯಗ್ರಂಥಾಲಯವನ್ನು ಬಹಳ ಸುಸಜ್ಜಿತವಾಗಿ ನಿರ್ಮಾಣ ಮಾಡಿ ನಡೆಸಲಾಗುತ್ತಿದೆ. ಗ್ರಂಥಾಲಯಗಳು ಶಿಕ್ಷಕ ರಹಿತವಾದ ವಿಶ್ವವಿದ್ಯಾನಿಲಯಗಳಿದ್ದಂತೆ, ಗ್ರಂಥಾಲಯಗಳಲ್ಲಿ ಅಧ್ಯಯನ ಮಾಡಿದ ಅನೇಕರು ಉನ್ನತ ಹುದ್ದೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಓದುಗರನ್ನು ಸಂದರ್ಶಿಸಿದಾಗ ಗ್ರಾಮ ಆಡಳಿತಾಧಿಕಾರಿ ಹುದ್ದೆಗೆ ಆಯ್ಕೆಯಾಗಿದ್ದು ಕೆಎಎಸ್ ಅಧಿಕಾರಿಯಾಗುವ ಆಸೆ ಇದ್ದು ಮುಂದಿನ ದಿನಗಳಲ್ಲಿ ಪರೀಕ್ಷೆ ತೆಗೆದುಕೊಳ್ಳಲು ಈಗಿನಿಂದಲೇ ತಯಾರಿ ನಡೆಸುತ್ತಿದ್ದೇನೆ ಎಂಬ ಅಭಿಪ್ರಾಯ ವ್ಯಕ್ತವಾಯಿತು. ಇದೇ ಮಾದರಿಯಲ್ಲಿ ರಾಜ್ಯಾದ್ಯಂತ ಗ್ರಂಥಾಲಯಗಳನ್ನು ಅಭಿವೃದ್ದಿ ಮಾಡುವ ಗುರು ಹೊಂದಲಾಗಿದೆ ಎಂದರು.

8 ನೇ ತರಗತಿವರೆಗೆ ವಿಸ್ತರಣೆ; ಹುಚ್ಚಂಗಿಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1 ರಿಂದ 7 ನೇ ತರಗತಿವರೆಗೆ ಮಾತ್ರ ಇದ್ದು ಇದನ್ನು 8 ನೇ ತರಗತಿಯವರೆಗೆ 2025–26 ಶೈಕ್ಷಣಿಕ ವರ್ಷದಿಂದಲೇ ವಿಸ್ತರಣೆ ಮಾಡಲು ಆದೇಶಿಸಲಾಗಿದೆ. 9–10 ನೇ ತರಗತಿಯನ್ನು ಇಲ್ಲಿಯೇ ಮುಂದುವರೆಗೆಸಲು ಮಕ್ಕಳ ಸಂಖ್ಯೆಯನ್ನಾಧರಿಸಿ ಮುಂದಿನ ನಿರ್ಧಾರವನ್ನು ಇಲಾಖೆ ಕೈಗೊಳ್ಳಲಿದೆ, ಶಾಲೆಯ ಅಭಿವೃದ್ದಿಗೆ ರೂ.25 ಲಕ್ಷಗಳನ್ನು ಕೇಳಿದ್ದು ಅನುದಾನ ಬಿಡುಗಡೆ ಮಾಡಲಾಗುತ್ತದೆ ಎಂದರು.

## ಜಿಲ್ಲೆಯ ಸರ್ಕಾರಿ ಕೆರೆಗಳ ಸಮಗ್ರ ವರದಿ ಸಲ್ಲಿಸಲು ಸಿಇಓ ಸೂಚನೆ



**ಚಿಕ್ಕಮಗಳೂರು: ಫೆ.07:** ಜಿಲ್ಲೆಯಲ್ಲಿ ಸರ್ಕಾರಿ ಜಾಗದಲ್ಲಿರುವ ಎಲ್ಲಾ ಕೆರೆಗಳ ಸರ್ವೆ ನಂಬರ್ ಸಹಿತ ಸಮಗ್ರ ವರದಿಯನ್ನು ಕೂಡಲೇ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂದು ನಡೆದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸರ್ವೆ, ಒತ್ತುವರಿ, ತೆರವು ಕುರಿತಂತೆ ಚರ್ಚಿಸಲು ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ವ್ಯಾಪ್ತಿಗೆ ಒಳಪಡುವ ಒಟ್ಟು ಕೆರೆಗಳನ್ನು ಸರ್ವೆ ಮಾಡಿಸಿ ಒತ್ತುವರಿಯಾಗಿರುವ ಕೆರೆಗಳನ್ನು ಕೂಡಲೇ ತೆರವುಗೊಳಿಸಿ ಅವುಗಳನ್ನು ಸಂರಕ್ಷಣೆ ಮಾಡಲು ಸಂಬಂಧಿಸಿದ ಇಲಾಖೆಗಳು ತಕ್ಷಣ ಕ್ರಮಕೈಗೊಳ್ಳುವುದರ ಜೊತೆಗೆ ಅವುಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆ ಸಿದ್ದಪಡಿಸಿ ಸಲ್ಲಿಸಬೇಕು ಎಂದ ಅವರು ಕೆರೆಗಳ ಸ್ಥಿತಿಗತಿಗಳು ಸೇರಿದಂತೆ ಅಲ್ಲಿನ ನೀರಿನ ಗುಣಮಟ್ಟವನ್ನು ಪರಿಶೀಲಿಸಿ ಎರಡು–ಮೂರು ದಿನಗಳಲ್ಲಿ ವರದಿಯನ್ನು ನೀಡಬೇಕು ಎಂದು ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ತಿಳಿಸಿದರು.

ಕೆರೆಗಳ ಅಪೆಕ್ಸ್ ಸಮಿತಿಯಲ್ಲಿರುವ ಎಲ್ಲ ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳು ಈ ಬಗ್ಗೆ ಸಭೆಗಳನ್ನು ಮಾಡಿ ಅಲ್ಲಿನ ವರದಿಯನ್ನು ಮೇಲಾಧಿಕಾರಿಗಳಿಗೆ ಸಲ್ಲಿಸಬೇಕು ಎಂದ ಅವರು ಗ್ರಾಮ ಪಂಚಾಯಿತಿ, ಗ್ರಾಮೀಣಾಭಿವೃದ್ಧಿ, ಅರಣ್ಯ ಇಲಾಖೆ, ಸಣ್ಣ ನೀರಾವರಿ ಇಲಾಖೆ ಸೇರಿದಂತೆ ತಮ್ಮ ವ್ಯಾಪ್ತಿಗೆ ಬರುವ ಸುಮಾರು 1729 ಕೆರೆಗಳ ದಾಖಲಾತಿಗಳು ಸೇರಿದಂತೆ ಕೆರೆಗಳ ಅಭಿವೃದ್ಧಿಗೆ ಮೀಸಲಿಟ್ಟಿರುವ ಜಾಗವನ್ನು ರಕ್ಷಿಸಲು ಮುಂದಾಗಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ನಾರಾಯಣರಡ್ಡಿ ಕನಕರಡ್ಡಿ ಮಾತನಾಡಿ ಜಿಲ್ಲೆಯಲ್ಲಿರುವ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಅಂಕಿ–ಅಂಶಗಳು ವ್ಯತ್ಯಾಸವಾಗದಂತೆ ಪಿಆರ್‌ಇಡಿ ಕಂದಾಯ, ಸಣ್ಣ ನೀರಾವರಿ, ಮತ್ತಿತರ ಇಲಾಖೆಗಳು ಸೇರಿ ಸರ್ಕಾರಿ ಸರ್ವೆ ನಂಬರ್‌ಗಳಲ್ಲಿ ಸಾರ್ವಜನಿಕ ಉಪಯೋಗಕ್ಕೆ ಬಳಕೆಯಾಗುವ ಕೆರೆಗಳ ಸಂಪೂರ್ಣ ಮಾಹಿತಿಯನ್ನು ಕಲೆ ಹಾಕಿ ಸರಿಯಾದ ಅಂಕಿ–ಅಂಶಗಳನ್ನು ನೀಡಬೇಕು ಎಲ್ಲಾ ತಾಲ್ಲೂಕು ಕಾರ್ಯನಿರ್ವಾಹಣಾಧಿಕಾರಿಗಳು, ತಹಸೀಲ್ದಾರರುಗಳು ಈ ಬಗ್ಗೆ ಸೂಕ್ತ ಕ್ರಮವಹಿಸಬೇಕು ಎಂದರು.

## ಈಶ್ವರಪ್ಪ ನೇತೃತ್ವದ ಸಂಗೊಳ್ಳಿ ರಾಯಣ್ಣ ಬ್ರಿಗೇಡ್‌ಗೆ ಮತ್ತೆ ಚಾಲನೆ





**ಶಿವಮೊಗ್ಗ:** ಮಲೆನಾಡಿನ ಜಿಲ್ಲೆಗಳಲ್ಲಿ ಶಿವಮೊಗ್ಗ ಜಿಲ್ಲೆಯ ಜನಪ್ರತಿನಿಧಿಗಳು ಸದಾ ರಾಜ್ಯ ರಾಜಕೀಯದಲ್ಲಿ ಮುಂಚೂಣಿಯಲ್ಲಿರುತ್ತಾರೆ. ನಾಲ್ಕು ಮುಖ್ಯಮಂತ್ರಿಗಳನ್ನು ನೀಡಿದ ಜಿಲ್ಲೆ ಎಂಬ ಹೆಗ್ಗಳಿಕೆಯನ್ನು ಹೊಂದಿರುವ ಜಿಲ್ಲೆ ಶಿವಮೊಗ್ಗ. ಇಂತಹ ಶಿವಮೊಗ್ಗ ಜಿಲ್ಲೆಯ ರಾಜಕೀಯ ನಾಯಕರು ಸಕ್ರಿಯ ರಾಜಕಾರಣದಲ್ಲಿ ತೊಡಗಿಸಿಕೊಂಡು ಸದಾ ಸದ್ದು ಮಾಡುತ್ತಿರುತ್ತಾರೆ. ಕಳೆದ ವಿಧಾನಸಭಾ ಚುನಾವಣೆಯಿಂದ ಬಿಜೆಪಿಯಿಂದ ದೂರವಾಗಿದ್ದ ಕೆ.ಎಸ್. ಈಶ್ವರಪ್ಪ ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್‌ನ್ನು ಅಧಿಕೃತವಾಗಿ ಆರಂಭಿಸಿದ್ದಾರೆ. ಹಿಂದುಳಿದ ವರ್ಗಗಳ ಸಂಘಟನೆ ಎಂದು ಮೇಲ್ನೋಟಕ್ಕೆ ಈ ಬ್ರಿಗೇಡ್ ಕಂಡರೂ, ಇದರ ಉದ್ದೇಶ ಶಕ್ತಿ ಪ್ರದರ್ಶನ ಎಂಬುದು ಎಲ್ಲಿರಿಗೂ ತಿಳಿದಿದೆ.

ರಾಜಕೀಯ ವಲಯದಲ್ಲಿ ಸಾಕಷ್ಟು ಸದ್ದು ಮಾಡಿರುವ ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ನೇತೃತ್ವದ ಕ್ರಾಂತಿವೀರ ಬ್ರಿಗೇಡ್ ಭವಿಷ್ಯದಲ್ಲಿ ಏನೇನೂ ಕಮಾಲ್ ಮಾಡಲಿದೆ ಎಂಬುದನ್ನು ಈಗಲೇ ಸ್ಪಷ್ಟವಾಗಿ ಹೇಳಲು ಸಾಧ್ಯವಾಗದಿದ್ದರೂ, ಲೋಕಸಭೆ ಚುನಾವಣೆಯಲ್ಲಿ ಕುಸಿದ ರಾಜಕೀಯದ ಗ್ರಾಫ್ ಏರಿಸಿಕೊಳ್ಳುವ ಪ್ರಯತ್ನವಂತು ಕೆಎಸ್‌ಈ ಅವರಿಂದ ನಡೆಯಲಿದೆ. 8 ವರ್ಷಗಳ ಹಿಂದೆ ರಾಯಣ್ಣ ಬ್ರಿಗೇಡ್ ಆರಂಭಕ್ಕೆ ಮುನ್ನುಡಿ ಬರೆದಿದ್ದ ಈಶ್ವರಪ್ಪ ಇದೀಗ ಮತ್ತೊಮ್ಮೆ ಕ್ರಾಂತಿವೀರ ಬ್ರಿಗೇಡ್ ಹೆಸರಲ್ಲಿ ಶಕ್ತಿ ಪ್ರದರ್ಶನ ಮಾಡಿದ್ದಾರೆ.

ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಅನಿವಾರ್ಯವಾಗಿ ಚುನಾವಣಾ ರಾಜಕೀಯಕ್ಕೆ ವಿದಾಯ ಹೇಳಿದ್ದ ಈಶ್ವರಪ್ಪ, ಪುತ್ರ ಕೆ.ಇ. ಕಾಂತೇಶ್‌ಗೆ ಹಾವೇರಿ ಲೋಕಸಭಾ ಕ್ಷೇತ್ರದಿಂದ ಟಿಕೆಟ್ ಸಿಗುವ ನಿರೀಕ್ಷೆಯಲ್ಲಿದ್ದರು. ಆ ಮೂಲಕ ಪುತ್ರನನ್ನು ರಾಜಕೀಯವಾಗಿ ದಡ ಸೇರಿಸಲು ಇಚ್ಚಿಸಿದ್ದರು. ಆದರೆ ಲೋಕಸಭೆ ಚುನಾವಣೆಯಲ್ಲಿ ಕಾಂತೇಶ್‌ಗೆ ಟಿಕೆಟ್ ಸಿಗದ ಕಾರಣಕ್ಕೆ ಸಿಟ್ಟಿಗೆದ್ದು ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಪಕ್ಷೇತರರಾಗಿ ಕಣಕ್ಕಿಳಿದರು. ಆದರೆ ಅವರಿಗೆ ಪ್ರಚಾರದ ವೇಳೆ ಸಿಕ್ಕ ಬೆಂಬಲ ಮತಗಳಾಗಿ ಪರಿವರ್ತನೆಯಾಗಲಿಲ್ಲ. ಹೀನಾಯ ಸೋಲು ಕಂಡ ಅವರು ಸುಮ್ಮನೆ ಕೂರಲಿಲ್ಲ. ಕಾಂತ್ರಿವೀರ ಬ್ರಿಗೇಡ್ ಮೂಲಕ ಮತ್ತೊಮ್ಮೆ ಅದೃಷ್ಟ ಪರೀ–ಕ್ಷೆಗೆ ಇಳಿದಿದ್ದಾರೆ. ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳೇ ಬ್ರಿಗೇಡ್‌ಗೆ ವೇದಿಕೆಯಾಗಲಿವೆ. ಪಟ್ಟಣ ಪಂಚಾಯ್ತಿ, ನಗರ ಸ್ಥಳೀಯ ಸಂಸ್ಥೆ, ಜಿಪಂ, ತಾಪಂ, ಶಿವಮೊಗ್ಗ ಮಹಾನಗರ ಪಾಲಿಕೆ ಚುನಾವಣೆಗಳಲ್ಲಿ ಬ್ರಿಗೇಡ್ ಬೆಂಬಲಿತರನ್ನು ಕಣಕ್ಕಿಳಿಸುವುದು ನಿಶ್ಚಿತ ಎನ್ನಲಾಗಿದೆ.

## ಹಾದಿ ಬೀದಿಯಲ್ಲಿ ಮಾತನಾಡದಂತೆ ಬಿಜೆಪಿ ನಾಯಕರಿಗೆ ಹೈ ಕಮಾಂಡ್ ಸೂಚನೆ

**ಬೆಂಗಳೂರು,ಫೆ.7:** ಪಕ್ಷದ ಅಧ್ಯಕ್ಷರ ಆಯ್ಕೆ ಸೇರಿದಂತೆ ಹಲವು ವಿಚಾರದಲ್ಲಿ ರಾಜ್ಯ ಬಿಜೆಪಿಯಲ್ಲಿ ಉಂಟಾಗಿರುವ ಭಿನ್ನಮತ ಶಮನಕ್ಕೆ ಮದ್ದು ಅರೆದಿರುವ ಹೈಕಮಾಂಡ್ ಗಂಭೀರವಾಗಿ ವರ್ತಿಸಿ ಎಂದು ರಾಜ ನಾಯಕರಿಗೆ ತಾಕೀತು ಮಾಡಿದೆ.

ಬಿಕ್ಕಟ್ಟು ತೀವ್ರ ಸ್ವರೂಪ ಪಡೆದ ಹಿನ್ನೆಲೆಯಲ್ಲಿ ದಿಡೀರ್ ಬೆಂಗಳೂರಿಗೆ ದೌಡಾಯಿಸಿದ ರಾಜ್ಯ ಬಿಜೆಪಿ ಸಹ ಉಸ್ತುವಾರಿ ಸುಧಾಕರ ರೆಡ್ಡಿ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್ ಅಶೋಕ್ ಸೇರಿದಂತೆ ಹಲವು ಮುಖಂಡರೊಂದಿಗೆ ಸುದೀರ್ಘ ಸಭೆ ನಡೆಸಿದರು. ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಬಿಜೆಪಿಯ ಎಲ್ಲಾ ನಾಯಕರು ಅತ್ಯಂತ ಸಂಯಮದಿಂದ ವರ್ತಿಸಬೇಕುನಾನು ಎ ಅಥವಾ ಬಿ ಅಂತ ಹೇಳುತ್ತಿಲ್ಲ. ಇದು ಪ್ರತಿಯೊಬ್ಬರಿಗೂ ಅನ್ವಯ ಆಗುತ್ತದೆ ಎಂದು ಹೇಳಿದರು ಗಂಭೀರತೆ ಹಾಗೂ ಶಾಂತಿಯನ್ನು ಕಾಪಾಡಿ. ಪ್ರತಿಯೊಬ್ಬರಿಗೆ ಗೌರವ ಕೊಡಿ. ಕಾರ್ಯಕರ್ತರಿಗೆ ಮತ್ತೊಮ್ಮೆ ಹೇಳುತ್ತೇನೆ. ಶಾಂತಿಯುತ ವಾತಾವರಣ ಕಾಪಾಡಿಕೊಳ್ಳಿ, ಸಹಭಾಗಿತ್ವ, ಅಣ್ಣತಮ್ಮರಂತಹ ವಾತಾವರಣ ನಿರ್ಮಿಸಿ ಎಂದು ಸಲಹೆ ಮಾಡಿದರು ಎಂತಹದ್ದೇ ಸಮಸ್ಯೆಯನ್ನಾದರೂ ಬಗೆಹರಿಸುವಂತಹ ನಾಯಕತ್ವ ನಮ್ಮಲ್ಲಿ ಇದೆ. ಪಕ್ಷ ಈ ಎಲ್ಲಾ ಸಮಸ್ಯೆಗಳ ಇತ್ಯರ್ಥಕ್ಕೆ ಮುಂದಾಗಲಿದೆ ಅಲ್ಲಿಯವರೆಗೆ ಯಾರೂ ಕೂಡ ಪಕ್ಷದ ಚೌಕಟ್ಟನ್ನು ಮೀರಿ ವರ್ತಿಸಬಾರದು ಎಂದು ಕಿವಿ ಮಾತು ಹೇಳಿದರು.

# ಇಂದಿನ ರಾಶಿ ಭವಿಷ್ಯ

## ಮೇಷ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ-ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ.

## ವೃಷಭ ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ನೀವು ಕೆಲವು ಪ್ರವಾಸೀ ತಾಣಗಳಿಗೆ ಭೇಟಿ ನೀಡುವ ಮೂಲಕ ನಿಮ್ಮ ಪ್ರೇಮ ಜೀವನವನ್ನು ಉಜ್ವಲಗೊಳಿಸಬಹುದು. ವ್ಯವಹಾರದ ಜೊತೆ ಸಂತೋಷವನ್ನು ಬೆರೆಸಬೇಡಿ.

## ಮಿಥುನ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಅದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.

## ಕರ್ಕ ರಾಶಿ

ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು.

## ಸಿಂಹ ರಾಶಿ

ನಿಮ್ಮ ಆಸಕ್ತಿಗಳನ್ನು ಮುಂದುವರಿಸಲು ಅಥವಾ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ.

## ಕನ್ಯಾ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ.

## ತುಲಾ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಪ್ರೇಮ ಪ್ರಕರಣದ ಬಗ್ಗೆ ಜೋರಾಗಿ ಹೇಳಿಕೊಳ್ಳಬೇಡಿ. ನೀವು ಇಂದು ಹಾಜರಾಗುವ ಉಪನ್ಯಾಸಗಳು ಮತ್ತು ವಿಚಾರಗೋಷ್ಠಿಗಳು ಬೆಳವಣಿಗೆಗೆ ಹೊಸ ವಿಚಾರಗಳನ್ನು ತರುತ್ತವೆ

## ವೃಶ್ಚಿಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

## ಧನು ರಾಶಿ

ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಪತ್ನಿಯೊಂದಿಗೆ ಜಗಳ ಮಾನಸಿಕ ಒತ್ತಡಕ್ಕೆ ಕಾರಣವಾಗಬಹುದು. ಅನವಶ್ಯಕ ಒತ್ತಡ ತೆಗೆದುಕೊಳ್ಳುವ ಅಗತ್ಯವಿಲ್ಲ. ಜೀವನದಲ್ಲಿ ಮಹತ್ವದ ವಿಷಯವೆಂದರೆ ನಾವು ಮಾರ್ಪಡಿಸಲು ಸಾಧ್ಯವಿಲ್ಲದ ವಿಷಯಗಳನ್ನು ಒಪ್ಪಿಕೊಳ್ಳಲು ಕಲಿಯುವುದಾಗಿದೆ. ನಿಮ್ಮ ಸಂಗಾತಿ ನಿಮ್ಮ ಬಗ್ಗೆ ಒಳ್ಳೆಯದನ್ನು ಯೋಚಿಸುತ್ತಾನೆ, ಆದ್ದರಿಂದ ಕೆಲವೊಮ್ಮೆ ನಿಮ್ಮ ಮೇಲೆ ಕೋಪವನ್ನು ಸಹ ತೋರಿಸಬಹುದು.

## ಮಕರ ರಾಶಿ

ಧ್ಯಾನ ಪರಿಹಾರ ತರುತ್ತದೆ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ನಿಮ್ಮ ಪ್ರಿಯತಮೆಯ ಜೊತೆ ತಿಳುವಳಿಕೆ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ. ನೀವು ನಿಮ್ಮ ಮನೆಯ ಕಿರಿಯ ಸದಸ್ಯರೊಂದಿಗೆ ಸಮಯವನ್ನು ಕಳೆಯುವುದು ಕಲಿಯಬೇಕು.

## ಕುಂಭ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ - ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ. ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ.

## ಮೀನ ರಾಶಿ

ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.

# ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ ಪ್ರತಿಭಟನೆ



**ಚಿಕ್ಕಮಗಳೂರು:** ಸಮರ್ಪಕ ಕುಡಿಯುವ ನೀರು, ಯುಜಿಡಿ ವ್ಯವಸ್ಥೆ ಸೇರಿದಂತೆ ಹಲವು ಕನಿಷ್ಠ ಮೂಲಭೂತ ಸೌಕರ್ಯಗಳನ್ನು ನೀಡುವಂತೆ ಆಗ್ರಹಿಸಿ ನಗರಸಭೆ ಕಚೇರಿಯ ಆವರಣದಲ್ಲಿ ವಾರ್ಡ್ ಸಂಖ್ಯೆ ಹನ್ನೊಂದರ ನಿವಾಸಿಗಳು ಕರ್ನಾಟಕ ರಕ್ಷಣಾ ವೇದಿಕೆಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದವು.ಸ್ಥಳೀಯ ನಿವಾಸಿ ರಾಘವೇಂದ್ರ ಅವರು ಮಾತನಾಡಿ ನಗರಸಭೆಯ ಜನಪ್ರತಿನಿಧಿಗಳು ಕೇವಲ ಉದ್ಘಾಟನೆಗೆ ಹಾಗೂ ಚುನಾವಣೆಯಲ್ಲಿ ಗೆಲ್ಲಲು ಮಾತ್ರ ಸೀಮಿತವಾಗಿದ್ದು ಗೆದ್ದ ನಂತರ ವಾರ್ಡ್ ನ ಸಮಸ್ಯೆಗಳ ಬಗ್ಗೆ ಯಾವುದೇ ರೀತಿಯಲ್ಲಿ ಸ್ಪಂದಿಸದೆ ತಮ್ಮ ವಾರ್ಡ್ ನ ನಿವಾಸಿಗಳಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸಲು ವಿಫಲರಾಗಿದ್ದಾರೆ ಎಂದು ದೂರಿದರು. ಚುನಾವಣೆ ನಂತರ ಚುನಾಯಿತ ನಗರಸಭೆ ಸದಸ್ಯರು ನಾಪತ್ತೆಯಾಗಿದ್ದು ಕೂಡಲೇ ಅವರು ಪ್ರತಿಭಟನಾ ಸ್ಥಳಕ್ಕೆ ಆಗಮಿಸಬೇಕೆಂದು ಆಗ್ರಹಿಸಿ ಅವರ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದರು.ಕಳೆದ ಆರು ತಿಂಗಳಿಂದ ವಾರ್ಡ್ ಸಂಖ್ಯೆ ಹನ್ನೊಂದರ ದೀಪ ನರ್ಸಿಂಗ್ ಹೋಮ್‌ನಿಂದ ಬೈಪಾಸ್ ಗೆ ಸಂಪರ್ಕಿಸುವ ರಸ್ತೆಯ 5 ಮತ್ತು 6ನೇ ತಿರುವಿನಲ್ಲಿ ಯುಜಿಡಿ ವ್ಯವಸ್ಥೆ ಹದಗೆಟ್ಟಿದ್ದು ಕುಡಿಯುವ ನೀರಿನ ಸರಬರಾಜನಲ್ಲಿ ವ್ಯತ್ಯಾಸವಾಗಿರುತ್ತದೆ ಈ ಬಗ್ಗೆ ಸುಮಾರು 20 ಬಾರಿ ಸಂಬಂಧಪಟ್ಟ ನಗರ ಸಭೆ ಅಧಿಕಾರಿಗಳಿಗೆ ಮತ್ತು ಸ್ಥಳೀಯ ಜನಪ್ರತಿನಿಧಿಗಳಿಗೆ ದೂರ ನೀಡಿದರು ಸಹ ಯಾವುದೇ ರೀತಿಯ ಸಕಾರಾತ್ಮಕ ಸ್ಪಂದನೆ ನೀಡದಿರುವುದಕ್ಕೆ ಅಲ್ಲಿನ ನಿವಾಸಿಗಳು ಪ್ರತಿಭಟನೆ ಹಾದಿ ಹಿಡಿದಿದ್ದರು. ಕೂಡಲೇ ಕುಡಿಯುವ ನೀರಿನ ಸಂಪರ್ಕ ಹಾಗೂ ಯುಜಿಡಿ ವ್ಯವಸ್ಥೆ, ಸರಿಪಡಿಸದಿದ್ದರೆ ಈ ಪ್ರತಿಭಟನೆಯನ್ನು ಉಗ್ರರೂಪಕ್ಕೆ ಕೊಂಡೊಯ್ಯುವ ಎಚ್ಚರಿಕೆಯನ್ನು ಸಹ ನೀಡಿದರು.ಕೂಡಲೇ ಪ್ರತಿಭಟನಾಕಾರರನ್ನು ಭೇಟಿಯಾದ ನಗರಸಭೆ ಪೌರಾಯುಕ್ತರಾದ ಬಿಸಿ ಬಸವರಾಜ್ ಅವರು ಒಂದು ವಾರದಲ್ಲಿ ಯುಜಿಡಿ ವ್ಯವಸ್ಥೆ ಸರಿಪಡಿಸುವುದಾಗಿ ಭರವಸೆ ನೀಡಿ ನಾಳೆಯಿಂದಲೇ ಕುಡಿಯುವ ನೀರಿನ ಸಮಸ್ಯೆಯನ್ನು ಸರಿಪಡಿಸುವ ಭರವಸೆಯನ್ನು ನೀಡಿದರು.ನಂತರದಲ್ಲಿ ಪ್ರತಿಭಟನೆಯನ್ನು ಹಿಂಪಡೆದ ನಿವಾಸಿಗಳು ಸಮಸ್ಯೆ ವಾರದಲ್ಲಿ ಸರಿಹೋಗದಿದ್ದರೆ ಪ್ರತಿಭಟನೆಯ ದಿಕ್ಕು ಬದಲಿಸುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಗೌರವಾಧ್ಯಕ್ಷ ಪಂಚಾಕ್ಷರಿ, ಪ್ರಧಾನ ಕಾರ್ಯದರ್ಶಿ ನಾಗಲತ, ಕಾರ್ಯದರ್ಶಿ ಅಧ್ಯಕ್ಷರಾದ ಅನ್ನಪೂರ್ಣ, ತಾಲ್ಲೂಕು ಪೂರ್ಣಿಮಾ, ವಕ್ತಾರರಾದ ಕೋಟೆ ಸೋಮಣ್ಣ, ಭೂಮಿಕ ಸಂಸ್ಥೆಯ ಮುಖ್ಯಸ್ಥರದಾಸ ಅನಿಲ್ ಆನಂದ್ ಸೇರಿದಂತೆ ನಿವಾಸಿಗಳಾದ ಗೌರಮ್ಮ, ಪುಷ್ಪ, ನವೀನ, ಅಭಿ ಸೇರಿದಂತೆ ಹಲವರು ಇದ್ದರು

## ಮಾನ್ಯ ಗೌರವನ್ವಿತ 2ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ,

ಸಿ.ಆರ್.ಮಿಸ್.ನಂ: 107 /2025

**ಅರ್ಜಿದಾರರು:** 1) ಶ್ರೀಮತಿ ಗಿರಿಜಮ್ಮ ಕೋಂ ರೇವಣಸಿದ್ದಪ್ಪ ವಯಸ್ಸು 63ವರ್ಷ ವಾಸ: 12ನೇ ಕ್ರಾಸ್, ಭರತ್ ಕಾಲೋನಿ, ದಾವಣಗೆರೆ.2) ಚನ್ನಬಸಮ್ಮ ಕೋಂ ವೀರಪ್ಪ ವಯಸ್ಸು 64ವರ್ಷ ವಾಸ: ಕಂದನಕೋವಿ, ಅಣಜಿ, ದಾವಣಗೆರೆ ತಾ. 3) ದೇವಿರಮ್ಮ ಕೋಂ ನಾಗೇಶಪ್ಪ ವಯಸ್ಸು 54 ವರ್ಷ ವಾಸ: ಬೂದಾಲ್ ರಸ್ತೆ, ಎಸ್ ಪಿ ಎಸ್ ನಗರ, ದಾವಣಗೆರೆ.

**ವಿರುದ್ಧ**

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು ಮಹಾನಗರ ಪಾಲಿಕೆ ಕಛೇರಿ, ದಾವಣಗೆರೆ,

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ತಾಯಿ ಶ್ರೀಮತಿ ಸಂಗನಬಸಮ್ಮ ಕೋಂ ಲೇಟ್ ಶಂಬಣ್ಣ ಇವರು ದಿನಾಂಕ: 03-04-2008 ರಂದು, ದಾವಣಗೆರೆ ಸಿಟಿ, ಎವಿಕೆ ಕಾಲೇಜ್ ರಸ್ತೆ, ಅಶ್ವಿನಿ ನರ್ಸಿಂಗ್ ಹೋಂ ಆಸ್ಪತ್ರೆಯಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 17-3-25 ರಂದು ಬೆಳಗ್ಗೆ 11-00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ.

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ: 6-2-25.ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಶ್ರೀ ಅರುಣ್ ಕುಮಾರ್ ಎಮ್
ಅರ್ಜಿದಾರರ ಪರ ವಕೀಲರು

ಸಹಿ/-
ಶಿರಸ್ತೇದಾರರು
ಮಾನ್ಯ 2ನೇ ಹೆಚ್ಚುವರಿ ಸಿವಿಲ್ ಮತ್ತು
ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ

## ಮಾನ್ಯ ಗೌರವನ್ವಿತ 2ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ,

ಸಿ.ಆರ್.ಮಿಸ್.ನಂ: 108 /2025

**ಅರ್ಜಿದಾರರು:** 1) ಶ್ರೀಮತಿ ದಾಕ್ಷಯಣಮ್ಮ ಕೋಂ ಲೇಟ್ ಸಿದ್ದಬಸಪ್ಪ ವಯಸ್ಸು 67 ವರ್ಷ ವಾಸ: ಜುಬ್ಲಿಬಾವಿ ರಸ್ತೆ, ದಾವಣಗೆರೆ 2) ಶ್ರೀಮತಿ ಗಿರಿಜಮ್ಮ ಕೋಂ ರೇವಣ ಸಿದ್ದಪ್ಪ ವಯಸ್ಸು 63ವರ್ಷ ವಾಸ: 12ನೇ ಕ್ರಾಸ್, ಭರತ್ ಕಾಲೋನಿ, ದಾವಣಗೆರೆ.3) ಚನ್ನಬಸಮ್ಮ ಕೋಂ ವೀರಪ್ಪ ವಯಸ್ಸು 64ವರ್ಷ ವಾಸ: ಕಂದನಕೋವಿ, ಅಣಜಿ, ದಾವಣಗೆರೆ ತಾ. 4) ದೇವಿರಮ್ಮ ಕೋಂ ನಾಗೇಶಪ್ಪವಯಸ್ಸು 54 ವರ್ಷವಾಸ: ಬೂದಾಲ್ ರಸ್ತೆ, ಎಸ್ ಪಿ ಎಸ್ ನಗರ, ದಾವಣಗೆರೆ.5 ) ರೇವಣಸಿದ್ದಪ್ಪ ಬಿನ್ ಲೇಟ್ ಬಸಪ್ಪ ವಯಸ್ಸು 65 ವರ್ಷ ವಾಸ: ಭರತ್ ಕಾಲೋನಿ, ದಾವಣಗೆರೆ.

**ವಿರುದ್ಧ**

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು ಮಹಾನಗರ ಪಾಲಿಕೆ ಕಛೇರಿ, ದಾವಣಗೆರೆ,

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು 1ನೇ ಅರ್ಜಿದಾರರ ಅತ್ತೆ, 2 ರಿಂದ 4ನೇ ಅರ್ಜಿದಾರರ ಅಜ್ಜಿ, 5ನೇ ಅರ್ಜಿದಾರರ ತಾಯಿ ಶ್ರೀಮತಿ ಗೌರಮ್ಮ ಕೋಂ ಬಸಪ್ಪ ಇವರು ದಿನಾಂಕ: 17-12-1987ರಂದು, ದಾವಣಗೆರೆ ಸಿಟಿ, ಎಸ್ ಎಸ್ ಎಮ್ ಸಿ ಹೆಚ್ ಆಸ್ಪತ್ರೆಯಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 17-3-25 ರಂದು ಬೆಳಗ್ಗೆ 11=00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ: 6-2-25.ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಶ್ರೀ ಅರುಣ್ ಕುಮಾರ್ ಎಮ್
ಅರ್ಜಿದಾರರ ಪರ ವಕೀಲರು

ಸಹಿ/-
ಶಿರಸ್ತೇದಾರರು
ಮಾನ್ಯ 2ನೇ ಹೆಚ್ಚುವರಿ ಸಿವಿಲ್ ಮತ್ತು
ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ

## ಪುರಸಭಾ ಕಾರ್ಯಾಲಯ ಚನ್ನಗಿರಿ- 77213

ಕ್ರಮಾಂಕ:ಚ.ಪು/ಇತರೆ/ಸಿಆರ್/01/2024-25 ದಿನಾಂಕ: 06-02-2025

**ಬಹಿರಂಗ ಹರಾಜು ಪ್ರಕಟಣೆ**

**(ಕ.ಪೌ.ಅ-1964 ರ ಪ್ರ-72 (1) ಮತ್ತು (2) ಹಾಗೂ Municipsl(Guidance of Copies and Misc Provision) Rules 1966 ರ ನಿಯಮ 39 ರ ಪ್ರಕಾರ )**

ಈ ಮೂಲಕ ಚನ್ನಗಿರಿಯ ಸಮಸ್ತ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ, 2025-26ನೇ ಸಾಲಿನ ಪಟ್ಟಣದ ವ್ಯಾಪ್ತಿಯಲ್ಲಿನ 1) ವಾರದ ಸಂತೆ, 2) ಪೆಟ್ಟಿಗೆ ಅಂಗಡಿಗಳ ವಸೂಲಾತಿ ಮಾಡುವ ಹಕ್ಕಿನ ಬಹಿರಂಗ ಹರಾಜನ್ನು ದಿನಾಂಕ: 25-02-2025ನೇ ಮಂಗಳವಾರ ಬೆಳಗ್ಗೆ 11-30 ಗಂಟೆಗೆ ಸರಿಯಾಗಿ ಪುರಸಭೆ ಕಛೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರಯುಕ್ತ ಹರಾಜಿನಲ್ಲಿ ಭಾಗವಹಿಸಲು ಆಸಕ್ತಿಉಳ್ಳವರು ದಿನಾಂಕ: 21-02-2025 ರಂದು ಸಂಜೆ 5-00 ಗಂಟೆ ಒಳಗಾಗಿ ಈ ಕೆಳಕಂಡ ಕೊಷ್ಠಕದಲ್ಲಿ ನಮೂದಿಸಿರುವಂತೆ ಠೇವಣಿ ಮೊತ್ತವನ್ನು ಮುಖ್ಯಾಧಿಕಾರಿ ಪುರಸಭೆ ಚನ್ನಗಿರಿ ರವರ ಹೆಸರಿಗೆ ಡಿ.ಡಿ. ರೂಪದಲ್ಲಿ ಮಾತ್ರ ನಿಗಧಿತ ಅರ್ಜಿಯೊಂದಿಗೆ ಪ್ರತ್ಯೇಕವಾಗಿ ಕಛೇರಿಗೆ ಸಲ್ಲಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಕೋರಿದೆ. ಒಂದು ವೇಳೆ ತಡವಾಗಿ ಬಂದ ಡಿ.ಡಿ. ಗಳನ್ನು ಸ್ವೀಕರಿಸುವುದಿಲ್ಲ ಹಾಗೂ ನಗದು ಮತ್ತು ಚೆಕ್‌ಗಳನ್ನು ಸ್ವೀಕರಿಸುವುದಿಲ್ಲ ಹೆಚ್ಚಿನ ಮಾಹಿತಿಯನ್ನು ಹಾಗೂ ಕರಪತ್ರಗಳನ್ನು ಕಛೇರಿ ವೇಳೆಯಲ್ಲಿ ಕಂದಾಯ ವಿಭಾಗದಲ್ಲಿ ಪಡೆಯಬಹುದಾಗಿದೆ.

| ಕ್ರ ಸಂ | ವಿವರ | ಹರಾಜು ಸಮಯ | ಠೇವಣಿ ಮೊತ್ತ |
|---|---|---|---|
| 1 | ವಾರದ ಸಂತೆ ಶುಲ್ಕ ವಸೂಲಾತಿ ಹಕ್ಕು | ಬೆಳಗ್ಗೆ 11-30 ರಿಂದ ಪ್ರಾರಂಭವಾಗುವುದು | 1,00,000-00 |
| 2 | ಪೆಟ್ಟಿಗೆ ಅಂಗಡಿ ನೆಲಬಾಡಿಗೆ ಶುಲ್ಕ ವಸೂಲಿ ಹಕ್ಕು | | 50,000-00 |

ಸಹಿ/-
ಆಡಳಿತಾಧಿಕಾರಿಗಳು
ಪುರಸಭೆ ಚನ್ನಗಿರಿ

ಸಹಿ/-
ಮುಖ್ಯಾಧಿಕಾರಿ
ಪುರಸಭೆ ಚನ್ನಗಿರಿ

# ರೋಗಿಗಳಿಗೆ ಸ್ಪಂದಿಸಿ ಉತ್ತಮ ಚಿಕಿತ್ಸೆ ನೀಡಲು ಸೂಚನೆ



**ಹಾಸನ :** ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಾಗದಂತೆ ನೋಡಿಕೊಳ್ಳಬೇಕು, ಆಸ್ಪತ್ರೆಗಳಿಗೆ ಬರುವಂತಹ ರೋಗಿಗಳಿಗೆ ಸಕಾಲದಲ್ಲಿ ಸ್ಪಂದಿಸಿ ಉತ್ತಮ ಚಿಕಿತ್ಸೆ ನೀಡುವಂತೆ ಅಪರ ಜಿಲ್ಲಾಧಿಕಾರಿ ಕೆ. ಟಿ ಶಾಂತಲಾ ಅವರು ಹೇಳಿದ್ದಾರೆ.ಹಾಸನ ತಾಲ್ಲೂಕಿನ ವ್ಯಾಪ್ತಿಯ ಕಂಚನಹಳ್ಳಿ, ಮೊಸಳೆ ಹೊಸಹಳ್ಳಿ, ಅಂಕಪುರ, ಕಾರ್ಲೆ, ಗೊರೂರು ಆರೋಗ್ಯ ಕೇಂದ್ರಗಳಿಗೆ ಇಂದು ಭೇಟಿ ನೀಡಿದ್ದರು.ಆಸ್ಪತ್ರೆಗಳಲ್ಲಿ ಬರುವಂತಹ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಬೇಕು, ಗ್ರಾಮೀಣ ಭಾಗದಿಂದ ಆಸ್ಪತ್ರೆಗಳಿಗೆ ಭೇಟಿ ನೀಡುವ ಜನರಿಗೆ ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.ಆಸ್ಪತ್ರೆ ಆವರಣ, ರೋಗಿಗಳು ಮತ್ತು ಸಿಬ್ಬಂದಿಗಳು ಉಪಯೋಗಿಸುವ ಶೌಚಾಲಯ ಸೇರಿದಂತೆ ಎಲ್ಲ ಕಡೆ ಹೆಚ್ಚಿನ ಸ್ವಚ್ಚತೆಯಿಂದ ಇಟ್ಟುಕೊಳ್ಳಬೇಕು ಹಾಗೂ ಸಾರ್ವಜನಿಕರಿಗೆ ಯಾವುದೇ ಕಾಯಿಲೆಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮವಹಿಸಬೇಕು ಎಂದರು.ಸಿಬ್ಬಂದಿಗಳ ಇ ಹಾಜರಾತಿ, ದಿನಚರಿ, ಆಸ್ಪತ್ರೆಯ ಸಾಮಾಗ್ರಿ ಪುಸ್ತಕ, ಔ?ಧಗಳ ಪಟ್ಟಿ ಸೇರಿದಂತೆ ಮುಂತಾದ ದಾಖಲೆಗಳನ್ನು ಪರಿಶೀಲಿಸಿದರು.ಆಸ್ಪತ್ರೆಗೆ ಬರುವಂತಹ ರೋಗಿಗಳಿಗೆ ಆತ್ಮಸ್ಥೈರ್ಯ ತುಂಬಬೇಕು ಜೊತೆಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಲಹೆ ಮಾರ್ಗದರ್ಶನ ನೀಡುವಂತೆ ಆರೋಗ್ಯ ಕೇಂದ್ರದ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಸೂಚಿಸಿದರು.

ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದರೆ ತಾಲ್ಲೂಕು ಅಥವಾ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳುವಂತೆ ತಿಳಿಸಿ ಎಂದು ಅವರು ಹೇಳಿದರು.ಇದೇ ವೇಳೆ ಹಾಸನ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾ ಹಕ ಅಧಿಕಾರಿ ಗಿರೀಶ್ ಹೆಚ್.ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳಾ ಹಾಗೂ ಮತ್ತಿತರರು ಹಾಜರಿದ್ದರು.

# ಮಾಧ್ಯಮ ಅಕಾಡೆಮಿಯಿಂದ ಪ್ರಥಮ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನವನ್ನು ಏರ್ಪಡಿಸಿದೆ.ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000/- ರೂ., 25,000/- ರೂ. ಹಾಗೂ 15,000/- ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ ಅತ್ಯುತ್ತಮ ಛಾಯಾಚಿತ್ರಗಳನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.ಸ್ಪರ್ಧೆಯ ಷರತ್ತುಗಳು: ಈ ಸ್ಪರ್ಧೆಗೆ ಪ್ರವೇಶಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್‌ಸೈಟ್ ನಲಿ ್ಲಇರುವ ನಿಗದಿತ ಅರ್ಜಿಯನ್ನು Down load ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್ಗಳನ್ನು photo.karnatakamediaacademy@gmail.com ಇ-ಮೇಲ್ ವಿಳಾಸಕ್ಕೆ ಫೆ.15 ರಂದು ಸಂಜೆ 5:00ಗಂಟೆ ಒಳಗಾಗಿ ಸಲ್ಲಿಸಬೇಕು, ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ,.

# ಪ್ರಶಸ್ತಿಗೆ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ, ಫೆ. 6: 2025-26ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಂ ರವರ 118ನೇ ಜನ್ಮ ದಿನಾಚರಣೆ ದಿನಾಂಕ:05/04/2025 ಮತ್ತು ಡಾ. ಬಿ.ಆರ್.ಅಂಬೇಡ್ಕರ್ ರವರ 134 ಜನ್ಮ ದಿನಾಚರಣೆಯನ್ನು ದಿನಾಂಕ:14/04/2025 ರಂದು ರಾಜ್ಯ ಮಟ್ಟದಲ್ಲಿ ಸರ್ಕಾರದ ವತಿಯಿಂದ ಆಚರಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ, ಶ್ರಮಿಸಿ ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2025-26ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಂ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಉದ್ದೇಶಿಸಿದ್ದು, ಅದರಂತೆ ಡಾ. ಬಾಬು ಜಗಜೀವನರಾಂ ಹಾಗೂ ಡಾ. ಬಿ.ಆರ್.ಅಂಬೇಡ್ಕರ್ ರವರ ಪ್ರಶಸ್ತಿಗಳಿಗೆ ಸರ್ಕಾರದ ಮಾರ್ಗಸೂಚಿಗಳನ್ವಯ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಬ್ಬ ವ್ಯಕ್ತಿ ಒಂದು ಪ್ರಶಸ್ತಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿದಾರರ ವಯಸ್ಸು ಕನಿಷ್ಠ 35 ವರ್ಷಗಳಾಗಿರತಕ್ಕದ್ದು. ಪ್ರಶಸ್ತಿಗೆ ಯಾವುದೇ ಜನಾಂಗದ ವ್ಯಕ್ತಿ ಅರ್ಜಿ ಸಲ್ಲಿಸಬಹುದು. ಪ್ರಶಸ್ತಿಯು ಪ್ರಶಂಸಾ ಪತ್ರ, ಶಾಲು, ಗಂಧದ ಹಾರ, ಫಲ-ಪುಷ್ಪ ಹಾಗೂ ರೂ. 25,000/- ಗಳ ಮೊತ್ತದ ನಗದನ್ನು ಒಳಗೊಂಡಿರುತ್ತದೆ. ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ವ್ಯಕ್ತಿಯು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರಬಾರದು.ಒಬ್ಬ ವ್ಯಕ್ತಿ ಒಂದು ಪ್ರಶಸ್ತಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿದಾರರ ವಯಸ್ಸು ಕನಿಷ್ಠ 35 ವರ್ಷಗಳಾಗಿರತಕ್ಕದ್ದು. ಪ್ರಶಸ್ತಿಗೆ ಯಾವುದೇ ಜನಾಂಗದ ವ್ಯಕ್ತಿ ಅರ್ಜಿ ಸಲ್ಲಿಸಬಹುದು. ಪ್ರಶಸ್ತಿಯು ಪ್ರಶಂಸಾ ಪತ್ರ, ಶಾಲು, ಗಂಧದ ಹಾರ, ಫಲ-ಪುಷ್ಪ ಹಾಗೂ ರೂ. 25,000/- ಗಳ ಮೊತ್ತದ ನಗದನ್ನು ಒಳಗೊಂಡಿರುತ್ತದೆ. ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ವ್ಯಕ್ತಿಯು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರಬಾರದು.

ಈ ಸಂಬಂಧವಾಗಿ ಇಚ್ಛೆಯುಳ್ಳವರು ಅರ್ಜಿಗಳನ್ನು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರಿಂದ ಅರ್ಜಿ ಪಡೆದು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕಚೇರಿ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ:ಎಸ್.ಬಿ-11, ಇಲ್ಲಿಗೆ ಫೆಬ್ರವರಿ 25 ರ ಸಂಜೆ 5:30 ರ ಒಳಗಾಗಿ ಮುದ್ದಾಂ ಸಲ್ಲಿಸುವುದು ಹಾಗೂ ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ದೂರವಾಣಿ ಸಂಖ್ಯೆ:08156-277116 ಗೆ ಸಂಪರ್ಕಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ಹೆಸರು ನೋಂದಣಿಗೆ ಅವಕಾಶ

**ಚಿಕ್ಕಬಳ್ಳಾಪುರ:** ಜಿಲ್ಲಾ ಪಂಚಾಯತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ರವರ ವತಿಯಿಂದ ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಪ್ರತ್ಯೇಕವಾಗಿ ಪಿ.ಯು.ಸಿ, ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸಲು ಒಂದು ದಿನದ ತರಬೇತಿ ಕಾರ್ಯಗಾರವನ್ನು ಇದೇ ತಿಂಗಳಲ್ಲಿ ಆಯೋಜಿಸಲು ಉದ್ದೇಶಿಸಿದ್ದು, ಆಸಕ್ತ ಚಿಕ್ಕಬಳ್ಳಾಪುರ ಜಿಲ್ಲೆಯ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಫೆಬ್ರವರಿ 10 ರ ಒಳಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಖುದ್ದು ಭೇಟಿ ನೀಡಿ ಅಥವಾ ದೂರವಾಣಿ ಸಂಖ್ಯೆ: 08156-270054 ನ್ನು ಸಂಪರ್ಕಿಸಿ ಹೆಸರುಗಳನ್ನು ನೋಂದಣಿ ಮಾಡಿಕೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಎನ್.ಎಂ ಜಗದೀಶ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ

**ಬೆಂಗಳೂರು:** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತೀ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರ ವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ನಾಡಿನ ಪ್ರಕಾಶಕರು / ಮಾರಾಟಗರಾರು ನಿಗದಿತ ಅರ್ಜಿ ನಮೂನೆಯನ್ನು ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಇವರಿಂದ ಅಥವಾ ವಿಧಾನ ಸಭೆ ಸಚಿವಾಲಯದ ವೆಬ್ ಸೈಟ್ www.kla.kar.nic.in ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ಮಾರಾಟಗಾರರು ಮಳಿಗೆಯೊಂದಕ್ಕೆ ರೂ.1,000/-ಗಳ ಭದ್ರತಾ ಠೇವಣಿ ಡಿ.ಡಿ ಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು.

# ಹಾಸನ ಜಿಲ್ಲೆಗೆ ನರೇಗಾ ಪ್ರಶಸ್ತಿ

**ಹಾಸನ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಫೆ.5 ರಂದು ಬೆಂಗಳೂರಿನ ವಸಂತ ನಗರದ ಡಾ. ಬಿ.ಆರ್ ಅಂಬೇಡ್ಕರ್ ಮೆಮೋರಿಯಲ್ ಟ್ರಸ್ಟ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ನರೇಗಾ ಹಬ್ಬ-2025 ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ 2023-24 ನೇ ಸಾಲಿನಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಿಸಿರುವುದಕ್ಕಾಗಿ ಹಾಸನ ಜಿಲ್ಲೆಗೆ ನರೇಗಾ ಪ್ರಶಸ್ತಿಯನ್ನು ನೀಡಿದ್ದಾರೆ.

ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಪೂರ್ಣಿಮಾ ಬಿ ಆರ್ ಅವರು ತೋಟಗಾರಿಕೆ, ಅರಣ್ಯ, ಕೃಷಿ ಮತ್ತು ಜಲಾನಯನ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಶಸ್ತಿ ಸ್ವೀಕರಿಸಿದರು.

ತೋಟಗಾರಿಕೆ, ಅರಣ್ಯ ಹಾಗೂ ಕೃಷಿ ಮತ್ತು ಜಲಾನಯನ ಇಲಾಖೆಗೆ ಅತ್ಯುತ್ತಮ ಒಗ್ಗೂಡಿಸುವಿಕೆ ಜಿಲ್ಲಾ ಪುರಸ್ಕಾರ ಮತ್ತು ಚನ್ನರಾಯಪಟ್ಟಣ ತಾಲ್ಲೂಕಿನ ಬೆಕ್ಕ ಗ್ರಾಮ ಪಂಚಾಯಿತಿಗೆ ಅತ್ಯುತ್ತಮ ಗ್ರಾಮ ಪಂಚಾಯಿತಿ ಪುರಸ್ಕಾರ ದೊರೆತಿವೆ.

## ಫೆ.10 ರಂದು ಕೆ.ಡಿ.ಪಿ ಸಭೆ

**ಹಾಸನ :** ಶಾಸಕರಾದ ಹೆಚ್.ಡಿ ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಹೊಳೆನರಸೀಪುರ ತಾಲ್ಲೂಕು ಪಂಚಾಯಿತಿಯ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಫೆ.10 ರಂದು ಬೆಳಿಗ್ಗೆ 10 ಗಂಟೆಗೆ ಪುರಸಭೆ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ವಾಹನ ಸವಾರರೇ ಎಚ್ಚರ ಸಿಸಿ ಟಿವಿ ಕಣ್ಗಾವಲಿದೆ, ದಂಡದಿಂದ ತಪ್ಪಿಸಿಕೊಳ್ಳಲಾಗದು : ರೆಡ್ ಸಿಗ್ನಲ್ ಜಂಪ್ ಒಂದೇ ಗಂಟೆಯಲ್ಲಿ 10 ಸಾವಿರ ದಂಡ

**ದಾವಣಗೆರೆ:** ದಾವಣಗೆರೆ ಸ್ಮಾರ್ಟ್ ಸಿಟಿಯಾಗಿದ್ದು ನಗರದಲ್ಲಿ ಸುಸಜ್ಜಿತವಾಗ ರಸ್ತೆಗಳ ನಿರ್ಮಾಣವಾಗಿದೆ. ಸಂಚಾರಿ ನಿಯಮಗಳ ಪಾಲನೆಗಾಗಿ ಸಿಗ್ನಲ್ ಅಳವಡಿಕೆ ಮಾಡಿದ್ದರೂ ಉಲ್ಲಂಘನೆ ಮಾಡಿ ಸಂಚರಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದ್ದು ನಿಯಮ ಪಾಲನೆ ಮಾಡದ ಸವಾರರಿಗೆ ದಂಡ ಅನಿವಾರ್ಯವಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ.

ದಾವಣಗೆರೆ ನಗರದ ಶಾಮನೂರು ರಿಂಗ್ ರಸ್ತೆಯಲ್ಲಿನ ಶಾರದಾಂಬ ದೇವಸ್ಥಾನ ಬಳಿಯ ಹಾಗೂ ರವೀಂದ್ರನಾಥ ವೃತ್ತ ಸೇರಿದಂತೆ ಇನ್ನಿತರೆ ವೃತ್ತಗಳಲ್ಲಿ ಗುರುವಾರ ಬೆಳಗ್ಗೆ 9 ಗಂಟೆಯ ವೇಳೆಯಲ್ಲಿ ಸಿಗ್ನಲ್ ಜಂಪ್ ಮಾಡಿ ಸಂಚರಿಸಿದ ಸವಾರರಿಗೆ ಒಂದೇ ಗಂಟೆಯಲ್ಲಿ 10 ಸಾವಿರಕ್ಕಿಂತಲೂ ಹೆಚ್ಚಿನ ದಂಡ ಹಾಕಲಾಗಿದೆ.

ಕೆಲವು ದ್ವಿಚಕ್ರ ವಾಹನ ಸವಾರರು ವಿಮುಖವಾಗಿ ಸಂಚರಿಸುವುದು ಕಂಡು ಬರುತ್ತಿದ್ದರೆ, ಕೆಲವು ವಾಹನ ಸವಾರರು ಹೆಲ್ಮೆಟ್ ಧರಿಸದೇ ವಾಹನ ಚಲಾಯಿಸುವುದನ್ನು ಗಮನಿಸಲಾಗಿದೆ. ಮತ್ತು ಯಾವುದೇ ಸೂಚನೆಯನ್ನು ನೀಡದೇ ಮತ್ತು ಹಿಂದಿನ ವಾಹನಗಳನ್ನು ಗಮನಿಸದೇ

ತಿರುವು ಪಡೆಯುವುದು ಸಹ ಅಪಘಾತಕ್ಕೆ ಕಾರಣವಾಗಿದ್ದು ಅಪಘಾತಗಳನ್ನು ಗಣನೀಯವಾಗಿ ತಗ್ಗಿಸುವ ಉದ್ದೇಶದಿಂದ ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಅನುಷ್ಠಾನ ಮಾಡಲಾಗುತ್ತಿದೆ. ಸಂಚಾರಿ ನಿಯಮಗಳನ್ನು ಉಲ್ಲಂಘನೆ ಮಾಡುವವರು ಸೇರಿದಂತೆ ವೃತ್ತಗಳಲ್ಲಿ ಸಿಗ್ನಲ್ ಜಂಪ್ ಮಾಡಿ ಸಂಚರಿಸಿದಲ್ಲಿ ದಂಡ ಕಟ್ಟಿಟ್ಟಬುತ್ತಿಯಾಗಿದೆ.

ಸ್ಮಾರ್ಟ್‌ಸಿಟಿ ಕಮಾಂಡ್ ಸೆಂಟರ್ನಲ್ಲಿ ಸೆರೆ; ವಾಹನ ಸವಾರರು ಸಿಗ್ನಲ್ ಜಂಪ್ ಮಾಡುವುದು ಸೇರಿದಂತೆ ಯಾವುದೇ ಉಲ್ಲಂಘನೆಯ ಪ್ರಕರಣಗಳು ಕಂಡು ಬಂದಲ್ಲಿ ಅದೆಲ್ಲವೂ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿರುತ್ತದೆ. ನಗರದಲ್ಲಿ 525 ಕ್ಕೂ ಹೆಚ್ಚು ಹೈ ರೆಜುಲೂಷನ್ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇದರ ಸಂಪೂರ್ಣ ಡಾಟಾವನ್ನು ಸಂರಕ್ಷಣೆ ಮಾಡಲಾಗುತ್ತದೆ. ಯಾವುದೇ ವೃತ್ತ, ರಸ್ತೆಯಲ್ಲಿ ಸಂಚಾರಿ ನಿಯಮಗಳು ಉಲ್ಲಂಘನೆಯಾದರೂ ಸೆರೆಯಾಗುತ್ತದೆ.ಸಂಚಾರಿ ನಿಯಮ ಜಾಗೃತಿ; ಜಿಲ್ಲೆಯಲ್ಲಿ ಕಳೆದ ವರ್ಷದಲ್ಲಿ 300 ಕ್ಕಿಂತ ಹೆಚ್ಚು ಜನರು ಅಪಘಾತ ಪ್ರಕರಣಗಳಲ್ಲಿ ಅಸುನೀಗಿದ್ದು ಇದು ಈ ವರ್ಷ ತಗ್ಗಿದೆ. ಅಪಘಾತ ಪ್ರಕರಣಗಳನ್ನು ಎರಡಂಕಿಗೆ ಇಳಿಸುವ ಉದ್ದೇಶದಿಂದ ಸಂಚಾರಿ ನಿಯಮಗಳ ಪಾಲನೆಯನ್ನು ಕಠಿಣಗೊಳಿಸಲಾಗುತ್ತಿದೆ. ಈಗಾಗಲೇ ಆಟೋ ಚಾಲಕರು, ಖಾಸಗಿ ಶಾಲಾ ಬಸ್ ಚಾಲಕರು, ಕೆಎಸ್‌ಆರ್‌ಟಿಸಿ ಬಸ್ ಚಾಲಕರ ಸಭೆ ಮಾಡಿ ಅರಿವು ಮೂಡಿಸಲಾಗಿದೆ. ನಗರದಲ್ಲಿ ವಿವಿಧ ಆಟೋ ಸಂಘಗಳೊಂದಿಗೂ ಮತ್ತು ಗೂಡ್ ಆಟೋ, ಲಾರಿ ಮಾಲೀಕರ ಸಂಘಗಳೊಂದಿಗೂ ಸಭೆ ನಡೆಸುವ ಮೂಲಕ ಜಾಗೃತಿ ಮೂಡಿಸಲಾಗುತ್ತದೆ ಎಂದು ತಿಳಿಸಿದರು.

## ವಿಜಯೇಂದ್ರ ವಿರುದ್ಧ ದೂರು ನೀಡಲು ಯತ್ನಾಳ್ ನೇತೃತ್ವದ ಭಿನ್ನಮತೀಯರ ಬಣ ದೆಹಲಿಗೆ

**ಬೆಂಗಳೂರು:** ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕೆಳಗಿಳಿಸಬೇಕೆಂದು ಆಗ್ರಹಿಸುತ್ತಿರುವ ಯತ್ನಾಳ್ ನೇತೃತ್ವದ ಬಿಜೆಪಿಯ ಭಿನ್ನಮತೀಯ ನಾಯಕರು ಇಂದು ದೆಹಲಿಗೆ ತೆರಳಿದ್ದಾರೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್, ಶಾಸಕ ಬಿ.ಪಿ. ಹರೀಶ್, ಮಾಜಿ ಸಚಿವರಾದ ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ, ಕುಮಾರ ಬಂಗಾರಪ್ಪ, ಮುಖ್ಯಮಂತ್ರಿಗಳ ಮಾಜಿ ರಾಜಕೀಯ ಕಾರ್ಯದರ್ಶಿ ಎನ್.ಆರ್. ಸಂತೋಷ್ ಸೇರಿದಂತೆ ಹಲವು ಮಂದಿ ಭಿನ್ನಮತೀಯ ನಾಯಕರು ಇನ್ನು ಮೂರು ದಿನ ದೆಹಲಿಯಲ್ಲೇ ಉಳಿಯುವ ಈ ಭಿನ್ನಮತೀಯ ನಾಯಕರು ಕೇಂದ್ರದ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ದಾಸ್ ಸೇರಿದಂತೆ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಸರ್ವಾಧಿಕಾರಿ ಧೋರಣೆ ಹೊಂದಿದ್ದಾರೆ. ಅವರನ್ನು ಮತ್ತೆ ಅಧ್ಯಕ್ಷರನ್ನಾಗಿ ಮುಂದುವರೆಸಿದರೆ ಪಕ್ಷ ಸಂಘಟನೆ ಸಾಧ್ಯವಿಲ್ಲ ಎಂದು ದೂರು ನೀಡಲಿದ್ದಾರೆ.

## ರೈತಸಂಘದ ಮುಖಂಡರಿಂದಲೇ ರೈತರ ಮೇಲಿನ ದೌರ್ಜನ್ಯ

**ಮೂಡಿಗೆರೆ:** ರೈತ ಸಂಘದ ಹೆಸರಿನಲ್ಲಿ ರೈತ ಮುಖಂಡರೋರ್ವರು ತಮ್ಮ ವೈಯಕ್ತಿಕ ಕಾರಣ–ಕ್ಕಾಗಿ ರೈತರ ಮೇಲೆಯೇ ದೌರ್ಜನ್ಯ ಎಸಗುತ್ತಿದ್ದಾರೆ. ಇದನ್ನು ಕೂಡಲೇ ನಿಲ್ಲಿಸಲು ಪೊಲೀಸರು ಕ್ರಮ ವಹಿಸಬೇಕೆಂದು ಪಿ.ಎ.ಪುಟ್ಟಸ್ವಾಮಿಗೌಡ ಒತ್ತಾಯಿಸಿದರು. ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮಂಜುನಾಥ ಎಂಬುವರು ರೈತ ಸಂಘದ ಹೆಸರಿನಲ್ಲಿ ತನ್ನ ವೈಯಕ್ತಿಕ ವಿಚಾರಕ್ಕೆ ಧರಣಿ ಕೂತು ಅಧಿಕಾರಿಗಳನ್ನು ಹೆದರಿಸುವ ಕಾರ್ಯ ಮಾಡುತ್ತಿದ್ದಾರೆ. ನಿರಂತರವಾಗಿ ಸ್ಥಳೀಯ ರೈತರ ಮೇಲೆ ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದರು. ಇದಕ್ಕೆ ಸಾಕ್ಷಿಯಾಗಿ ಕಡಿದಾಳು ಗ್ರಾಮದ ಸರ್ವೆ ನಂ76ರಲ್ಲಿ ಪೂರ್ವಿಕರ ಕಾಲದಿಂದಲೂ ಅನುಭವವಿರುವ ಹಾಗೂ ನಮ್ಮ ಹೆಸರಿನಲ್ಲಿ ಖಾತೆ ಹೊಂದಿರುವ ಕಾಫಿ ತೋಟ 76 ವರ್ಷದ ಹಿಂದೆ–ಯೇ ಪೋಡು ಆಗಿ, ಗಡಿ ಗುರುತು ಮಾಡಲಾಗಿದೆ. ಈ ಜಾಗ ತನಗೆ ಸೇರಿದ್ದೆಂದು ಮಂಜುನಾಥ್ ಅವರು ತನ್ನ ತೋಟಕ್ಕೆ ಅತಿಕ್ರಮ ಪ್ರವೇಶ ಮಾಡಿ ಸುಮಾರು 60 ವರ್ಷ ಹಳೆಯದಾದ 300ಕ್ಕೂ ಅಧಿಕ ಕಾಫಿ ಗಿಡಗಳನ್ನು ಕಡಿದು ಹಾಕಿದ್ದಾರೆ. ಅಲ್ಲದೇ ಕಾಫಿ ತೋಟದ ಬೇಲಿಯನ್ನು ಕೂಡ ಕಿತ್ತಿದ್ದಾರೆ. ಇದರಿಂದ ಸುಮಾರು 5 ಲಕ್ಷ ರೂ. ನಷ್ಟ ಉಂಟಾಗಿದೆ ಎಂದು ದೂರಿದರು.ನಮ್ಮ ಜಮೀನಿಗೆ ಸಂಬಂಧಿಸಿದಂತೆ 76 ವರ್ಷ ಹಿಂದೆ ಆಗಿದ್ದ ಪೋಡಿಯನ್ನು ಅಧಿಕಾರಿಗಳ ಮೇಲೆ ಒತ್ತಡ ಹಾಕಿ ರದ್ದು ಮಾಡಿಸಿದ್ದಾರೆ. ಇದರ ವಿರುದ್ಧ ನಾವು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಹಾಕಿದ್ದೇವೆ. ಈ ಕಾರಣಕ್ಕೆ ಮಂಜುನಾಥ ಅವರು ಗೂಂಡಗಳನ್ನು ಕರೆತಂದು ನಮ್ಮ ತೋಟದ ಗಿಡಗಳನ್ನು ಕಡಿದು ಹಾಕಿದ್ದಾರೆ ಎಂದು ದೂರಿದರು..ಅಲ್ಲದೇ ಬಿಳ್ಳೂರು ಗ್ರಾಮದಲ್ಲಿ ರಸ್ತೆ ಗಡಿಭಾಗವನ್ನು ಬಿಟ್ಟು ಕಾನೂನು ಬದ್ದವಾಗಿ ಕಟ್ಟಡ ಕಟ್ಟುತ್ತಿದ್ದರೂ, ವೈಯುಕ್ತಿಕ ದ್ವೇಷದಿಂದ ಪಿಡಬ್ಲೂಡಿ ಇಲಾಖೆ ಅಧಿಕಾರಿಗಳಿಗೆ ಕಟ್ಟಡದ ಬಗ್ಗೆ ಅನಾವಶ್ಯಕವಾಗಿ ದೂರು ನೀಡಿ ತೊಂದರೆ ನೀಡುತ್ತಿದ್ದಾರೆ. ಹಾಗಾಗಿ ಅವರ ರೈತರ ಮೇಲಾಗುತ್ತಿರುವ ನಿರಂತರ ದಬ್ಬಾಳಿಕೆ ಕೊನೆಯಾಗಬೇಕು. ಮಂಜುನಾಥ್ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪೊಲೀಸರಿಗೆ ದೂರು ಕೂಡ ನೀಡಲಾಗಿದೆ ಎಂದರು. ಗೋಷ್ಠಿಯಲ್ಲಿ ಮೋಹನ್ ಸಾಲಿಗೆರೆ, ಎಸ್.ಎ.ವಾಸುದೇವ, ಸಾಹೀರ್ ವಿ. ಹೊಗಳೆ ಇದ್ದರು.

## ಮೈಕ್ರೋ ಫೈನಾನ್ಸ್ ಕಿರುಕುಳ ವಿರೋಧಿಸಿ ನಗರದಲ್ಲಿ ಬೃಹತ್ ಪ್ರತಿಭಟನೆ

**ಚಿಕ್ಕಮಗಳೂರು:** ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಕಡಿವಾಣ ಹಾಕುವಂತೆ ಆಗ್ರಹಿಸಿ ರಾಜ್ಯ ರೈತ ಸಂಘದ ಜಿಲ್ಲಾ ಶಾಖೆ ಫೆ.10 ರಂದು ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದೆಂದು ರೈತ ಸಂಘದ ನೂತನ ಜಿಲ್ಲಾಧ್ಯಕ್ಷ ಡಿ.ಮಹೇಶ್ ತಿಳಿಸಿದರು. ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಬೆಳಗ್ಗೆ 11 ಗಂಟೆಗೆ ತಾಲ್ಲೂಕು ಕಚೇರಿ ಆವರಣದಿಂದ ಮೆರವಣಿಗೆ ಹೊರಟು ಎಂಜಿ ರಸ್ತೆ ಮೂಲಕ ಸಾಗಿ ಆಜಾದ್ ವೃತ್ತದಲ್ಲಿ ಸಮಾವೇಶಗೊಂಡು ಪ್ರತಿಭಟನೆ ನಡೆಸಿ, ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದೆಂದು ತಿಳಿಸಿದರು.ರೈತರಿಗೆ ನೀಡುತ್ತಿದ್ದ ಸಾಲದ ಮೊತ್ತವನ್ನು ನಬಾರ್ಡ್ ಶೇ.60ರಷ್ಟು ಕಡಿತಗೊಳಿಸಿರುವುದನ್ನು ವಿರೋಧಿಸಲಾಗುವುದು. ರೈತರ ಹಕ್ಕನ್ನು ಕಸಿದುಕೊಳ್ಳುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಈ ಪ್ರತಿಭಟನೆಯನ್ನು ರಾಜ್ಯ ಸಂಘದ ಕರೆಯ ಮೇರೆಗೆ ಹಮ್ಮಿಕೊಳ್ಳಲಾಗಿದೆ ಎಂದರು.ರೈತರಿಗೆ ಕೊಡಬೇಕಾಗಿದ್ದ ಸಾಲದ ಮೊತ್ತದಲ್ಲಿ ಶೇ.60ರಷ್ಟು ಕಡಿತಗೊಳಿಸುವ ಮೂಲಕ ರೈತರ ಮರಣ ಶಾಸನ ಮಾಡಲಾಗಿದೆ. ರೈತ ಬೆಳೆ ಬೆಳೆಯಲು ಇದರಿಂದ ತುಂಬಾ ತೊಂದರೆ–ಯಾಗುತ್ತಿದ್ದು, ರೈತರು ಬೆಳೆದ ಬೆಳೆಗೆ ಸರಿಯಾದ ಬೆಂಬಲ ಬೆಲೆ ಇಲ್ಲ ಎಂದು ಆರೋಪಿಸಿ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ಹೆಚ್ಚಾಗುತ್ತಿದ್ದು, ಅತೀ ಹೆಚ್ಚು ಬಡ್ಡಿ ದರದಲ್ಲಿ ರೈತರಿಗೆ ಸಾಲ ನೀಡಿ ದಿವಾಳಿ ಮಾಡಲಾಗುತ್ತಿದೆ. ಇದರಿಂದ ಸಾಲ ಪಡೆದ ರೈತರು ಆರ್‌ಬಿಐ ನೀಡಿರುವ ನಿಬಂಧನೆಗಳನ್ನು ಮೀರಿ ಬಡ್ಡಿ ವಸೂಲಿ ಮಾಡುತ್ತಿರುವುದರಿಂದ ಹೆಂಗಸರು ಮಕ್ಕಳು ಆತ್ಮಹತ್ಯೆ ದಾರಿ ಹಿಡಿಯುತ್ತಿದ್ದಾರೆಂದು ದೂರಿದರು.ರೈತ ಸಂಘದ ಮಾಜಿ ಜಿಲ್ಲಾಧ್ಯಕ್ಷ ಗುರುಶಾಂತಪ್ಪ ರೈತ ಸಂಘದ ರಾಜ್ಯ ವರಿಷ್ಠ ಕೆ.ಕೆ.



# ಮಲೆನಾಡಿನಲ್ಲಿ ಮಾಯವಾಗುತ್ತಿವೆ ಕೆರೆಗಳು

**ಶಿವಮೊಗ್ಗ:** ಜಿಲ್ಲೆಯಲ್ಲಿ ಒಟ್ಟು 6,803 ಕೆರೆಗಳಿದ್ದು, ಇವುಗಳ ವಿಸ್ತೀರ್ಣ 51,368 ಎಕರೆಯಾಗಿದೆ. 2,341 ಕೆರೆಗಳ ಸರ್ವೆ ನಡೆಸಿದ್ದರೂ ಇನ್ನೂ 470 ಕೆರೆಗಳ ಒತ್ತುವರಿ ತೆರವಿಗೆ ಕಾಲ ಕೂಡಿ ಬಂದಿಲ್ಲ.

ಕೆರೆಗಳ ಜಾಗದಲ್ಲಿ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಮನೆಗಳು, ವಾಣಿಜ್ಯ ಸಂಕೀರ್ಣಗಳು ತಲೆ ಎತ್ತಿವೆ. ಗ್ರಾಮೀಣ ಭಾಗದಲ್ಲಿ ಬಹಳಷ್ಟು ಕಡೆಗಳಲ್ಲಿ ಕೆರೆ ಒತ್ತುವರಿಯಾದ ಜಾಗದಲ್ಲಿ ಜನರು ಸಾಗುವಳಿ ಮಾಡಿಕೊಂಡಿದ್ದಾರೆ. ಸಾಗುವಳಿ ಭೂಮಿ ತೆರವು ಕಷ್ಟಸಾಧ್ಯವಾಗಿದೆ. ವರ್ಷದಿಂದ ವರ್ಷಕ್ಕೆ ಕೆರೆಯ ವಿಸ್ತೀರ್ಣ ಕಡಿಮೆಯಾಗುತ್ತಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಕೆರೆಗಳು ಆರ್‌ಟಿಸಿಯಲ್ಲಿ ಮಾತ್ರ ಉಳಿದುಕೊಳ್ಳುವ ಭೀತಿ ಎದುರಾಗಿದೆ. ಜಿಲ್ಲೆಯಲ್ಲಿ ಕೆರೆ ಒತ್ತುವರಿ ತೆರವು ಪ್ರಕ್ರಿಯೆ ಮಂದಗತಿಯಲ್ಲಿ ಸಾಗುತ್ತಿದೆ. ಇಲಾ ಖೆಗಳ ನಡುವಿನ ಸಮನ್ವಯದ ಕೊರತೆ ಕಾರಣದಿಂದ ಕೆರೆಗಳ ಮಾಲಿಕತ್ವ ಗುರುತಿಸುವುದೂ ಸವಾಲಾಗಿದೆ.ಸ್ಥಳೀಯ ರಾಜಕೀಯ ಒತ್ತಡ, ಒತ್ತುವರಿದಾರರ ಪ್ರಭಾವ, ಇಲಾಖೆಯಲ್ಲಿ ಸಿಬ್ಬಂದಿ ಕೊರತೆ, ಒತ್ತುವರಿ ತೆರವು ಮಾಡಿ ಕೆರೆ ಅಭಿ ವೃದ್ಧಿಪಡಿಸಲು ಸ್ಥಳೀಯ ಸಂಸ್ಥೆಗಳಲ್ಲಿ ಆರ್ಥಿಕ ಮುಗ್ಗಟ್ಟು ಒತ್ತುವರಿ ತೆರವಿಗೆ ಅಡಚಣೆಯಾಗಿ ಪರಿಣಮಿಸಿದೆ.

ಈ ಹಿಂದೆ ಲೋಕಾಯುಕ್ತರಾಗಿದ್ದ ವಿಶ್ವನಾಥಶೆಟ್ಟಿ ಜಿಲ್ಲೆಯ ಕೆರೆ ಒತ್ತುವರಿ ತೆರವು ನಿಧಾನಗತಿಯಲ್ಲಿ ಸಾಗುತ್ತಿರುವುದನ್ನು ಗಮನಿಸಿ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಎಲ್ಲ ತಹಸೀಲ್ದಾರ್‌ಗಳಿಗೆ ನೋಟಿಸ್ ಜಾರಿ ಮಾಡಿದ್ದರು. ಆಗ ಒತ್ತುವರಿ ತೆರವಿಗೆ ಸ್ವಲ್ಪ ಬಿಸಿ ಮುಟ್ಟಿತ್ತು. ಮತ್ತೆ ತೆರವು ಕಾರ್ಯಾಚರಣೆ ಯಥಾಸ್ಥಿತಿಗೆ ಮರಳಿದೆ.

ಹೀಗಾಗಿ ಕೆರೆಯಂಗಳ, ಅಂಚಿನಲ್ಲಿ ಕೃಷಿ ಚಟುವಟಿಕೆಗಳು ನಿರಾತಂಕವಾಗಿ ನಡೆಯುತ್ತಿವೆ. ಜಿಲ್ಲಾಡಳಿತ ತೆರವಿಗೆ ಮುಂದಾದ ಸಂದರ್ಭದಲ್ಲಿ ಅನೇಕ ಸಮಸ್ಯೆ ಎದುರಿಸಬೇಕಾಗುತ್ತಿದೆ. ರಾಜಕೀಯ ಒತ್ತಡದಿಂದ ಆರಂಭವಾಗಿ ಕಾನೂನಾತ್ಮಕ ತೊಡಕಗಳು ಉದ್ಭವಿಸುತ್ತಿವೆ. ಹೀಗಾಗಿ ಜಿಲ್ಲೆಯಲ್ಲಿ ಕೆರೆ ಒತ್ತುವರಿ ತೆರವು ಕಾರ್ಯಾಚರಣೆಗೆ ಹೆಚ್ಚು ವೇಗ ಸಿಗುತ್ತಿಲ್ಲ.

### ಪಾಲಿಕೆ ವ್ಯಾಪ್ತಿಯಲ್ಲಿ ಕಬಳಿಕೆ

ಶಿವಮೊಗ್ಗ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸರ್ವೆಯಾಗಿರುವ 66 ಕೆರೆಗಳ ಒಟ್ಟು ವಿಸ್ತೀರ್ಣ 479 ಎಕರೆ. ಈ ಪೈಕಿ 93.87 ಎಕರೆ ಕೆರೆ ಪ್ರದೇಶ ಒತ್ತುವರಿಯಾಗಿದೆ. ಈ ಭೂಮಿಯ ಇಂದಿನ ಮಾರುಕಟ್ಟೆ ಮೌಲ್ಯ ನೂರಾರು ಕೋಟಿ ರೂ. ಹರಿಗೆ ಸರ್ವೆ ನಂ 14ರ 115.14 ಎಕರೆ ಪ್ರದೇಶದಲ್ಲಿರುವ ವಿಸ್ತಾರವಾದ ಕೆರೆಯೂ ಒತ್ತುವರಿಯಾಗಿದೆ. ಆದರೆ ಇದರ ನಿರ್ಧಿಷ್ಟ ಸರ್ವೆಗೆ ಅಗತ್ಯವಿರುವ ನಕ್ಷೆಯೇ ಜಿಲ್ಲಾಡಳಿತದ ಬಳಿಯಿಲ್ಲ.

ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇನ್ನೂ 42 ಕೆರೆಗಳ ಸರ್ವೆ ಕಾರ್ಯ ಬಾಕಿಯಿದೆ. ಸರ್ವೆ ಬಳಿಕ ಪಾಲಿಕೆ ವ್ಯಾಪ್ತಿಯಲ್ಲಿರುವ ಒತ್ತುವರಿಯಾಗಿರುವ ಕೆರೆಗಳ ಒಟ್ಟು ವಿಸ್ತೀರ್ಣ ಅಂತಿಮವಾಗಲಿದೆ. ವಿಶೇಷವೆಂದರೆ ಕೆಲ ಕೆರೆಗಳು ಸಂಪೂರ್ಣ ಗುಳುಂ ಆಗಿವೆ. ಗೋಪಶೆಟ್ಟಿ ಸರ್ವೆ ನಂ 35ರಲ್ಲಿ 4.11 ಎಕರೆ ಸರ್ಕಾರಿ ಕೆರೆ ಈಗ ಸಂಪೂರ್ಣವಾಗಿ ಗದ್ದೆ, ತೋಟವಾಗಿ ಪರಿವರ್ತನೆಯಾಗಿದೆ. ಕ್ಲಬ್‌ಗಳು ತಲೆ ಎತ್ತಿವೆ.

### ಮಾಲಿಕತ್ವದ ಸಮಸ್ಯೆ

ಕೆರೆಗಳ ಒತ್ತುವರಿ ಗುರುತಿಸುವ ಮುನ್ನ ಅದರ ಮಾಲೀಕತ್ವ ಗುರುತಿಸುವುದು ಅತೀ ಮುಖ್ಯ. ಒತ್ತುವರಿ ತೆರವು ವೇಳೆ ಅತಿಕ್ರಮಣದಾರರು ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದರೆ ಆಗ ನಿಜವಾದ ಹಕ್ಕುದಾರರೇ ನ್ಯಾಯಾಲಯದಲ್ಲಿ ಹಕ್ಕು ಪ್ರತಿಪಾದಿಸಬೇಕಾಗುತ್ತದೆ. ಇಲ್ಲದಿದ್ದರೆ ಎಲ್ಲಾ ಪ್ರಯತ್ನವೂ ವಿಫಲವಾಗಲಿದೆ. ಹೀಗಾಗಿ ಮೊದಲು ಮಾಲಿಕತ್ವ ಗುರುತಿಸುವ ಕೆಲಸವಾಗಬೇಕಿದೆ.

ಇನ್ನು ಪಾಲಿಕೆ ವ್ಯಾಪ್ತಿಯಲ್ಲಿರುವ ಕೆರೆಗಳ ಪೈಕಿ ಎಷ್ಟು ಕೆರೆಗಳಿಗೆ ಪಾಲಿಕೆಯ ಮಾಲೀಕತ್ವ ಇದೆ ಎಂಬ ಬಗ್ಗೆಯೂ ಮಾಹಿತಿ ಕಲೆ ಹಾಕಬೇಕಿದೆ. ಜಿಪಂ, ಸಣ್ಣ ನೀರಾವರಿ ಇಲಾಖೆಗಳ ವ್ಯಾಪ್ತಿಯ ಕೆರೆಗಳನ್ನು ಗುರುತಿಸಬೇಕಿದೆ. ಈ ಕಾರ್ಯ ನಡೆಯದೇ ಸರ್ವೆ ನಡೆಸಿ ಒತ್ತುವರಿ ತೆರವು ಅಸಾಧ್ಯ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

### ಒತ್ತುವರಿಗಿದೆ ಕಠಿಣ ಶಿಕ್ಷೆ

ಕೆರೆಯ ವ್ಯಾಪ್ತಿಯಲ್ಲಿ ಯಾವುದಾದರೂ ನಿರ್ಮಾಣ ಕಾಮಗಾರಿ ಮಾಡಿದ್ದರೆ, ಯಾವುದಾದರೂ ಬೆಳೆಗಳನ್ನು ಬೆಳೆದಿದ್ದರೆ ನೋಟಿಸ್ ತಲುಪಿದ 30 ದಿನದೊ ಳಗೆ ಅದನ್ನು ತೆರವುಗೊಳಿಸಬೇಕು. ಇಲ್ಲದಿದ್ದರೆ ಪ್ರಾಧಿಕಾರವೇ ಸ್ವಯಂ ಪ್ರೇರಿತ ವಾಗಿ ಅದನ್ನು ತೆರವುಗೊಳಿಸಲಿದೆ. ಅದರ ವೆಚ್ಚವನ್ನು ಒತ್ತುವರಿದಾರರೇ ಭರಿಸ ಬೇಕಾಗುತ್ತದೆ. ನಿಷೇಧಿತ ಚಟುವಟಿಕೆ ನಡೆಸಿದವರಿಗೆ ಕನಿಷ್ಠ ಆರು ತಿಂಗಳು, ಗರಿಷ್ಠ ಎರಡು ವರ್ಷದವರೆಗೆ ಜೈಲು ಶಿಕ್ಷೆ ವಿಧಿಸಬಹುದಾಗಿದೆ. ಒತ್ತುವರಿ ತೆರವಿಗೆ ಮುಂದಾಗುವ ಪ್ರಾಧಿಕಾರದ ಅಧಿಕಾರಿಯ ಕೆಲಸಕ್ಕೆ ಹಸ್ತಕ್ಷೇಪ ಮಾಡಿದರೆ ಒಂದು ವರ್ಷದ ಜೈಲು ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಲು ಅವಕಾಶವಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಯೇ ಉಸ್ತುವಾರಿ











# ಗರಿಗೆದರಿದ ಬಿದಿರು ನಗರ ಕನಸು

**ಬೆಂಗಳೂರು:** ಹುಟ್ಟುತ್ತಾ ಹುಲ್ಲಾದ, ಬೆಳೆಯುತ್ತಾ ಮರವಾದ, ಕಜ್ಜಾಯದ ಬುಟ್ಟಿಯಾದ, ಹತ್ತುವವರಿಗೆ ಏಣಿಯಾದ, ಸತ್ತವರಿಗೆ ಚಟ್ಟವಾದ ಬಿದಿರನ್ನು ಬೆಂಗಳೂರಿನಲ್ಲಿಯೂನಳನಳಿಸುವಂತೆಮಾಡುವ ಕನಸು ಗರಿಗೆದರಿದೆ. ಬಿದಿರು ಬೆಳೆಸುವ ಮತ್ತು ಬಳಸುವ ಪ್ರಕ್ರಿಯೆಗಳು ಹೆಚ್ಚಾಗುತ್ತಿವೆ.

ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ 2ನೇ ಟರ್ಮಿನಲ್ ಅನ್ನು ಬಿದಿರಿನಿಂದ ಆಕರ್ಷಕವಾಗಿ ಒಳವಿನ್ಯಾಸಮಾಡಿರುವುದು ವಿಶ್ವಮಟ್ಟದಲ್ಲಿ ಗಮನಸೆಳೆಯಿತು. ಅತಿ ಭದ್ರತೆಯ, ಅತಿ ಸೂಕ್ಷ್ಮ ಪ್ರದೇ ಶವಾಗಿರುವ ವಿಮಾನ ನಿಲ್ದಾಣದಲ್ಲಿಯೇ ಬಿದಿರು ಬಳಸಬಹುದಾದರೆ, ಮೆಟ್ರೊ ನಿಲ್ದಾಣಗಳಲ್ಲಿ, ಕಚೇರಿಗಳಲ್ಲಿ ಯಾಕೆ ಬಳಸಬಾರದು ಎಂಬ ಪ್ರಶ್ನೆಯನ್ನು ಬಿದಿರು ಸೊಸೈಟಿ ಆಫ್ ಇಂಡಿಯಾ(ಬಿಎಸ್‌ಐ), ಬಿಬಿಎಂಪಿ ಮತ್ತು ಬಿಎಂಆರ್‌ಸಿಎಲ್ ಎದುರು ಇಟ್ಟಿತು. ಬಿಎಸ್‌ಐ ಮಾತಿಗೆ ಎರಡೂ ಸಂಸ್ಥೆಗಳು ಸಕಾರಾತ್ಮಕವಾಗಿ ಸ್ಪಂದಿಸಿದವು. ಈಗ 'ಮೆಟ್ರೊ ವ್ಯಾಪ್ತಿ'ಯಲ್ಲಿ ಬಿದಿರು ನೆಡುವ, ಬಿದಿರಿನಿಂದ ಬಿಬಿಎಂಪಿ ಕಚೇರಿ, ಮೆಟ್ರೊ ನಿಲ್ದಾಣಗಳನ್ನು ವಿನ್ಯಾಸಗೊಳಿಸುವಯೋ ಜನೆಗಳು ರೂಪುಗೊಂಡಿವೆ.





ಪ್ರಾಥಮಿಕವಾಗಿ, ಬಿಬಿಎಂಪಿಯ ಅರಣ್ಯ ವಿಭಾಗದ ಕಚೇ ರಿಯ ಒಳಾಂ ಗಣ ವಿನ್ಯಾಸವನ್ನು ಬಿದಿರಿನಿಂದ ಮಾಡಲು ಯೋಜಿಸಲಾಗಿದೆ. 'ನಮ್ಮ ಮೆಟ್ರೊ'ದ ಪಾಟರಿ ಟೌನ್ ಮತ್ತು ಗೊಟ್ಟಿಗೆರೆ ನಿಲ್ದಾಣಗಳನ್ನು ಬಿದಿರಿನಿಂದ ವಿನ್ಯಾಸಗೊಳಿಸಬೇಕು ಎಂದು ಬಿದಿರು ಸೊಸೈಟಿ ಬೇಡಿಕೆ ಇಟ್ಟಿದೆ. ಮೊದಲ ಹಂತದಲ್ಲಿ ಬಿಎಂಆರ್‌ಸಿಎಲ್, ಪಾಟರಿ ಟೌನ್ ಮೆಟ್ರೊ ನಿಲ್ದಾಣವನ್ನು ಬಿದಿರಿನ ಅಲಂಕಾರದೊಂದಿಗೆ ನಿರ್ಮಿಸಲು ನಿರ್ಧರಿಸಿದೆ. ಮೆಟ್ರೊ ಮಾರ್ಗದಲ್ಲಿ ಅವಕಾಶ ಇರುವಲ್ಲೆಲ್ಲ ಬಿದಿರು ಬೆಳೆಯಲು ಬಿದಿರು ಸೊಸೈಟಿ ಕೇಳಿಕೊಂಡಿದೆ.



ಕೇಂದ್ರೀಯ ರೇಷ್ಮೆ ಮಂಡಳಿಯಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ನೀಲಿ ಮಾರ್ಗದಲ್ಲಿ ಮಾರತ್ತಹಳ್ಳಿಯಲ್ಲಿ ಎರಡು ಕಿಲೋ ಮೀಟರ್‌ನಷ್ಟು ಉದ್ದಕ್ಕೆ ಮೆಟ್ರೊ ಮಾರ್ಗದ ಅಡಿಯಲ್ಲಿ ಬಿದಿರು ಬೆಳೆಸುವ ಯೋಜನೆ ರೂಪಿಸಲಾಗಿದೆ. ಇಲ್ಲಿ 650 ಬಿದಿರಿನ ಗಿಡಗಳು ಬೆಳೆಯಲಿವೆ. ಬನ್ನೇರುಘಟ್ಟ ರಸ್ತೆಯಲ್ಲಿ ಜಯದೇವ ಆಸ್ಪತ್ರೆಯಿಂದ ಮುಂದಕ್ಕೆ ಮೀನಾಕ್ಷಿ ದೇವಸ್ಥಾನದವರೆಗೆ ಮೆಟ್ರೊ ಮಾರ್ಗದ ಅಡಿಯಲ್ಲಿ ಬಿದಿರು ಬೆಳೆಸುವ ಪ್ರಸ್ತಾವ ಕೂಡ ಇದೆ.

30 ಸಾವಿರ ಗಿಡ: ನಗರದ ಪಾರ್ಕ್‌ಗಳಲ್ಲಿ, ಕೆರೆಗಳ ಸುತ್ತ ಇರುವ ನಡಿಗೆ ಪಥದ ಇಕ್ಕೆಲಗಳಲ್ಲಿ ಮುಂದಿನ ಮಳೆಗಾಲದಲ್ಲಿ 30 ಸಾವಿರ ಬಿದಿರು ಗಿಡ ನೆಡುವ ಯೋಜನೆಯನ್ನು ಬಿದಿರು ಸೊಸೈಟಿ ಹಾಕಿಕೊಂಡಿದೆ. ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್ ವಿದ್ಯಾರ್ಥಿಗಳು, ಗ್ರೀನ್ ಸ್ಕೂಲ್ನ ವಿದ್ಯಾರ್ಥಿಗಳು ಗಿಡಗಳನ್ನು ನೆಡಲಿದ್ದಾರೆ ಎಂದು ಸೊಸೈಟಿ ಅಧ್ಯಕ್ಷ ಪುನತಿ ಶ್ರೀಧರ್ ಮಾಹಿತಿ ನೀಡಿದರು.

## ನಗರದಲ್ಲಿ ಯಾವ ಬಿದಿರು?

ಮುಳ್ಳುಬಿದಿರು ಉಳಿದವುಗಳಿಗಿಂತ ಬಲಿಷ್ಠವಾಗಿದೆ ಮತ್ತು ಎತ್ತರಕ್ಕೆ ಬೆಳೆಯುತ್ತದೆ. ಆದರೆ, ಅದನ್ನು ನೆಟ್ಟು ಬೆಳೆಸುವುದು ಕಷ್ಟ. ಹಾಗಾಗಿ ನಗರಗಳಲ್ಲಿ ಮುಳ್ಳು ಬಿದಿರು ಬೆಳೆಸುವುದಿಲ್ಲ. 6 ರಿಂದ 7 ಅಡಿ ಹಾಗೂ 15ರಿಂದ 20 ಅಡಿ ಬೆಳೆಯುವ ಬಿದಿರು ಪ್ರಭೇದಗಳನ್ನು ಮಾತ್ರ ಮೆಟ್ರೊ ಎತ್ತರಿಸಿದ ಮಾರ್ಗಗಳ ಅಡಿಯಲ್ಲಿ ಬೆಳೆಸಲಾಗುತ್ತದೆ. ಪರಿಸರಕ್ಕೆ ಪೂರಕವಾದ ಬಿದಿರು, ಅಂದವನ್ನು ಹೆಚ್ಚಿಸುವ ಬಿದಿರು ನಗರದಲ್ಲಿ ಹೆಚ್ಚುತ್ತಿರುವುದು, ಮನೆಗಳ ಬಳಕೆಯಲ್ಲಿಯೂಉಪಯೋಗವಾಗುತ್ತಿರುವುದು ಉತ್ತಮ ಬೆಳವಣಿಗೆ. ಕಟ್ಟಡ ನಿರ್ಮಾಣ ಮಾಡುವಾಗ ಅಟ್ಟಣಿಗೆ–ಯಾಗಿ ಬಿದಿರನ್ನು ಬಳಕೆಮಾಡುವುದನ್ನು ಹೆಚ್ಚಿಸಬೇಕು. ಚರಂಡಿ ನಿರ್ಮಾಣದ ವೇಳೆ ಸಿಮೆಂಟ್ ಹಾಕುವಾಗ ಬಿದಿರು ಬಳಕೆಮಾಡಬಹುದು. ನಿರ್ಮಾಣ ಕಾರ್ಯಗಳಲ್ಲಿ ಬಿದಿರು ಬಳಕೆಗೆ ಹೆಚ್ಚಿನ ಅವಕಾಶವಿದೆ ಎಂದು ಬಿದಿರು ಪ್ರೇಮಿ ಎಲೆಕ್ಟ್ರಾನಿಕ್ ಸಿಟಿಯ ಸೃಜನ್ ಪಿ. ತಿಳಿಸಿದರು.

–ಬಿದಿರಿನ ಬೈಸಿಕಲ್

ವರ್ತೂರಿನ ದಿ ಗ್ರೀನ್ ಸ್ಕೂಲ್ - ಬೆಂಗಳೂರು (ಟಿಜಿಎಸ್-ಬಿ) ಶಾಲೆ ತನ್ನ 'ಬ್ಯಾಂಬೂ 4 ಬೆಂಗಳೂರು' ಕಾರ್ಯಕ್ರಮದ ಭಾಗವಾಗಿ ವಿದ್ಯಾರ್ಥಿಗಳಿಗಾಗಿ ಬಿದಿರಿನ ಬೈಸಿಕಲ್ಗಳನ್ನು ತಯಾರಿಸಿದೆ. ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆಯವರೇ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು. ಬಿದಿರಿನ ಬೈಸಿಕಲ್ಗಳು 20 ರಿಂದ 30 ವರ್ಷಗಳವರೆಗೆ ಬಾಳಿಕೆ ಬರುತ್ತವೆ. 'ಜೀರೊ ಕಾರ್ಬನ್(ತಟಸ್ಥ ಇಂಗಾಲ)' ಶಾಲೆಯಾಗಿ ಮಾಡುವ ಯೋಜನೆಯ ಭಾಗವಾಗಿ ಪ್ರಾಚಾರ್ಯೆ ಉಷಾ ಅಯ್ಯರ್ ನೇತೃತ್ವದಲ್ಲಿ ಆರು ಬೈಸಿಕಲ್ಗಳನ್ನು ತಯಾರಿಸಲಾಗಿದೆ. ಕರಕುಶಲ ವಸ್ತುಗಳಿಗೆ ಬೇಡಿಕೆ ಪೀಠೋಪಕರಣಗಳು ನೆಲಹಾಸು ಗೋಡೆ ಅಲಂಕಾರ ವಸ್ತುಗಳು ಗಿಫ್ಟ್‌ಗಳು ದೀಪದ ಕಂಬ ಏಣಿ ತೊಟ್ಟಿಲು ಕೊಳಲು ಕುರ್ಚಿ ಮೇಜು ಚಾಪೆ ಬುಟ್ಟಿ ಶಾಮಿಯಾನ ಮೊರ ಮಂಕರಿ ಬೀಸಣಿಗೆ ಸಹಿತ ಬಿದಿರಿನ ಅನೇಕ ವಸ್ತುಗಳಿಗೆ ನಗರದಲ್ಲಿ ಬೇಡಿಕೆ ಹೆಚ್ಚಿದೆ. ಇದನ್ನು ಗಮನದಲ್ಲಿಟ್ಟುಕೊಂಡು 'ಹಸಿರು ಕಟ್ಟಡ ಸಾಮಗ್ರಿ ಮತ್ತು ತಂತ್ರಜ್ಞಾನ ಕೇಂದ್ರ- ಸಿಜಿಬಿಎಂಟಿ'ಯುಬಿದಿರಿನಿಂದ ಕರಕುಶಲ ಮತ್ತು ನಿರ್ಮಾಣ ಸಾಮಗ್ರಿಗಳ ವಿನ್ಯಾಸ ಕಾರ್ಯಾ ಗಾರವನ್ನು ಆಗಾಗ ನಡೆಸಿ ಕೌಶಲ ಹೆಚ್ಚಿಸುವ ಕೆಲಸಮಾಡುತ್ತಿದೆ.

ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಸ್. ಮಹೇಶ್ವರ ರಾವ್ ತಿಳಿಸಿದರು. 'ನಮ್ಮ ಮೆಟ್ರೊ ಮತ್ತು ಮುಖ್ಯ ವಾಸ್ತುಶಿಲ್ಪಿಗಳೊಂದಿಗೆ ಸಮಾಲೋ ಚನೆ ನಡೆಯುತ್ತಿದೆ. ಅವರು ವಿನ್ಯಾಸ ಅಂತಿಮಗೊಳಿಸಲಿದ್ದಾರೆ' ಎಂದು ನಮ್ಮ ಮೆಟ್ರೊ ಗುಲಾಬಿ ಮಾರ್ಗದ ಮುಖ್ಯ ಎಂಜಿನಿಯರ್ ದಯಾನಂದ ಶೆಟ್ಟಿ ಮಾಹಿತಿ ನೀಡಿದರು.

## ಉತ್ತಮ ಪ್ರಭೇದ; ಬಾಳಿಕೆ ದೀರ್ಘ

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್-2ರಲ್ಲಿ ಬಿದಿರು ಬಳಸಿ ಒಳಾಂಗಣ ವಿನ್ಯಾಸವನ್ನು ಆಕರ್ಷಕಗೊಳಿಸಲಾಗಿದೆ. ದೆಹಲಿಯ ನೂತನ ಸಂಸತ್ತಿನ ಗೋಡೆ ಮತ್ತು ನೆಲಹಾಸುಗಳಿಗೆ ಬಿದಿರು ಬಳಸಲಾಗಿದೆ. ಉತ್ತಮ ಪ್ರಭೇದವಾದ 'ತ್ರಿಪುರನ್ ಬಂಬುಸಾ ತುಲ್ಡಾ' ಬಿದಿರು ಬಳಸಿದರೆ ದೀರ್ಘ ಕಾಲ ಬಾಳಿಕೆ ಬರುತ್ತದೆ ಎಂದು



## 6 ಕೋಟಿ ವೆಚ್ಚ

6 ಕೋಟಿ ವೆಚ್ಚದಲ್ಲಿ ನಮ್ಮ ಮೆಟ್ರೊ ಕಾಳೇನ ಅಗ್ರಹಾರ-ನಾಗವಾರ (ಗುಲಾಬಿ)ಮಾರ್ಗದಲ್ಲಿ ಬಂಬೂಬಜಾರ್ ಸಮೀಪದ ನಿಲ್ದಾಣವನ್ನು (ಪಾಟರಿ ಟೌನ್) ಬಿದಿರಿನ ಅಲಂಕಾರದಲ್ಲಿ ನಿರ್ಮಿಸಲಿದೆ. ಇದು ದೇಶದ ಮೊದಲ ಬಿದಿರು ಅಲಂ ಕಾರದ ಮೆಟ್ರೊ ನಿಲ್ದಾಣ ಎಂಬ ಹಿರಿಮೆಗೆ ಪಾತ್ರವಾಗಲಿದೆ. 'ಬಿದಿರು ಎಷ್ಟು ಬೆಳೆಯುತ್ತದೆ? ಮೆಟ್ರೊದ ಹಳಿಗಳನ್ನು ಮೀರಿ ಬೆಳೆಯುತ್ತದೆಯೇ? ಎಂಬುದನ್ನೆಲ್ಲ ಚರ್ಚೆ ನಡೆಸಿ ಗಿಡ್ಡ ಬಿದಿರು ಬೆಳೆಸಲು ಅವಕಾಶ ನೀಡಲಾಗುವುದು. ಪಾಟರಿ ಟೌನ್ ಮೆಟ್ರೊ ನಿಲ್ದಾಣವನ್ನು ಬೆಂಕಿ ನಿರೋಧಕ ಬಿದಿರು ಬಳಸಿ ವಿನ್ಯಾಸಗೊಳಿಸಲಾಗುವುದು' ಎಂದು ಬಿಎಸ್‌ಐ ಅಧ್ಯಕ್ಷ ಪುನತಿ ಶ್ರೀಧರ್ ತಿಳಿಸಿದರು. ಯಾವುದೇ ಬಿದಿರು ಬಳಕೆಮಾಡುವ ಮೊದಲು ರಾಸಾಯನಿಕ ಬಳಸಿ ಬಿದಿರು ಸ್ಟಾರ್ಗ್‌ಳನ್ನು ತೆಗೆದು ಹುಳ ಬೀಳದಂತೆ ಮಾಡಿದರೆ 40–50 ವರ್ಷ ಹಾಳಾಗುವುದಿಲ್ಲ ಎಂದು ವಿವರ ನೀಡಿದರು. ಬಿದಿರು ಬೆಳೆದರೆ ಮರಗಳಿಗಿಂತ ಹೆಚ್ಚು ಆಮ್ಲಜನಕವನ್ನು ವಾತಾವರಣಕ್ಕೆ ಬಿಡುತ್ತದೆ. ತುಂಬಾ ಕಡಿಮೆ ನೀರಿನಲ್ಲಿ ಬಿದಿರು ಬೆಳೆಸಬಹುದು. ಹಾಗೆಯೇ ಬಿದಿರು ಮಳೆ ನೀರನ್ನು ಭೂಮಿಗೆ ಇಂಗಿಸುತ್ತದೆ ಎಂದು ಅವರು ವಿವರಿಸಿದರು.

# ಜೈ’ ತುಳು ಚಿತ್ರದಲ್ಲಿ ಬಾಲಿವುಡ್ ನಟ ಸುನೀಲ್ ಶೆಟ್ಟಿ; ಚೊಚ್ಚಲ ನಿರ್ದೇಶನದ ಅನುಭವ ಹಂಚಿಕೊಂಡ ರೂಪೇಶ್ ಶೆಟ್ಟಿ

ಬಿಗ್ ಬಾಸ್ ಖ್ಯಾತಿಯ ರೂಪೇಶ್ ಶೆಟ್ಟಿ ಇತ್ತೀಚೆಗಷ್ಟೇ ತಮ್ಮ ಚೊಚ್ಚಲ ನಿರ್ದೇಶನದ ‘ಜೈ’ ಸಿನಿಮಾದ ಚಿತ್ರೀಕರಣವನ್ನು ಪೂರ್ಣಗೊಳಿಸಿದ್ದಾರೆ. ಚಿತ್ರದಲ್ಲಿ ಬಾಲಿವುಡ್ ನಟ ಸುನೀಲ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ತುಳು ಮೂಲದವರೇ ಆಗಿರುವ ಸುನೀಲ್ ಶೆಟ್ಟಿ, ತುಳು ಚಿತ್ರದಲ್ಲಿ ಇದೇ ಮೊದಲ ಬಾರಿಗೆ ಕಾಣಿಸಿಕೊಂಡಿದ್ದಾರೆ.

‘ಸುನೀಲ್ ಶೆಟ್ಟಿ ಅವರು ಮುಂದೊಂದು ದಿನ ತುಳು ಸಿನಿಮಾ ಮಾಡ್ತಾರೆ ಅಂತ ಗೊತ್ತಿತ್ತು. ಆದರೆ, ನಾನು ಆ ಚಿತ್ರಕ್ಕೆ ಆ್ಯಕ್ಷನ್ ಕಟ್ ಹೇಳುತ್ತೇನೆ ಅಂತ ಅಂದುಕೊಂಡಿರಲಿಲ್ಲ.

ನನಗೆ ಅವರು ನನಗೆ ವೈಯುಕ್ತಿಕವಾಗಿಯೂ ಸಂಪರ್ಕದಲ್ಲಿರಲಿಲ್ಲ ಅಥವಾ ಬೇರೆ ಯಾವುದೇ ಕಡೆಯಿಂದಲೂ ಪರಿಚಯವಿರಲಿಲ್ಲ. ಕೊನೆಗೆ ನಿರ್ಮಾಪಕರೊಬ್ಬರ ಮೂಲಕ ಅವರನ್ನು ಭೇಟಿಯಾಗುವ ಅವಕಾಶ ನನಗೆ ಸಿಕ್ಕಿತು. ಸಿಕ್ಕಾಗ ಸಿನಿಮಾದ ಬಗ್ಗೆ ನಾನು ಮಾತನಾಡುತ್ತೇನೆಂಬ ಯೋಚನೆ ಅವರಿಗಿರಲಿಲ್ಲ. ನಾನು ಯಾವುದೇ ನಿರೀಕ್ಷೆ ಇಟ್ಟುಕೊಳ್ಳದೆಯೇ ಹೋದೆ. ನಾನು ಅವರನ್ನು ಭೇಟಿಯಾಗುತ್ತೇನೆ ಮತ್ತು ಫೋಟೊ ತೆಗೆದುಕೊಂಡು ಬರುತ್ತೇನೆ ಎಂದು ಭಾವಿಸಿದ್ದೆ. ಅಚ್ಚರಿ ಎಂದರೆ ಮಂಗಳೂರಿನಲ್ಲಿ ನಡೆಯುವ ‘ಜೈ’ ಕಥೆಯನ್ನು ಹೇಳಲು ನನಗೆ ಐದು ನಿಮಿಷ ಸಮಯ ಸಿಕ್ಕಿತು.



ಅದು ಅವರ ಆಸಕ್ತಿಯನ್ನು ಕೆರಳಿಸಿತು’ ಎನ್ನುತ್ತಾರೆ ರೂಪೇಶ್ ಶೆಟ್ಟಿ.

ಕಥೆ ಕೇಳಿದ ಬಳಿಕ ಅವರ ಉತ್ಸಾಹವನ್ನು ಕಂಡ ನಾನು, ಆ ಪಾತ್ರದಲ್ಲಿ ನಟಿಸುವಂತೆ ಕೇಳಿದೆ ಮತ್ತು ಅವರು ಅದಕ್ಕೆ ಒಪ್ಪಿಗೆ ನೀಡಿದರು. ಅವರೊಂದಿಗೆ ಚಿತ್ರೀಕರಣ ಮಾಡುವುದು ನನ್ನ ಜೀವನದ ದೊಡ್ಡ ಅನುಭವವಾಗಿದೆ. ನಾವು ಚಿತ್ರೀಕರಣವನ್ನು ಪೂರ್ಣಗೊಳಿಸಿದ್ದೇವೆ. ಕೇವಲ ಒಂದು ಹಾಡಿನ ಚಿತ್ರೀಕರಣ ಬಾಕಿ ಉಳಿದಿದೆ. ನಾವು 2025ರ ದ್ವಿತೀಯಾರ್ಧದಲ್ಲಿ ಚಿತ್ರವನ್ನು ಬಿಡುಗಡೆ ಮಾಡುವ ಗುರಿಯನ್ನು ಹೊಂದಿದ್ದೇವೆ’ ಎಂದರು.

# ಮಿಸ್ಟರ್ ರಾಣಿ’ ಚಿತ್ರದಲ್ಲಿ ನಾಯಕಿಯಾಗಿ ಬದಲಾದ ಸೈಕೋ ಜಯಂತ್; ಮಧುಚಂದ್ರ ಆ್ಯಕ್ಷನ್ ಕಟ್

ಲಕ್ಷ್ಮೀ ನಿವಾಸ ಧಾರಾವಾಹಿ ಮೂಲಕ ಖ್ಯಾತಿ ಗಳಿಸಿದ ಸೈಕೋ ಜಯಂತ್ ಇದೀಗ ‘ಮಿಸ್ಟರ್ ರಾಣಿ’ ಸಿನಿಮಾ ಮೂಲಕ ಸ್ಯಾಂಡಲ್ವುಡ್ಗೆ ಎಂಟ್ರಿ ನೀಡುತ್ತಿದ್ದಾರೆ. ಸೈಕೋ ಜಯಂತ್ ಅಲಿಯಾಸ್ ದೀಪಕ್ ಸುಬ್ರಹ್ಮಣ್ಯ ಹಿಂದೆಂದೂ ನೋಡಿರದ ಪಾತ್ರದಲ್ಲಿ ತೆರೆ ಮೇಲೆ ಮಿಂಚಲು ಸಜ್ಜಾಗಿದ್ದಾರೆ. ಈ ಕಾಮಿಡಿ ಎಂಟರ್ಟೈನರ್ ಚಿತ್ರದಲ್ಲಿ ಜಯಂತ್ ನಾಯಕಿಯಾಗಿ ಗಮನ ಸೆಳೆಯಲಿದ್ದಾರೆ. ನಾಯಕನಾಗಿ ಗುರುತಿಸಿಕೊಳ್ಳಲು ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ ಜಯಂತ್ ಅವರಿಗೆ ಇದೀಗ ನಾಯಕಿಯಾಗುವ ಅವಕಾಶ ಸಿಕ್ಕಿದೆ.

ನಿರ್ಮಾಪಕರ ಪ್ರಕಾರ, ಚಿತ್ರವು ಅನಿರೀಕ್ಷಿತ ತಿರುವುಗಳಿಂದ ತುಂಬಿದೆ. ದೀಪಕ್ ಗೊಂದಲವನ್ನು ಸೃಷ್ಟಿಸುವ ಮತ್ತು ತನ್ನ ಸುತ್ತಲಿನ ಎಲ್ಲರನ್ನು ಗೊಂದಲಕ್ಕೀಡುಮಾಡುವ ಪಾತ್ರದಲ್ಲಿ ನಟಿಸಿದ್ದಾರೆ. ಚಿತ್ರ ಆರಂಭವಾಗುತ್ತಿದ್ದಂತೆ ಅಭಿಮಾನಿಗಳು ಕಥೆಯು ಹೇಗೆ ತೆರೆದುಕೊಳ್ಳುತ್ತದೆ ಎಂದು ತಲೆ ಕೆರೆದುಕೊಳ್ಳುವಂತೆ ಮಾಡುತ್ತದೆ. ಅಲ್ಲದೆ, ನಗುವುದು, ಏದುಸಿರು ಬಿಡುವುದು ಮತ್ತು ಸಂಪೂರ್ಣವಾಗಿ ದಿಗ್ಭ್ರಮೆಗೊಳ್ಳುವಂತೆ ಮಾಡುತ್ತದೆ.

‘ಸೆಲ್ಫಿ ಮಮ್ಮಿ ಗೂಗಲ್ ಡ್ಯಾಡಿ ಚಿತ್ರಕ್ಕೆ ಹೆಸರುವಾಸಿಯಾದ ನಿರ್ದೇಶಕ ಮಧುಚಂದ್ರ ಅವರು ಈ ಚಿತ್ರಕ್ಕೆ ಆ?ಯಕ್ಷನ್ ಕಟ್ ಹೇಳಿದ್ದಾರೆ. ‘ಈ ಚಿತ್ರವು ಆಶ್ಚರ್ಯ ಮತ್ತು ಹಾಸ್ಯದಿಂದ ತುಂಬಿದೆ. ಅದು ಪ್ರೇಕ್ಷಕರನ್ನು ಊಹಿಸುವಂತೆ ಮಾಡುತ್ತದೆ’ ಎಂದು ಅವರು ಹೇಳುತ್ತಾರೆ. ಚಿತ್ರದ ಟ್ರೈಲರ್,



ಈಗಾಗಲೇ 3.5 ಮಿಲಿಯನ್ ವೀಕ್ಷಣೆಗಳನ್ನು ಕಂಡಿದೆ. ಚಿತ್ರವನ್ನು ನೋಡಲು ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ.

ಚಿತ್ರದಲ್ಲಿ ಪಾರ್ವತಿ ನಾಯರ್ ಕೂಡ ನಟಿಸಿದ್ದಾರೆ. ಅವರ ಪಾತ್ರವು ರೋಚಕ ತಿರುವನ್ನು ನೀಡುತ್ತದೆ. ಇದು ಬಾಹುಬಲಿಯಲ್ಲಿ ಕೆಲಸ ಮಾಡಿದ ರವೀಂದ್ರ ನಾಥ್ ಅವರ ಛಾಯಾಗ್ರಹಣವಿದೆ. ನಾಯಕ ಜಯಂತ್ ಅವರನ್ನು ನಾಯಕಿಯಾಗಿ ಪರಿವರ್ತಿಸುವ ಕೆಲಸವನ್ನು ಚಂದನಾ ಅವರು ಮಾಡಿದ್ದಾರೆ. ನಾಯಕಿಯಾಗಿಯೇ ಕಾಣುವಂತೆ ಮೇಕಪ್ ಮಾಡಿದ್ದಾರೆ. ಮಿಸ್ಟರ್ ರಾಣಿ ಫೆಬ್ರುವರಿ 7 ರಂದು ಬಿಡುಗಡೆಯಾಗಲಿದೆ. ಬೆಲೆ 99 ರೂಪಾಯಿಗೆ ಟಿಕೆಟ್ ಲಭ್ಯವಿರಲಿದೆ.

# ಲೋಹಿತ್ ನಿರ್ದೇಶನದ ‘ರಾಕ್ಷಸ’ ಚಿತ್ರಕಥೆ ನನಗೆ ಇಷ್ಟವಾಯಿತು: ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್



ಕಾಂತಾರ, ಕಿರಿಕ್ ಪಾರ್ಟಿ, ವಿಕ್ರಾಂತ್ ರೋಣ, ರಂಗಿತರಂಗ, ಬೆಲ್ ಬಾಟಮ್, ಗಖ, ಮ್ಯಾಕ್ಸ್ ಮತ್ತು ತಮಿಳು ಚಿತ್ರ ಮಹಾರಾಜದಲ್ಲಿನ ತಮ್ಮ ಅವಿಸ್ಮರಣೀಯ ಕೆಲಸಕ್ಕೆ ಹೆಸರುವಾಸಿಯಾಗಿದ ಸ್ಯಾಂಡಲ್ವುಡ್ನ ಅತ್ಯಂತ ಜನಪ್ರಿಯ ಸಂಗೀತ ಸಂಯೋಜಕರಲ್ಲಿ ಒಬ್ಬರಾದ ಅಜನೀಶ್ ಲೋಕನಾಥ್ ಇದೀಗ ಮತ್ತೊಂದು ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಲು ಮುಂದಾಗಿದ್ದಾರೆ. ಇದೀಗ, ಪ್ರಜ್ವಲ್ ದೇವರಾಜ್ ಮತ್ತು ಸೋನಾಲ್ ಮೊಂತೇರೊ ಅಭಿನಯದ ‘ರಾಕ್ಷಸ’ ಚಿತ್ರಕ್ಕೆ ಮೋಡಿ ಮಾಡಲು ಸಿದ್ಧರಾಗಿದ್ದಾರೆ.

ಇದು ಮಮ್ಮಿ ಸೇವ್ ಮಿ ಚಿತ್ರದ ನಂತರ ಅಜನೀಶ್ ಮತ್ತು ನಿರ್ದೇಶಕ ಲೋಹಿತ್ ನಡುವಿನ ಎರಡನೇ ಚಿತ್ರವಾಗಿದೆ. ಲೋಹಿತ್ ಅವರೊಂದಿಗೆ ಮತ್ತೆ ಕೆಲಸ ಮಾಡುತ್ತಿರುವ ಬಗ್ಗೆ ಮಾತನಾಡುವ ಅಜನೀಶ್, ‘ಲೋಹಿತ್ ಅವರೊಂದಿಗೆ ಮತ್ತೆ ಕೆಲಸ ಮಾಡಲು ಮತ್ತು ಪ್ರಜ್ವಲ್ ಅವರ ಚಿತ್ರಕ್ಕೆ ಸಂಗೀತ ಸಂಯೋಜಿಸಲು ನನಗೆ ಸಂತೋಷವಾಗಿದೆ’ ಎಂದರು.

ರಾಕ್ಷಸ ಚಿತ್ರದಲ್ಲಿ ಪ್ರಜ್ವಲ್ ಅವರನ್ನು ತೋರಿಸಿರುವ ರೀತಿ ಅತ್ಯುತ್ತಮವಾಗಿದೆ ಮತ್ತು ಚಿತ್ರದಲ್ಲಿ ನಟ ಉತ್ತಮವಾಗಿ ಕಾಣುತ್ತಾರೆ. ಮೊದಲಿಗೆ ನಾನು ಲೋಹಿತ್ ಅವರ ಚಿತ್ರಕಥೆಯನ್ನು ಇಷ್ಟಪಟ್ಟೆ. ಚಿತ್ರದಲ್ಲಿ ಸಂಗೀತದ ನಿಯೋಜನೆಯನ್ನು ಸಂಪೂರ್ಣವಾಗಿ ಮಾಡಲಾಗಿದೆ ಎಂದರು.

ಫೆಬ್ರುವರಿ 26ರಂದು ಶಿವರಾತ್ರಿ ಹಬ್ಬದ ಸಂದರ್ಭದಲ್ಲಿ ಚಿತ್ರವು ಕನ್ನಡ ಮತ್ತು ತೆಲುಗು ಭಾಷೆಗಳಲ್ಲಿ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರದಲ್ಲಿ ಶೋಭರಾಜ್, ವತ್ಸಲಾ ಮೋಹನ್, ಸಿದ್ಲಿಂಗು ಶ್ರೀಧರ್ ಮತ್ತು ಅರುಣ್ ರಾಥೋಡ್ ಸೇರಿದಂತೆ ಇತರರು ನಟಿಸಿದ್ದಾರೆ. ಚಿತ್ರಕ್ಕೆ ಜೆಬಿನ್ ಪಿ ಜೇಕಬ್ ಅವರ ಛಾಯಾಗ್ರಹಣ, ವಿನೋದ್ ಅವರ ಸಾಹಸ ನಿರ್ದೇಶನ ಮತ್ತು ರವಿಚಂದ್ರನ್ ಸಿ ಅವರ ಸಂಕಲನವಿದೆ.

ಶಾನ್ವಿ ಎಂಟರ್ಟೈನ್ಮೆಂಟ್ ಮೂಲಕ ದೀಪು ಬಿಎಸ್ ನಿರ್ಮಿಸಿರುವ ಈ ಚಿತ್ರವು ಪ್ರೇಕ್ಷಕರಿಗೆ ಖುಷಿ ಕೊಡುತ್ತದೆ. ಈ ಶಿವರಾತ್ರಿಯಲ್ಲಿ ಈ ಥ್ರಿಲ್ಲರ್ ಅನ್ನು ವೀಕ್ಷಿಸಿ ಎಂದು ಅಜನೀಶ್ ಹೇಳುತ್ತಾರೆ.

# ಕಾರ್ತಿಕ್ ಮಹೇಶ್ ನಟನೆಯ ‘ರಾಮರಸ’ ಸಿನಿಮಾ ತಂಡ ಸೇರಿದ ನಟ ಶರಣ್; ಚಿತ್ರದಲ್ಲಿ ವಿಶಿಷ್ಟ ಪಾತ್ರ



ಶರಣ್ ನಟನೆಯ ಅಧ್ಯಕ್ಷ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ ನಟಿ ಹೆಬಾ ಪಟೇಲ್, ಕೆಲವು ವರ್ಷಗಳ ನಂತರ ಇದೀಗ ‘ರಾಮರಸ’ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಮರಳುತ್ತಿದ್ದಾರೆ. ಚಿತ್ರದಲ್ಲಿ ಬಾಲಾಜಿ ಮನೋಹರ್ ಜೊತೆಗೆ ಬಿಗ್ ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್ ನಾಯಕರಾಗಿ ನಟಿಸಿದ್ದು, ನಟ ಶರಣ್ ಕೂಡ ಚಿತ್ರತಂಡ ಸೇರಿದ್ದಾರೆ. ಬಿಎಂ ಗಿರಿರಾಜ್ ನಿರ್ದೇಶನದ ಚಿತ್ರದಲ್ಲಿ ಆಸಕ್ತಿದಾಯಕ ಪಾತ್ರವೊಂದರಲ್ಲಿ ಕಾಣಿಸಿಕೊಳ್ಳಲಿದ್ದಾರೆ.ಜಿ ಸಿನಿಮಾಸ್ ಮತ್ತು ಸೆವೆನ್ ಸ್ಟಾರ್ ಸ್ಟುಡಿಯೋಸ್ ಬ್ಯಾನರ್ನಡಿಯಲ್ಲಿ ಗುರು ದೇಶಪಾಂಡೆ ನಿರ್ಮಿಸಿರುವ ಈ ಚಿತ್ರ ಇದೀಗ ವ್ಯಾಪಕ ನಿರೀಕ್ಷೆ ಮೂಡಿಸಿದೆ. ಚಿತ್ರದಲ್ಲಿ ಶರಣ್ ದೇವರ ರಾಜ, ಹೋಮ, ಹವನ ಮತ್ತು ಯಜ್ಞಗಳ ಅಧಿಪತಿ ಇಂದ್ರ ದೇವೇಂದ್ರನಾಗಿ ಕಾಣಿಸಿಕೊಳ್ಳಲಿದ್ದಾರೆ.ಚಿತ್ರತಂಡ ಶರಣ್ ಅವರ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆ ಮಾಡಿದ್ದಾರೆ. ಶರಣ್ ಪಾತ್ರದ ನಿಜವಾದ ಉದ್ದೇಶವನ್ನು ಫ್ರಾಂಚೈಸಿಯ ಮುಂದಿನ ಅಧ್ಯಾಯದಲ್ಲಿ ಸಂಪೂರ್ಣವಾಗಿ ಅನಾವರಣಗೊಳಿಸಲಾಗುವುದು ಎಂದು ಚಿತ್ರತಂಡ ತಿಳಿಸಿದೆ. ಚಿತ್ರಕ್ಕೆ ಬಿಜೆ ಭರತ್ ಅವರ ಸಂಗೀತ ಮತ್ತು ಕೃಷ್ಣ ಕುಮಾರ್ ಅವರ ಛಾಯಾಗ್ರಹಣವಿದೆ.ಭ್ರಮರಿ ಪಾತ್ರದಲ್ಲಿ ಹೆಬಾ ಪಟೇಲ್ ಕಾಣಿಸಿಕೊಳ್ಳುತ್ತಿದ್ದಾರೆ. ಆ ಪಾತ್ರವನ್ನು ಅಮಲೇರಿಸುವ ಶಕ್ತಿಯಾಗಿ, ಮಕರಂದವನ್ನು ಬೆನ್ನಟ್ಟುವ ಜೇನುನೊಣದ ಭ್ರಮೆಯಾಗಿ, ಅದರಿಂದ ಶಾಶ್ವತವಾಗಿ ತಪ್ಪಿಸಿಕೊಳ್ಳಲಾಗದ ಮತ್ತು ಅಪಾಯಕಾರಿಯನ್ನಾಗಿ ಚಿತ್ರಿಸಲಾಗಿದೆ. ಅಲ್ಲದೆ, ಈ ಚಿತ್ರದಲ್ಲಿ ರಾಮರಸದ ಬಯಕೆ, ನಿಗೂಢತೆ ಮತ್ತು ಭಾವೋದ್ರೇಕದ ವಿಷಯಗಳನ್ನು ತೆರೆ ಮೇಲೆ ತರಲಾಗಿದೆ ಎಂದು ನಿರ್ಮಾಪಕ ಗುರು ದೇಶಪಾಂಡೆ ವಿವರಿಸುತ್ತಾರೆ.

# ಡೇಟಿಂಗ್ ವದಂತಿ ಮಧ್ಯೆ, ಮಾಜಿ ಪತಿ ಮದುವೆ ಬಗ್ಗೆ ಸಮಂತಾ ರುತ್ ಪ್ರಭು ಮೊದಲ ಬಾರಿಗೆ ಪ್ರತಿಕ್ರಿಯೆ

**ನವದೆಹಲಿ: ಯೇ ಮಾಯಾ ಚೇಸಾವೆ ಚಿತ್ರದ ಮೂಲಕ ತೆಲುಗು ಚಿತ್ರರಂಗಕ್ಕೆ ಎಂಟ್ರಿ ಕೊಟ್ಟ ಸಮಂತಾ ಅಂದಿನಿಂದ ಹಿಂತಿರುಗಿ ನೋಡಿದ್ದೇ ಇಲ್ಲ. ಸಮಂತಾ ಅವರಿಂದ ವಿಚ್ಛೇದನ ಪಡೆದಿರುವ ನಾಗಚೈತನ್ಯ ಅವರು ಇತ್ತೀಚೆಗಷ್ಟೇ ಮತ್ತೊಂದು ವಿವಾಹವಾಗಿದ್ದಾರೆ. ಈ ಕುರಿತು ಸಮಂತಾ ಇದೇ ಮೊದಲ ಬಾರಿಗೆ ಮಾತನಾಡಿದ್ದಾರೆ.**

**ಉಕಿ ಗೆ ನೀಡಿದ ಸಂದರ್ಶನದಲ್ಲಿ, ನಿಮ್ಮ ಮಾಜಿ ಪತಿ ಅವರ ಜೀವನದಲ್ಲಿ ಮುಂದುವರಿದಿದ್ದಾರೆ ಮತ್ತು ಇನ್ನೊಬ್ಬರೊಂದಿಗೆ ವಿವಾಹವಾಗಿದ್ದಾರೆ. ಇದರಿಂದ ನಿಮ್ಮಲ್ಲಿ ಅಸೂಯೆ ಉಂಟಾಯಿತಾ ಎಂದು ಕೇಳಿದ್ದಕ್ಕೆ ಉತ್ತರಿಸಿದ್ದಾರೆ. ತನ್ನ ಹೃದಯದಲ್ಲಿ ‘ಅಸೂಯೆ’ಗೆ ಸ್ಥಳವಿಲ್ಲ. ಆ ನಕಾರಾತ್ಮಕ ಭಾವನೆಗಳ ಮೇಲೆ ಗಮನ ಕೇಂದ್ರೀಕರಿಸುವುದು ಯೋಗ್ಯವಲ್ಲ ಎಂಬುದನ್ನು ನನ್ನ ಹಿಂದಿನ ಅನುಭವಗಳು ನನಗೆ ಕಲಿಸಿವೆ ಎಂದು ಸಮಂತಾ ತಿಳಿಸಿದ್ದಾರೆ.**

‘ನಾನು ಸಂಪೂರ್ಣವಾಗಿ ನನ್ನಿಂದ ಬೇರ್ಪಡಿಸಲು ಬಯಸುವ ಒಂದು ಗುಣವೆಂದರೆ ಅಸೂಯೆ. ಅದು ನನ್ನಲ್ಲಿ ಮುಖ್ಯ ಭಾಗವಾಗಿರುವುದು ನನಗೆ ಇಷ್ಟವಿಲ್ಲ. ಅಸೂಯೆ ಎಲ್ಲ ಕೆಟ್ಟದ್ದಕ್ಕೂ ಮೂಲ ಎಂದು ನಾನು ಭಾವಿಸುತ್ತೇನೆ. ಉಳಿದಂತೆ ಎಲ್ಲವೂ ಉತ್ತಮವಾಗಿದೆ. ಆದರೆ, ಅಸೂಯೆಯಂತ



ಅನಾರೋಗ್ಯಕರ ವಿಚಾರಗಳಿಗೆ ಸ್ಥಳವಿಲ್ಲ’ ಎಂದು ಹೇಳಿದರು.

ಸಮಂತಾ ಈ ಹಿಂದೆ ನಾಗ ಚೈತನ್ಯ ಅವರನ್ನು ಮದುವೆಯಾಗಿದ್ದರು. ಬಳಿಕ ಅವರು 2021ರಲ್ಲಿ ವಿಚ್ಛೇದನ ಘೋಷಿಸಿದರು. ನಾಗ ಚೈತನ್ಯ ಇದೀಗ ನಟಿ ಶೋಭಿತಾ ಧೂಳಿಪಾಲ ಅವರನ್ನು ಕಳೆದ ವರ್ಷ ಡಿಸೆಂಬರ್ 4 ರಂದು ವಿವಾಹವಾಗಿದ್ದಾರೆ.

ಇತ್ತೀಚೆಗೆ, ಸಮಂತಾ ರುತ್ ಪ್ರಭು ಅವರು ‘ಸಿಟಾಡೆಲ್: ಹನಿ ಬನ್ನಿ’ ನಿರ್ದೇಶಕ ರಾಜ್ ನಿಡಿಮೋರು ಅವರೊಂದಿಗೆ ಪಿಕಲ್ಬಾಲ್ ಪಂದ್ಯಾವಳಿಯಲ್ಲಿ ಕಾಣಿಸಿಕೊಂಡಿದ್ದರು. ಇದು ಅವರಿಬ್ಬರು ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ವದಂತಿಗಳಿಗೆ ಕಾರಣವಾಯಿತು.

ಫೆಬ್ರುವರಿ 1 ರಂದು, ಸಮಂತಾ ರುತ್ ಪ್ರಭು ತಮ್ಮ ಖಟಿಣಚಿರಂಡಿಚಿಟ ಖಾತೆಯಲ್ಲಿ ವರ್ಲ್ಡ್ ಪಿಕಲ್ಬಾಲ್ ಲೀಗ್ ಪಂದ್ಯದ ಹಲವಾರು ಫೋಟೊಗಳನ್ನು ಹಂಚಿಕೊಂಡಿದ್ದರು. ಸಮಂತಾ ಅವರು ಪಿಕಲ್ಬಾಲ್ ತಂಡ ಚೆನ್ನೈ ಸೂಪರ್ ಚಾಂಪ್ಸ್ ಮಾಲೀಕತ್ವವನ್ನು ಹೊಂದಿದ್ದಾರೆ.

ಒಂದು ಫೋಟೊದಲ್ಲಿ ಸಮಂತಾ, ರಾಜ್ ನಿಡಿಮೋರು ಅವರ ಕೈ ಹಿಡಿದಿರುವುದು ಸೆರೆಯಾಗಿದ್ದು, ಡೇಟಿಂಗ್ ವದಂತಿಗಳಿಗೆ ಪುಷ್ಟಿ ನೀಡಿದೆ.

ಸಮಂತಾ ರುತ್ ಪ್ರಭು ಅವರು ಕೊನೆಯದಾಗಿ ಅಮೆಜಾನ್ ಪ್ರೈಮ್ ಒರಿಜಿನಲ್ ಸಿಟಾಡೆಲ್: ಹನಿ ಬನ್ನಿಯಲ್ಲಿ ವರುಣ್ ಧವನ್ ಜೊತೆಗೆ ಕಾಣಿಸಿಕೊಂಡಿದ್ದರು. ಬೆಳ್ಳಿ ಪರದೆಯಲ್ಲಿ ಕೊನೆಯ ಬಾರಿಗೆ ವಿಜಯ್ ದೇವರಕೊಂಡ ಅವರೊಂದಿಗೆ ಕುಷಿ (2023) ಚಿತ್ರದಲ್ಲಿ ಕಾಣಿಸಿಕೊಂಡಿದ್ದರು.

# ಯಾವುದೇ ಪ್ರಶಸ್ತಿ ನಿರಾಕರಿಸುವಷ್ಟು ದೊಡ್ಡದಾಗಿ ನಾನು ಬೆಳೆದಿಲ್ಲ: ಸುದೀಪ್ ಗೆ ಟಾಂಟ್ ಕೊಟ್ರಾ ನಟಿ ತಾರಾ



**ಬೆಂಗಳೂರು:** ಸ್ಯಾಂಡಲ್ವುಡ್ ಪ್ರೇಕ್ಷಕರಿಗಂತೂ ನಟಿ ತಾರಾ ಅನುರಾಧ ಚಿರಪರಿಚಿತ. ಇತ್ತೀಚೆಗೆ ಕಿರುತೆರೆ ಪ್ರೇಕ್ಷಕರಿಗೂ ಬಹಳ ಹತ್ತಿರವಾಗಿರುವ ಈ ನಟಿಗೆ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿ ಪುರಸ್ಕರಿಸಿದೆ.


ಕಳೆದ ನಾಲ್ಕು ದಶಕಗಳಿಂದಲೂ ಕಲಾ ಕ್ಷೇತ್ರದಲ್ಲಿ ಸೇವೆ ಹಾಗೂ ಸಾಧನೆಗಳನ್ನು ಮಾಡುತ್ತಿರುವ ನಟಿ ತಾರಾ ಅನುರಾಧ ನಟನೆ ಅಷ್ಟೇ ಅಲ್ಲದೆ ರಾಜಕೀಯ ಹಾಗೂ ಮಹಿಳಾ ಸಬಲೀಕರಣದ ವಿಚಾರವಾಗಿಯೂ ಸದಾ ಆಸಕ್ತಿಯನ್ನು ತೋರಿದ್ದಾರೆ. ಇವರ ಕಲಾ ಸಾಧನೆಗೆ ಹಲವಾರು ಪ್ರಶಸ್ತಿ ಪುರಸ್ಕಾರಗಳು ಸಂದಿದ್ದಲ್ಲದೆ ಇದೀಗ ಗೌರವ ಡಾಕ್ಟರೇಟ್ ಕೂಡ ಸಿಕ್ಕಿದೆ.

ಸಂದರ್ಶನವೊಂದರಲ್ಲಿ ಮಾತನಾಡಿದ ತಾರಾ ಅವರು, ತಮಗೆ ಡಾಕ್ಟರೇಟ್ ಪದವಿ ಸಿಕ್ಕಿದ್ದರ ಬಗ್ಗೆ ತಮ್ಮ ಅನುಭವ ಹಂಚಿಕೊಂಡರು. ‘ನಮಗೆ ಈ ರೀತಿ ಪ್ರಶಸ್ತಿಗಳು ಬಂದಾಗ ಹೌದಾ..? ನಾನು ಈ ಪ್ರಶಸ್ತಿಗೆ ಭಾಜನಾಗಿದ್ನಾ ಅನ್ನೋ ಪ್ರಶ್ನೆ ಬರುತ್ತದೆ. ನನಗೆ ಪ್ರಶಸ್ತಿ ಬಂದಿರುವುದು ತುಂಬಾ ದೊಡ್ಡ ಗೌರವ.

ಡಾಕ್ಟರೇಟ್ ಅನ್ನು ತುಂಬಾ ಹಿರಿಯರಿಗೆ ಕೊಡುತ್ತಾರೆ ಅನ್ನೋ ಭ್ರಮೆ ಇತ್ತು ನನಗೆ. ಆದರೆ ಅದಕ್ಕೆ ತಕ್ಕ ವ್ಯಕ್ತಿ ಯಾರೇ ಆಗಲಿ ಅವರನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಗುತ್ತದೆ. ತುಂಬಾ ಜನ ಹಿರಿಯರಿಗೆ ಈ ಪ್ರಶಸ್ತಿ ಸಿಕ್ಕಿದೆ. ತುಂಬಾ ಜನರಿಗೆ ಪ್ರಶಸ್ತಿ ಸಿಗಬೇಕಿದೆ. ಆ ಹಿರಿಯರಲ್ಲಿ ನನ್ನನ್ನು ಗುರುತಿಸಿ ಈ ಪ್ರಶಸ್ತಿ ನೀಡಿದ್ದು ತುಂಬಾ ಖುಷಿ ಆಗಿದೆ’ ಎಂದು ತಾರಾ ಅವರು ಹೇಳಿದರು.

ಯಾವುದೇ ಪ್ರಶಸ್ತಿಯನ್ನು ನಿರಾಕರಿಸುವಷ್ಟು ದೊಡ್ಡದಾಗಿ ನಾನು ಬೆಳೆದಿಲ್ಲ. ಪ್ರಶಸ್ತಿ ನಮಗೆ ಸಂದ ಗೌರವ, ನಮಗೆ ತೋರಿಸುವ ಗೌರವ. ಆ ಪ್ರಶಸ್ತಿ ನನ್ನ ವೈಯಕ್ತಿವಾಗಿ ಸಂದ ಪ್ರಶಸ್ತಿ ಅಲ್ಲ. ಅದು ಒಬ್ಬ ಕಲಾವಿದನಿಗೆ ಬಂದ ಗೌರವ. ಅದನ್ನು ಕೊಟ್ಟಾಗ ನಮ್ಮ ಜವಾಬ್ದಾರಿ ಹೆಚ್ಚಾಗುತ್ತದೆ. ನಾನು ಇನ್ನಷ್ಟು ಏನಾದರೂ ಮಾಡಬೇಕು ಅನ್ನೋದು ತಲೆಯಲ್ಲಿ ಬರುತ್ತದೆ. ಆದರೆ ಅದನ್ನು ನಿರಾಕರಿಸೋದು ನನಗೆ ಸರಿ ಅನಿಸೋದಿಲ್ಲ’ ಎಂದು ತಾರಾ ಹೇಳಿದ್ದಾರೆ. ಈ ಮೂಲಕ ನಟ ರಾಜ್ಯ ಪ್ರಶಸ್ತಿ ಹಾಗೂ ಡಾಕ್ಟರೇಟ್ ನಿರಾಕರಿಸಿದ ನಟ ಸುದೀಪ್ ಗೆ ತಾರಾ ಪರೋಕ್ಷವಾಗಿ ಟಾಂಗ್ ನೀಡಿದ್ದಾರೆ ಎನ್ನಲಾಗಿದೆ.

# ಗ್ಲಾಮರಸ್ ಫೋಟೊಗಳ ಮೂಲಕ ನಾನು ಎಲ್ಲರ ಗಮನ ಸೆಳೆಯಲು ಬಯಸಲ್ಲ





ನಟ, ನಿರ್ದೇಶಕ ರಿಷಬ್ ಶೆಟ್ಟಿ ಜೊತೆಗೆ ಹರಿಕಥೆ ಅಲ್ಲ ಗಿರಿಕಥೆ (2022) ಚಿತ್ರದ ಮೂಲಕ ತಮ್ಮ ಛಾಪು ಮೂಡಿಸಿದ ತಪಸ್ವಿನಿ ಪೂಣಚ್ಚ ಇದೀಗ ತಮ್ಮ ಎರಡನೇ ಚಿತ್ರ ‘ಗಜರಾಮ’ ಮೂಲಕ ತೆರೆಮೇಲೆ ಮಿಂಚಲು ಸಿದ್ಧರಾಗಿದ್ದಾರೆ.

ಚಿತ್ರದ ಕುರಿತು ಮಾತನಾಡುತ್ತಾ, ‘ಗಜರಾಮ ನಾನು ಎರಡು ವರ್ಷಗಳ ಹಿಂದೆ ಪೂರ್ಣಗೊಳಿಸಿದ ಯೋಜನೆಯಾಗಿದೆ. ಆದರೆ ಅನಿರೀಕ್ಷಿತ ವಿಳಂಬದಿಂದಾಗಿ, ಅದು ಅಂತಿಮವಾಗಿ ಈಗ ಬಿಡುಗಡೆಯಾಗುತ್ತಿದೆ. ಸದ್ಯ ನಾನು ಗುರುನಂದನ್ ನಟಿಸಿರುವ ಮಿಸ್ಟರ್ ಜಾಕ್ ಚಿತ್ರ ಸೇರಿದಂತೆ ಹಲವಾರು ಇತರ ಪ್ರಾಜೆಕ್ಟ್ಗಳಲ್ಲಿ ನಟಿಸುತ್ತಿದ್ದೇನೆ’ ಎಂದು ಹೇಳುತ್ತಾರೆ.

ನರಸಿಂಹ ಮೂರ್ತಿ ನಿರ್ಮಾಣದ ಮತ್ತು ಸುನೀಲ್ ಕುಮಾರ್ ವಿಎ ನಿರ್ದೇಶನದ ‘ಗಜರಾಮ’ ಈ ವಾರ ಬಿಡುಗಡೆಯಾಗುತ್ತಿದೆ. ಚಿತ್ರದಲ್ಲಿ ರಾಜವರ್ದನ್ ಮತ್ತು ದೀಪಕ್ ನಾಯಕರಾಗಿ ಕಾಣಿಸಿಕೊಂಡಿದ್ದು, ಕಬೀರ್ ಸಿಂಗ್ ದುಹಾನ್ ಖಳನಾಯಕನಾಗಿ ನಟಿಸಿದ್ದಾರೆ.

‘ಗಜರಾಮ’ ಚಿತ್ರದಲ್ಲಿ ತಪಸ್ವಿನಿ ದ್ವಿಪಾತ್ರದಲ್ಲಿ ನಟಿಸಿದ್ದಾರೆ. ನಗರಕ್ಕೆ ತೆರಳಿದ ನಂತರ ಗಮನಾರ್ಹ ರೂಪಾಂತರಕ್ಕೆ ಒಳಗಾಗುವ ಹಳ್ಳಿ ಹುಡುಗಿಯ ಪಾತ್ರದಲ್ಲಿ ಅವರು ಕಾಣಿಸಿಕೊಂಡಿದ್ದಾರೆ. ‘ಇದು ಕ್ರೀಡಾ ಕೇಂದ್ರಿತ ಚಿತ್ರವಾಗಿದ್ದು, ಕುಸ್ತಿಯನ್ನು ಪ್ರಮುಖ ವಿಷಯವಾಗಿ ಹೊಂದಿದೆ. ನನ್ನ ಪಾತ್ರವೂ ಸೇರಿದಂತೆ ಪ್ರತಿಯೊಂದು ಪಾತ್ರವೂ ಕಥೆಗೆ ನಿರ್ಣಾಯಕವಾಗಿದೆ’ ಎಂದು ಅವರು ವಿವರಿಸುತ್ತಾರೆ.

ತಪಸ್ವಿನಿ ಅವರು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡುವ ಫೋಟೊಗಳಿಗೆ ಲಕ್ಷಾಂತರ ವೀಕ್ಷಣೆಗಳು ಲಭ್ಯವಾಗುತ್ತವೆ. ‘ಬಾಲ್ಯದಿಂದಲೂ, ನಾನು ಯಾವಾಗಲೂ ಸಾಂಪ್ರದಾಯಿಕ ಮತ್ತು ಗ್ಲಾಮರಸ್ ಶೈಲಿಗಳಲ್ಲಿ ಡ್ರೆಸ್ಸಿಂಗ್ ಮಾಡುವುದನ್ನು ಇಷ್ಟಪಡುತ್ತೇನೆ. ಇದು ನಾನು ಯಾರು ಎಂಬುದರ ಭಾಗವಾಗಿದೆ. ಗ್ಲಾಮರಸ್ ಚಿತ್ರಗಳ ಮೂಲಕ ನಾನು ಎಲ್ಲರ ಗಮನ ಸೆಳೆಯಲು ಬಯಸುವುದಿಲ್ಲ. ಬದಲಿಗೆ ನಾನು ನನ್ನ ಕೆಲಸದ ಬಗ್ಗೆ ಮಾತ್ರ ಗಮನದಲ್ಲಿಟ್ಟುಕೊಂಡಿರುತ್ತೇನೆ’ ಎಂದು ಹೇಳುತ್ತಾರೆ ತಪಸ್ವಿನಿ.

ಪ್ರಮಾಣೀಕೃತ ಬ್ರೂವರ್ ಮತ್ತು ಕೆಫೆ ಮಾಲೀಕರಾಗಿರುವ ತಪಸ್ವಿನಿ ಅವರು ತಮ್ಮ ನಟನೆಯ ಜೊತೆಗೆ ಉದ್ಯಮದ ಕಡೆಗೂ ಗಮನಹರಿಸಿದ್ದಾರೆ.

# ಪ್ರೇಮಿಗಳ ದಿನದಂದು ಮನಾಲಿಯಲ್ಲಿ ಕಂಗನಾ ಕೆಫೆ ಉದ್ಘಾಟನೆ; ದೀಪಿಕಾಗೆ ಆಹ್ವಾನ

**ನವದೆಹಲಿ:** ಬಿಜೆಪಿ ಸಂಸದೆ ಹಾಗೂ ಬಾಲಿವುಡ್ ನಟಿ ಕಂಗನಾ ರನೌತ್ ಅವರು ಫೆಬ್ರವರಿ 14, ಪ್ರೇಮಿಗಳ ದಿನದಂದು ಮನಾಲಿಯಲ್ಲಿರುವ ತಮ್ಮ ಕೆಫೆ ‘ದಿ ಮೌಂಟೇನ್ ಸ್ಟೋರಿ’ ಆರಂಭವಾಗಲಿದೆ ಎಂದು ಬುಧವಾರ ತಿಳಿಸಿದ್ದಾರೆ.

ಕೆಫೆ ಮತ್ತು ಅದರ ಒಳಾಂಗಣದ ವಿಡಿಯೋವನ್ನು ತಮ್ಮ ಇನ್ಸ್ಟಾಗ್ರಾಮ್ ನಲ್ಲಿ ಹಂಚಿಕೊಂಡಿರುವ ಕಂಗನಾ, ಒಂದು ಕೆಫೆ ಆರಂಭಿಸುವುದು ತಮ್ಮ ಬಹು ದಿನಗಳ ಕನಸಾಗಿತ್ತು ಮತ್ತು ಅದು ಅಂತಿಮವಾಗಿ ನನಸಾಗಿದೆ ಎಂದು ಹೇಳಿದ್ದಾರೆ.

ಕಂಗನಾ ಹಂಚಿಕೊಂಡ ಪೋಸ್ಟ್ ಗೆ ಅಭಿಮಾನಿಗಳಿಂದ ಲೈಕ್ ಮತ್ತು ಕಮೆಂಟ್ ಗಳ ಸುರಿಮಳೆ ಆಗಿದ್ದು, ನಟಿ ಶೀಘ್ರದಲ್ಲೇ ಕೆಫೆ ಆರಂಭಿಸುವ ಬಯಕೆ ವ್ಯಕ್ತಪಡಿಸಿದ್ದ ಹಳೆಯ ಸಂದರ್ಶನವನ್ನು ಹಂಚಿಕೊಂಡು ಶುಭ ಹಾರೈಸಿದ್ದಾರೆ.

2013 ರಲ್ಲಿ ನಟಿ ದೀಪಿಕಾ ಪಡುಕೋಣೆ ಕೂಡ ಹಾಜರಿದ್ದ ಸಂದರ್ಶನವೊಂದರಲ್ಲಿ, ವಿನಾನು ಪ್ರಪಂಚದಾದ್ಯಂತ ಊಟ ಮಾಡಿದ್ದೇನೆ ಮತ್ತು ನಾನು ಅದ್ಭುತವಾದ ಪಾಕವಿಧಾನಗಳನ್ನು ಹೊಂದಿದ್ದೇನೆ. ನಾನು ಒಂದು ತುಂಬಾ ಸುಂದರವಾದ, ಚಿಕ್ಕ




ಕೆಫೆಟೇರಿಯಾವನ್ನು ಹೊಂದಲು ಬಯಸುತ್ತೇನೆ. ನನಗೆ ಆಹಾರದ ಬಗ್ಗೆ ತುಂಬಾ ಚೆನ್ನಾಗಿ ತಿಳಿದಿದೆಹಿ ಎಂದು ಹೇಳಿದ್ದಾರೆ.

ಇನ್ನು ವಿನಾನು ನಿಮ್ಮ ಮೊದಲ ಗ್ರಾಹಕಿ ಆಗುತ್ತೇನೆಹಿ ಎಂದು ಪಡುಕೋಣೆ ತಕ್ಷಣ ಉತ್ತರಿಸಿದ್ದರು.

ತಮ್ಮ ಇನ್ಸ್ಟಾಗ್ರಾಮ್ ಹ್ಯಾಂಡಲ್ನಲ್ಲಿ ವಿಡಿಯೋವನ್ನು ಮರು ಹಂಚಿಕೊಂಡ ಕಂಗನಾ, ಪಡುಕೋಣೆ ಅವರನ್ನು ಟ್ಯಾಗ್ ಮಾಡಿ, ವಿನೀವೇ ಮೊದಲ ಗ್ರಾಹಕಿಯಾಗಬೇಕುಹಿ ಎಂದು ಪ್ರೀತಿಯಿಂದ ಆಹ್ವಾನಿಸಿದ್ದಾರೆ.

# ರಾಮ್’ ಚಿತ್ರದಲ್ಲಿ ಗಣೇಶ್ ಜೊತೆಗೆ ಮೀರಾ ಜಾಸ್ಮಿನ್: ಕನ್ನಡಕ್ಕೆ ಮತ್ತೆ ಕರೆತರಲಿದ್ದಾರಾ ವಿಖ್ಯಾತ್





ತೀವ್ರ ನಿರೀಕ್ಷೆ ಹುಟ್ಟುಹಾಕಿರುವ Yours Sincerely ರಾಮ್’ ಚಿತ್ರದಲ್ಲಿ ನಟ ರಮೇಶ್ ಅರವಿಂದ್ ಮತ್ತು ಗಣೇಶ್ ಅವರು ನಟಿಸಿದ್ದು, ಈ ಚಿತ್ರಕ್ಕೆ ಇದೇ ಮೊದಲ ಬಾರಿಗೆ ವಿಖ್ಯಾತ್ ಆ?ಯಕ್ಷನ್ ಕಟ್ ಹೇಳುತ್ತಿದ್ದಾರೆ. ಚಿತ್ರತಂಡ ವಿಶೇಷವಾಗಿ ವಿನ್ಯಾಸಗೊಳಿಸಿದ ಮತ್ತೊಂದು ಪೋಸ್ಟರ್ ಬಿಡುಗಡೆ ಮಾಡಿದ್ದು, ಇಬ್ಬರು ನಟರು ಬೈಸಿಕಲ್ ಸವಾರಿ ಮಾಡುತ್ತಿದ್ದಾರೆ. ಈ ಹಿಂದೆ ಸೈನಿಕರ ನಡುವೆ ವಿಧೂಷಕರಾಗಿ ನಿಂತಿರುವ ಪೋಸ್ಟರ್ ರಿಲೀಸ್ ಮಾಡಲಾಗಿತ್ತು.

ಸದ್ಯ ನಿರ್ಮಾಣ ಹಂತದಲ್ಲಿರುವ ಚಿತ್ರಕ್ಕೆ, ಇತ್ತೀಚೆಗೆ ಜನಪ್ರಿಯ ನೃತ್ಯ ಸಂಯೋಜಕ ಜಾನಿ ಮಾಸ್ಟರ್ ಬೆಂಗಳೂರಿನಲ್ಲಿ ಹಾಡೊಂದರ ಚಿತ್ರೀಕರಣ ನಡೆಸಿದ್ದರು. ರಾಯಲ ಸ್ಟುಡಿಯೋಸ್ ಅಡಿಯಲ್ಲಿ ಸತ್ಯ ರಾಯಲ ನಿರ್ಮಿಸಿರುವ ಈ ಚಿತ್ರದ ಮೂಲಕ ನಟಿ ಮೀರಾ ಜಾಸ್ಮಿನ್ ಕನ್ನಡ ಚಿತ್ರರಂಗಕ್ಕೆ ಮರಳುವ ಸಾಧ್ಯತೆ ಇದೆ ಎನ್ನಲಾಗಿದೆ.

ಸದ್ಯ ವಿವಿಧ ಭಾಷೆಗಳಲ್ಲಿ ಹಲವಾರು ಸಿನಿಮಾಗಳಲ್ಲಿ ಬ್ಯುಸಿಯಾಗಿರುವ ನಟಿ ಮೀರಾ ಜಾಸ್ಮಿನ್ ಅವರಿಗೆ ಕನ್ನಡ ಚಿತ್ರರಂಗಕ್ಕೆ ಹೊಸದೇನಲ್ಲ. ಅವರು ಪುನೀತ್ ರಾಜ್ಕುಮಾರ್ ನಟನೆಯ ಮೌರ್ಯ (2004) ಚಿತ್ರದಲ್ಲಿ ನಟಿಸಿದ್ದರು. ಅದಾದ ಬಳಿಕ ಅರಸು (2007) ಚಿತ್ರದಲ್ಲಿ ಪುನೀತ್ ಮತ್ತು ರಮ್ಯಾ ಜೊತೆಗೆ ನಟಿಸಿದ್ದರು. ನಟ ಶಿವರಾಜಕುಮಾರ್ ಅವರೊಂದಿಗೆ ದೇವರು ಕೊಟ್ಟ ತಂಗಿ (2009) ಮತ್ತು ಇಜ್ಜೋಡು (2010) ಚಿತ್ರಗಳಲ್ಲಿ ಕಾಣಿಸಿಕೊಂಡಿದ್ದರು.

ಮೂಲಗಳ ಪ್ರಕಾರ, ಚಿತ್ರತಂಡವು ಮೀರಾ ಜಾಸ್ಮಿನ್ ಅವರ ಪಾತ್ರದ ಬಗ್ಗೆ ಆರಂಭಿಕ ಚರ್ಚೆಗಳನ್ನು ನಡೆಸಿದೆ ಮತ್ತು ಅವರನ್ನು ಕನ್ನಡ ಚಿತ್ರರಂಗಕ್ಕೆ ಮರಳಿ ಕರೆತರುವ ಕೆಲಸ ಮಾಡುತ್ತಿದೆ. ಎಲ್ಲವೂ ಅಂದುಕೊಂಡಂತೆ ಆದ ಬಳಿಕ ಈ ಬಗ್ಗೆ ಅಧಿಕೃತ ಘೋಷಣೆ ಮಾಡಲಿದೆ ಎಂದು ಹೇಳಲಾಗಿದೆ.

# ತರುಣ್ ಸುಧೀರ್ ನಿರ್ಮಾಣದ ಪುನೀತ್ ರಂಗಸ್ವಾಮಿ ನಿರ್ದೇಶನದ ಚೊಚ್ಚಲ ಚಿತ್ರದ ‘ಮಹಾನಟಿ’ ಪ್ರಿಯಾಂಕಾ ನಾಯಕಿ!



ತರುಣ್ ಕಿಶೋರ್ ಸುಧೀರ್ ನಿರ್ಮಾಣ ಮಾಡುತ್ತಿರುವ ಪುನೀತ್ ರಂಗಸ್ವಾಮಿ ನಿರ್ದೇಶನದ ಚೊಚ್ಚಲ ಚಿತ್ರದಲ್ಲಿ ಮಹಾನಟಿ ರಿಯಾಲಿಟಿ ಶೋ ವಿಜೇತೆ ಪ್ರಿಯಾಂಕಾ ಆಚಾರ್ ಅವರನ್ನು ನಾಯಕಿಯಾಗಿ ನಟಿಸುತ್ತಿದ್ದಾರೆ.

ಮೈಸೂರು ಮೂಲದ ಪ್ರಿಯಾಂಕಾ, ನೈಜ ಜೀವನದ ಘಟನೆಗಳಿಂದ ಪ್ರೇರಿತವಾದ ಪ್ರೇಮಕಥೆಯಲ್ಲಿ ರಾಣಾ ಅವರೊಂದಿಗೆ ನಟಿಸಲಿದ್ದಾರೆ, ಇದನ್ನು ತರುಣ್ ಕಿಶೋರ್ ಕ್ರಿಯೇಟಿವೆಜ್ ಮತ್ತು ಅಟ್ಲಾಂಟಾ ನಾಗೇಂದ್ರ ಅವರ ಬ್ಯಾನರ್ಗಳ ಅಡಿಯಲ್ಲಿ ನಿರ್ಮಿಸಲಾಗುತ್ತಿದೆ.

ತರುಣ್ ಸುಧೀರ್ ಹಲವು ಹೊಸಪ್ರತಿಭೆಗಳಿಗೆ ಅವಕಾಶ ನೀಡಿದ್ದಾರೆ. ಈ ಹಿಂದೆ ಆಶಾ ಭಟ್ ಅವರನ್ನು ರಾಬರ್ಟ್ನಲ್ಲಿ ಮತ್ತು ಆರಾಧನಾ ರಾಮ್ ಅವರನ್ನು ಕಾಟೇರಾದಲ್ಲಿ ಪರಿಚಯಿಸಿದ್ದಾರೆ. ಈಗ, ಪ್ರಿಯಾಂಕಾ ಅವರಿಗೆ ಸಿನಿಮಾದಲ್ಲಿ ದೊಡ್ಡ ಬ್ರೇಕ್ ನೀಡುತ್ತಿದ್ದಾರೆ. ಮಹಾನಟಿಯಲ್ಲಿ ಜಡ್ಜ್ ಆಗಿದ್ದರು. ಈ ವೇಳೆ ಆಕೆಯ ಅಭಿನಯದಿಂದ ಆಕರ್ಷಿತರಾದರು ಮತ್ತು ಅವರಲ್ಲಿ ಅಪಾರ ಸಾಮರ್ಥ್ಯವನ್ನು ಕಂಡರು.

ನಾನು ರಂಗಭೂಮಿಯಲ್ಲಿ ತರಬೇತಿ ಪಡೆಯಲು ಪ್ರಾರಂಭಿಸಿದಾಗ, ನಾನು ದೂರದರ್ಶನದಲ್ಲಿನಟಿಸುವ ಕನಸು ಕಂಡೆ. ಮಹಾನಟಿಯನ್ನು ಗೆಲ್ಲುತ್ತೇನೆ ಎಂದು ನಾನು ಎಂದಿಗೂ ಊಹಿಸಿರಲಿಲ್ಲ. ಮಹಾನಟಿ ಗೆದ್ದ ನಂತರ ಅವಕಾಶ ತೆರೆಯಿತು. ತರುಣ್ ಸರ್ ಅವರ ಬೆಂಬಲ ಅಪಾರವಾಗಿದೆ.

# ಶ್ರೀಮುರಳಿ ನಟನೆಯ ‘ಪರಾಕ್’ ಚಿತ್ರಕ್ಕೆ ‘ಸಪ್ತ ಸಾಗರದಾಚೆ ಎಲ್ಲೋ’ ಖ್ಯಾತಿಯ ಚರಣ್ ರಾಜ್ ಸಂಗೀತ



ಟಗರು, ಸಲಗ ಮತ್ತು ಸಪ್ತ ಸಾಗರದಾಚೆ ಎಲ್ಲೋ ಚಿತ್ರಗಳಿಗೆ ಹಿಟ್ ಹಾಡುಗಳನ್ನು ಕೊಟ್ಟ ಚರಣ್ ರಾಜ್ ಇದೀಗ ರೋರಿಂಗ್ ಸ್ಟಾರ್ ಶ್ರೀಮುರಳಿ ನಟನೆಯ ಮುಂಬರುವ ಚಿತ್ರ ‘ಪರಾಕ್’ ಚಿತ್ರಕ್ಕೆ ಸಂಗೀತ ಸಂಯೋಜಿಸಲು ಸಿದ್ಧರಾಗಿದ್ದಾರೆ.

ಪರಾಕ್ ಚಿತ್ರಕ್ಕೆ ಇದೇ ಮೊದಲ ಬಾರಿಗೆ ಹಾಲೇಶ್ ಕೋಗುಂಡಿ ಆ?ಯಕ್ಷನ್ ಕಟ್ ಹೇಳುತ್ತಿದ್ದು, ಬ್ರಾಂಡ್ ಕಾರ್ಪೊರೇಟ್ ಪ್ರೊಡಕ್ಷನ್ ಲಿಮಿಟೆಡ್ ನಿರ್ಮಾಣದ ಜವಾಬ್ದಾರಿ ಹೊತ್ತುಕೊಂಡಿದೆ. ಬಘೀರ ಚಿತ್ರದ ನಂತರ ಶ್ರೀಮುರಳಿ ಪರಾಕ್ ಚಿತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ಇದೀಗ ತೀವ್ರ ನಿರೀಕ್ಷೆ ಹುಟ್ಟುಹಾಕಿದೆ. ಮಾರ್ಚ್ನಲ್ಲಿ ಚಿತ್ರೀಕರಣ ಪ್ರಾರಂಭಿಸಲು ಚಿತ್ರತಂಡ ಯೋಜನೆ ರೂಪಿಸಿದೆ. ಚರಣ್ ರಾಜ್ ಅವರ ವಿಶಿಷ್ಟ ಶೈಲಿನ ಸಂಗೀತವು ಚಿತ್ರಕ್ಕೆ ಹೊಸ ಮೆರುಗು ನೀಡುವ ನಿರೀಕ್ಷೆಯಿದೆ.

ಈಮಧ್ಯೆ, ಬಘೀರ ಚಿತ್ರದ ಯಶಸ್ಸಿನಲ್ಲಿ ತೇಲುತ್ತಿರುವ ನಟ ಶ್ರೀಮುರಳಿ ಈ ಚಿತ್ರಕ್ಕಾಗಿ ಸಾಕಷ್ಟು ತಯಾರಿ ನಡೆಸುತ್ತಿದ್ದಾರೆ. ಪರಾಕ್ ಜೊತೆಗೆ, ಅವರು ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ಅಡಿಯಲ್ಲಿ ಇನ್ನೂ ಹೆಸರಿಸದ ಚಿತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ. ಇದು ಅದರ 47ನೇ ಚಿತ್ರವಾಗಿದೆ.

## ಮುರುಘಾ ಮಠದಲ್ಲಿ ಸಾಮೂಹಿಕ ಕಲ್ಯಾಣ ಮಹೋತ್ಸವ

# 5 ನವಜೋಡಿ ದಾಂಪತ್ಯ ಜೀವನಕ್ಕೆ ಪದಾರ್ಪಣೆ



**ಚಿತ್ರದುರ್ಗ :** ನಗರದ ಬಸವಕೇಂದ್ರ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ನಡೆದ 35ನೇ ವರ್ಷದ 2ನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದಲ್ಲಿ 5 ಜೋಡಿಗಳ ವಿವಾಹ ನೆರವೇರಿತು.

ಕಾರ್ಯಕ್ರಮದಲ್ಲಿ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಮತ್ತು ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ ಸಾನಿಧ್ಯ ವಹಿಸಿ ಮಾತನಾಡಿ, ಇಂದಿನ ಸಂಬಂಧಗಳು ದುರಂತದ ಕಡೆಗೆ ಸಾಗುತ್ತಿರುವುದು ಅತ್ಯಂತ ಕಳವಳಕಾರಿಯಾಗಿದೆ. ಸಂಸಾರದಲ್ಲಿ ಹೆಂಡತಿ ಅಂದರೆ ಗುಲಾಮಳು ಎಂದು ಕೊಳ್ಳಬಾರದು. ದೇಶದ ಸಂಸ್ಕೃತಿಯಲ್ಲಿ ಹೆಣ್ಣಿಗೆ ಅಪಾರ ಗೌರವ ನೀಡಲಾಗಿದೆ. ಕುಟುಂಬದಲ್ಲಿ ಪತಿಯು ಸಹ ಅನೇಕ ರೀತಿಯ ಜವಾಬ್ದಾರಿಗಳನ್ನು ನಿರ್ವಹಿಸುತ್ತಾನೆ, ಹಾಗಾಗಿ ಗಂಡ–ಹೆಂಡತಿ ಮಧ್ಯೆ ಸಾಮರಸ್ಯ ಕಾಪಾಡಿಕೊಳ್ಳುವುದು ಅತಿಮುಖ್ಯ ಎಂದು ಹೇಳಿದರು.

ವಿವಾಹ ಎನ್ನುವುದು ಪವಿತ್ರವಾದ ಸಂಬಂಧ. ಇದ್ದುದರಲ್ಲಿ ನೆಮ್ಮದಿಯಾಗಿ ಬದುಕು ಸಾಗಿಸಬೇಕು. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಮಠ ಎಂದರೆ ಮುರುಘಾಮಠವಾಗಿದೆ. ಮನುಷ್ಯ ಸರಳವಾಗಿ ಬದುಕಬೇಕು. ನವದಂಪತಿಗಳು ಇಂದು ಶ್ರೀಮಠದಲ್ಲಿ ಆದರ್ಶ ವಿವಾಹವಾಗಿ ಕುಟುಂಬಕ್ಕೆ ರಾಜ್ಯಕ್ಕೆ ಮಾದರಿಯಾಗಿದ್ದೀರಿ ಎಂದು ಸಂತಸ ವ್ಯಕ್ತಪಡಿಸಿದರು.

ಡಾ.ಬಸವಪ್ರಭು ಸ್ವಾಮೀಜಿ ಮಾತನಾಡಿ, ದಾಂಪತ್ಯ ಜೀವನ ಸ್ವರ್ಗ ಆಗಬೇಕು. ಅತ್ತೆ–ಸೊಸೆ ಪ್ರೀತಿಯಿಂದ ಮಾತನಾಡಬೇಕು. ಪ್ರತಿಯೊಬ್ಬರು ಒಬ್ಬರಿಗೊಬ್ಬರು ಗೌರವ ಕೊಡಬೇಕು. ಕುಟುಂಬ, ತಂದೆ–ತಾಯಿ ಎಲ್ಲರನ್ನು ಪ್ರೀತಿಯಿಂದ ನೋಡಬೇಕು. ಪರಸ್ಪರರ ಮಧ್ಯೆ ದುರಹಂಕಾರ ಮೂಡಬಾರದು ಎಂದರು.

ಗುರುಮಠಕಲ್‌ನ ಶ್ರೀ ಶಾಂತವೀರ ಗುರು ಮುರುಘರಾಜೇಂದ್ರ ಸ್ವಾಮೀಜಿ ಮಾತನಾಡಿದರು.

ಈ ವೇಳೆ ಕುವೆಂಪು ವಿಶ್ವವಿದ್ಯಾನಿಲಯದಿಂದ ಪಿಎಚ್ ಡಿ ಮಹಾಪ್ರಬಂಧವನ್ನು ಮಂಡಿಸಿ ಡಾಕ್ಟರೇಟ್ ಪದವಿಗೆ ಭಾಜನರಾದ ಡಾ.ಬಸವಪ್ರಭು ಸ್ವಾಮೀಜಿ ಅವರನ್ನು ಶ್ರೀ ಮಠದಿಂದ ಹಾಗೂ ಲಿಂಗಾಯತ ನೌಕರರ ಬಳಗದಿಂದ ಸನ್ಮಾನಿಸಿ ಗೌರವಿಸಲಾಯಿತು.

## ಯುವನಿಧಿ: ಫೆ.15 ರವರೆಗೆ ವಿಶೇಷ ನೋಂದಣಿ

**ಚಿತ್ರದುರ್ಗ:** ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯಡಿಯಲ್ಲಿ 2022–23ನೇ ಸಾಲಿನಲ್ಲಿ ತೇರ್ಗಡೆಯಾದ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ಸಂದಾಯ ಮಾಡಲಾಗುತ್ತಿದೆ. ಅದೇ ರೀತಿ 2023–24ನೇ ಸಾಲಿನಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲಮೋ ಅರ್ಹತೆ ಹೊಂದಿದವರು ಯುವನಿಧಿ ಯೋಜನೆಯ ನಿರುದ್ಯೋಗಿ ಭತ್ಯೆ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ.

ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಇದೇ ಫೆ.15 ರವರೆಗೆ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಂಡಿದ್ದು, ಜಿಲ್ಲೆಯಾದ್ಯಂತ ಇರುವ ಪದವಿ ಕಾಲೇಜುಗಳು ಹಾಗೂ ಡಿಪ್ಲಮೋ ಕಾಲೇಜುಗಳು ಮತ್ತು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ವಿಶೇಷ ನೋಂದಣಿ ಕೌಂಟರ್ ತೆರೆಯಲಾಗಿದೆ. ಅಲ್ಲದೇ ಗ್ರಾಮ ಒನ್, ಕರ್ನಾಟಕ ಒನ್, ಚಿತ್ರದುರ್ಗ ಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲೂ ನಿರಂತರವಾಗಿ ಯುವನಿಧಿ ನೋಂದಣಿ ಮಾಡಿಕೊಳ್ಳಲಾಗುತ್ತಿದೆ.

ನಿರುದ್ಯೋಗಿ ಯುವಕ–ಯುವತಿಯರು ಈ ವಿಶೇಷ ನೋಂದಣಿ ಅಭಿಯಾನದ ಸದುಪಯೋಗವನ್ನು ಪಡೆದುಕೊಂಡು, ಯುವನಿಧಿ ನೋಂದಣಿ ಮಾಡಿಸಿಕೊಳ್ಳಲು ಈ ಮೂಲಕ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ವೈಶಾಲಿ ಗೇಟ್, ಸ್ಟೇಡಿಯಂ ರೋಡ್, ಚಿತ್ರದುರ್ಗ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಉದ್ಯೋಗಾಧಿಕಾರಿ ಡಿ.ರವೀಂದ್ರ ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ತಾಂತ್ರಿಕ ಸಹಾಯಕರು, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ಪ್ರಾದೇಶಿಕ ವಿಭಾಗ, ದಾವಣಗೆರೆ – 577 005.**

ದೂರವಾಣಿ ಸಂಖ್ಯೆ: 08192–262527 ಇ–ಮೇಲ್:– dcfdvg@gmail.com

ಸಂಖ್ಯೆ: ಸಅಸಂ/ದಾವಿ/ಟೆಂಡರ್/ಸಿಆರ್/2024–25 ದಿನಾಂಕ: 06–02–2025

**ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ**

2024–25ನೇ ಸಾಲಿನಲ್ಲಿ ದಾವಣಗೆರೆ ಅರಣ್ಯ ವಿಭಾಗದ ಹೊನ್ನಾಳಿ ವಲಯದಲ್ಲಿ 2024–25ನೇ ಸಾಲಿನಲ್ಲಿ ಕೆ.ಎಫ್.ಡಿ.ಎಫ್. ಯೋಜನೆಯಡಿ ಮುಂಗಡ ಕಾಮಗಾರಿ [ಸಸಿ ಬೆಳೆಸುವುದು ಸೇರಿದಂತೆ] ನಿರ್ವಹಿಸಲು ದಿನಾಂಕ : 06–02–2025 ರಂದು ಪ್ರಕಟಣೆ ಹೊರಡಿಸಿ, ದಿನಾಂಕ: 15–02–2025 ರಂದು ಬೆಳಿಗ್ಗೆ : 11:00 ಗಂಟೆಯವರೆಗೆ ನಿಗಧಿಪಡಿಸಲಾಗಿರುತ್ತದೆ. ದಿನಾಂಕ: 15–02–2025ರ ಟೆಂಡರ್‌ನಲ್ಲಿ ಯಾರೂ ಭಾಗವಹಿಸದ ಸಂದರ್ಭದಲ್ಲಿ ಮರು ಟೆಂಡರನ್ನು ದಿನಾಂಕ: 25–02–2025ರ ಬೆಳಿಗ್ಗೆ 11:00 ಗಂಟೆಯವರೆಗೆ ನಿಗಧಿಪಡಿಸಿ ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ನಿಬಂಧನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೇಳೆಯಲ್ಲಿ ಈ ಕಛೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ.

ವಾಸಾಇ/ದಾವಣಗೆರೆ/725/ ಕೆಎಸ್‌ಎಂಸಿಎ/2024–25

**ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ತಾಂತ್ರಿಕ ಸಹಾಯಕರು, ದಾವಣಗೆರೆ ವಿಭಾಗ, ದಾವಣಗೆರೆ**



ಸಮಗ್ರ ಶಿಕ್ಷಣ ಕರ್ನಾಟಕ ದಾವಣಗೆರೆ

**ಉಪನಿರ್ದೇಶಕರು(ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ.**

ಸಂಖ್ಯೆ:ಸಶಿಕ/ಯೋ–01/ICT DT/STL/2024-25 ದಿನಾಂಕ:07/02/2025

**ಇ–ಪ್ರೊಕ್ಯೂರ್‌ಮೆಂಟ್ ಅಲ್ಪಾವಧಿ ಟೆಂಡರ್ ಪ್ರಕಟಣೆ**

**(ಕೆ.ಪಿ.ಪಿ.ಪಿ ಪೋರ್ಟಲ್ ಮೂಲಕ ಮಾತ್ರ) (ದ್ವಿ–ಲಕೋಟೆ ಪದ್ಧತಿ)**

2021–22ನೇ ಸಾಲಿನ ಸಮಗ್ರ ಶಿಕ್ಷಣ ಕರ್ನಾಟಕ ಅನುಷ್ಠಾನಕ್ಕಾಗಿ ICT ಮತ್ತು DIGITAL INITIATIVES (SECONDARY) ಚಟುವಟಿಕೆಯಡಿ ಸರ್ಕಾರಿ ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಲ್ಯಾಬ್‌ಗಳನ್ನು ಸ್ಥಾಪಿಸಲು ಮತ್ತು ಪ್ರೌಢಶಾಲೆಗಳಿಗೆ ಸೃಷ್ಠಿ ಟಿಂಕರಿಂಗ್ ಲ್ಯಾಬ್ ಸ್ಥಾಪಿಸಲು ಆಸಕ್ತ ಅರ್ಹ ನೊಂದಾಯಿತ ಏಜೆನ್ಸಿ/ಸಂಸ್ಥೆ/ಉತ್ಪಾದಕರಿಂದ ಅಲ್ಪಾವಧಿ ಇ–ಪ್ರೊಕ್ಯೂರ್‌ಮೆಂಟ್‌ನಲ್ಲಿ ಈ ಕೆಳಕಂಡಂತೆ ಟೆಂಡರ್ ಆಹ್ವಾನಿಸಲಾಗಿದೆ.

Particulars:- **(1)** TENDER FOR PURCHASE, SUPPLY AND INSTALLATION OF THE LAPTOP, AIO, UPS-2KV&1KV TO 03 GOVT HIGH SCHOOL IN THE DAVANAGERE DISTRICT.

Tender Approximate Amount:- Rs.15,60,000/-

**(1 )** TENDER FOR PURCHASE OF SUPPLY AND INSTALLATION OF LAB MATERIAL & EQUIPMENT'S TO SRISHTI TINKERING LABS FOR 05 GOVERNMENT HIGH SCHOOLS IN DAVANAGERE DISTRICT/ CALL-2. Tender Approximate Amount:- Rs.39,25,000/-

ದಿನಾಂಕ:07/02/2025 ರಿಂದ ದಿನಾಂಕ:15/02/2025ರ ಸಂಜೆ:5.30ರವರೆಗೆ www.kppp.karnataka.gov.in ಜಾಲತಾಣದಲ್ಲಿ ಅಳವಡಿಸುವುದು. ತಾಂತ್ರಿಕ ಬಿಡ್ ತೆರೆಯುವ ದಿನಾಂಕ:17/02/2025ರ ಬೆಳಿಗ್ಗೆ 11.00 ಗಂಟೆಗೆ ಆರ್ಥಿಕ ಬಿಡ್ ತೆರೆಯುವ ದಿನಾಂಕ:19/02/2025ರ ಬೆಳಗ್ಗೆ 11.00 ಗಂಟೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:–9448999394, 9480886935

ವಾಸಾಇ/ದಾವಣಗೆರೆ/ 729/ಕೆಎಸ್‌ಎಂಸಿಎ/ 2024–25

**ಸಹಿ/– ಉಪನಿರ್ದೇಶಕರು(ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ, ಶಾ.ಶಿ.ಇಲಾಖೆ, ದಾವಣಗೆರೆ**


## ಪತ್ರಕರ್ತರಿಗೆ ನಿವೇಶನ ನೀಡಲು ಆದ್ಯತೆ: ಡಿಕೆ ಶಿವಕುಮಾರ್ ಭರವಸೆ

**ಬೆಂಗಳೂರು:** ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಪತ್ರಕರ್ತರಿಗೆ ಆದ್ಯತೆ ಮೇರೆಗೆ ನಿವೇಶನ ನೀಡಲು ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯ 2023 ಮತ್ತು 2024ನೇ ಸಾಲಿನ ವಾರ್ಷಿಕ ಹಾಗೂ ವಿಶೇಷ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಉಪ ಮುಖ್ಯಮಂತ್ರಿ, ಪತ್ರಕರ್ತರು ಗೌರವಯುತವಾಗಿ ಬದುಕಲು ನಿವೇಶನ ಅಗತ್ಯ. ಯಾರೂ ಯಾರಿಗೂ ನಿವೇಶನ ಮೀಸಲಿಡುತ್ತೇವೆ. ಪತ್ರಕರ್ತರಿಗೂ ನಿವೇಶನ ಮೀಸಲಿಡಬೇಕು ಎಂದು ಹೇಳಿದರು.ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಮಾತ್ರವಲ್ಲ. ಖಾಸಗಿ ಬಡಾವಣೆಗಳಲ್ಲಿ ನಿವೇಶನಗಳಿಗೆ ಅನುಮೋದನೆ ನೀಡುವಾಗ ಅದರಲ್ಲಿ ಪತ್ರಕರ್ತರಿಗೆ ನಿಗದಿತ ಪ್ರಮಾಣದಲ್ಲಿ ನಿವೇಶನ ಮೀಸಲಿಡಬೇಕು ಎಂದು ಷರತ್ತು ವಿಧಿಸಬೇಕು ಎಂದರು.ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಮಾತನಾಡಿ, ಪತ್ರಕರ್ತರಿಗೆ ಆರೋಗ್ಯ ವಿಮೆ ಒದಗಿಸುವ ಯೋಜನೆ ಬಗ್ಗೆ ಈಗಾಗಲೇ ಎರಡು ಬಾರಿ ಸಭೆ ನಡೆಸಿ ಚರ್ಚಿಸಲಾಗಿದೆ. ಕೆಲವೇ ದಿನಗಳಲ್ಲಿ ಜಾರಿಗೆ ಬರಲಿದೆ ಎಂದು ತಿಳಿಸಿದರು. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನುಂ ಮಾತನಾಡಿ, ವಾರ್ಷಿಕ ಪ್ರಶಸ್ತಿಯ ಮೊತ್ತವನ್ನು ರೂ. 25,000 ದಿಂದ ರೂ. 50,000ಕ್ಕೆ ಹೆಚ್ಚಿಸಲಾಗಿದೆ. ಜೀವಮಾನದ ಸಾಧನೆ ಮೊತ್ತವನ್ನು ರೂ. 1,00000ಕ್ಕೆ ಏರಿಸಲಾಗಿದೆ ಎಂದು ವಿವರಿಸಿದರು.2023ನೇ ಸಾಲಿನ ಜೀವಮಾನದ ಸಾಧನೆಯ ವಿಶೇಷ ಪ್ರಶಸ್ತಿಗೆ ಹಿರಿಯ ಪತ್ರಕರ್ತ ಅ.ಚ. ಶಿವಣ್ಣ ಹಾಗೂ 2024ನೇ ಸಾಲಿನ ಜೀವಮಾನದ ಸಾಧನೆಯ ವಿಶೇಷ ಪ್ರಶಸ್ತಿಗೆ ಭಾಜನರಾದ ವಾರ್ತಾ ಭಾರತಿಯ ಪ್ರಧಾನ ಸಂಪಾದಕ ಅಬ್ದುಸ್ಸಲಾಮ್ ಪುತ್ತಿಗೆ ಅವರಿಗೆ ಪ್ರದಾನ ಮಾಡಲಾಯಿತು

## ಅಪರಿಚಿತ ವಾಹನ ಡಿಕ್ಕಿ ಕೋತಿ ಸಾವು



**ಬಣಕಲ್:** ಅಪಘಾತದಲ್ಲಿ ಮೃತಪಟ್ಟ ಕೋತಿಯ ಶಾಸ್ತ್ರೋಕ್ತ ಅಂತ್ಯಸಂಸ್ಕಾರ ನೆರವೇರಿಸಿದ ಮತ್ತಿಕಟ್ಟೆ ಹರೀಶ್ ಹಾಗೂ ಯುವಕರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತವಾಗಿದೆ.ಚಾರ್ಮಾಡಿಯ ಘಾಟಿಯಲ್ಲಿ ರಸ್ತೆ ದಾಟುತ್ತಿದ್ದಾಗ ಕೋತಿಗೆ ಕಾರು ಡಿಕ್ಕಿಯಾಗಿದೆ. ಸ್ಥಳದಲ್ಲೇ ಕೋತಿ ಸಾವಿಗೀಡಾಗಿದ್ದು, ರಸ್ತೆಯಲ್ಲಿ ತೆರಳುತ್ತಿದ್ದವರ ಕರುಳು ಹಿಂಡುವಂತಾಗಿದೆ. ಅಪಘಾತ ಮಾಡಿದ ಕಾರು ನಿಲ್ಲಿಸದೇ ಹೋಗಿದ್ದರಿಂದ ಕೋತಿ ನರಳುತ್ತ ರಸ್ತೆ ಮಧ್ಯದಲ್ಲೇ ಪ್ರಾಣಬಿಟ್ಟಿದೆ .ಅಲೇಖಾನ್‌ನಲ್ಲಿ ವಾರ್ಷಿಕ ಪೂಜೆ ಮುಗಿಸಿಕೊಂಡು ಅದೇ ಮಾರ್ಗದಲ್ಲಿ ಬರುತ್ತಿದ್ದ ಮತ್ತಿಕಟ್ಟೆಯ ಹರೀಶ್ ಹಾಗೂ ಜಾವಳಿ ಗ್ರಾಮದ ಯುವಕರು ವಾಹನ ನಿಲ್ಲಿಸಿ ಕೂಡಲೇ ಕೋತಿಯ ಮೃತದೇಹವನ್ನು ರಸ್ತೆಯಿಂದ ಎತ್ತಿಕೊಂಡು ಧಾರ್ಮಿಕ ವಿಧಿ ವಿಧಾನಗಳ ಮೂಲಕ ಅಲ್ಲೇ ಸಮೀಪದಲ್ಲೇ ಮಣ್ಣು ಮಾಡುವ ಮೂಲಕ ಅಂತ್ಯ ಸಂಸ್ಕಾರ ನಡೆಸಿದರು. ಯುವಕರ ಮಾನವೀಯ ಕಾರ್ಯಕ್ಕೆ ಶ್ಲಾಘನೆ ವ್ಯಕ್ತವಾಗಿದೆ.

# ಅಡಿಕೆ ತೋಟದಲ್ಲಿ ಕ್ಷಮಾ ಕಟ್ಟೆ



ಮಾರುಕಟ್ಟೆ ಬೇಡಿಕೆಗೆ ಹೊಂದಿಕೆಯಾಗುವಂತೆ ತರಕಾರಿ, ಹೂವುಗಳನ್ನು ಬೆಳೆಯುತ್ತಿದ್ದೇನೆ. ಸ್ಥಳೀಯವಾದ ಭತ್ತದ ತಳಿಯನ್ನು ಬಳಸಿ ಗದ್ದೆ ಮಾಡುತ್ತಿದ್ದೇವೆ. ಕುರಿ, ಕೋಳಿ ಸಾಕಣೆಯೂ ಆದಾಯ ನೀಡುತ್ತಿದೆ. ಮಾರುಕಟ್ಟೆಗೆ ಅನುಕೂಲವಾಗುವಂತೆ ವಾಟ್ಸಪ್ ಗ್ರೂಪ್‌ಗಳನ್ನು ಬಳಕೆ ಮಾಡುತ್ತಿದ್ದೇನೆ.

**–ಕ್ಷಮಾ ಕಟ್ಟೆ,** ಸಾಧಕ ರೈತ ಮಹಿಳೆ.

**ಶಿವಮೊಗ್ಗ:** ಕೃಷಿ ಕ್ಷೇತ್ರದಲ್ಲೂ ಮಹಿಳೆಯರು ತಮ್ಮ ಛಾಪು ಮೂಡಿಸಿರುವ ಅದೆಷ್ಟೋ ಉದಾಹರಣೆಗಳಿವೆ. ಬದಲಾದ ಕಾಲಘಟ್ಟದಲ್ಲಿ ಅಧುನಿಕತೆಯನ್ನು ಅಳವಡಿಸಿ ಕೊಂಡು ಕೃಷಿಯಲ್ಲಿ ಯಶಸ್ವಿಯಾದ ಅನೇಕ ಮಹಿಳೆಯರು ನಮ್ಮ ನಡುವೆ ಇದ್ದಾರೆ. ತೀರ್ಥಹಳ್ಳಿ ಸಮೀಪದ ನೆರಟೂರು ಬೋರ್ಡ್‌ಗಲ್ ಗ್ರಾಮದ ಆಧು ನಿಕ ರೈತ ಮಹಿಳೆ ಕ್ಷಮಾ ಕಟ್ಟೆ ಕೂಡಾ ಒಬ್ಬರು.

ಬೆಂಗಳೂರಿನಲ್ಲಿ ಅನಿಮೇಷನ್ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದ ಕ್ಷಮಾ ಕಟ್ಟೆ ಎಂಟು ವರ್ಷದ ಹಿಂದೆ ಗ್ರಾಮಕ್ಕೆ ಮರಳಿದರು. ತಂದೆ ಕಾಲದಿಂದಲೂ ಮಾಡು ತ್ತಿದ್ದ ಕೃಷಿಗೆ ಹೊಸ ಟಚ್ ನೀಡಿದರು. ಕ್ರಮೇಣ ಕೃಷಿಯಲ್ಲಿ ಆಳವಾದ ಜ್ಞಾನ ಪಡೆದ ಪರಿಣಾಮ ಇಂದು ಸಮಗ್ರ ಕೃಷಿಯಲ್ಲಿ ಮನೆ ಮಾತಾಗಿದ್ದಾರೆ. ಪುಷ್ಪ ಕೃಷಿ, ಕೋಳಿ ಸಾಕಣೆ, ಕುರಿ ಸಾಕಣೆ, ಭತ್ತ, ಅಡಕೆ, ಡ್ರ್ಯಾಗನ್ ಫ್ರೂಟ್, ತೆಂಗು...ಹೀಗೆ ಬಗೆ ಬಗೆಯ ಬೆಳೆಯ ಮೂಲಕ ಕ್ಷಮಾ ಕಟ್ಟೆ ಯಶಸ್ಸು ಕಂಡುಕೊಂಡಿದ್ದಾರೆ. ಹೂವು, ತರಕಾರಿಗೆ ಸ್ಥಳೀಯವಾಗಿ ಮಾರುಕಟ್ಟೆಯನ್ನು ಕಂಡುಕೊಂಡಿರುವ ಇವರು, ವರ್ಷಪೂರ್ತಿ ತರಕಾರಿ, ಸೊಪ್ಪು ಬೆಳೆದು ಆದಾಯ ಗಳಿಸುತ್ತಿದ್ದಾರೆ. ಪತಿ ಲಿಂಗರಾಜ್ ಇವರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಸಹಕಾರ ನೀಡುತ್ತಿದ್ದಾರೆ.

ಎರಡು ಪಾಲಿಹೌಸ್‌ಗಳನ್ನು ನಿರ್ಮಿಸಿಕೊಂಡಿದ್ದಾರೆ. ಒಂದರಲ್ಲಿ ಚೆಂಡು ಹೂವು, ಸೇವಂತಿಗೆ, ಮತ್ತೊಂದರಲ್ಲಿ ಬೀನ್ಸ್, ಹೀರೆಕಾಯಿ, ಬಗೆ ಬಗೆಯ ಸೊಪ್ಪುಗಳು, ನವಿಲುಕೋಸು, ಟೊಮ್ಯಾಟೊ ಮುಂತಾದ ತರಕಾರಿಗಳನ್ನು ಬೆಳೆ ಯುತ್ತಿದ್ದಾರೆ. ಆರಂಭದಲ್ಲಿ ಪುಷ್ಪ ಕೃಷಿಗೆ ಹೆಚ್ಚು ಒತ್ತು ನೀಡಿ, ಆಂತೋರಿಯಂ, ಜರ್ಬರಾ ಮುಂತಾದ ಹೂವುಗಳನ್ನು ಬೆಳೆಯಬೇಕೆಂದಿದ್ದೆ. ಅದರ ಬಗ್ಗೆ ಹೆಚ್ಚೇನೂ ಜ್ಞಾನವಿಲ್ಲದ ಕಾರಣ ಕೈ ಬಿಟ್ಟು ಚೆಂಡು ಹೂವು, ಸೇವಂತಿಗೆ ಬೆಳೆ ಯಲು ನಿರ್ಧರಿಸಿದೆ




ಎಂದು ಕ್ಷಮಾ ಆರಂಭದ ದಿನಗಳನ್ನು ನೆನಪಿಸಿಕೊಂಡಿದ್ದಾರೆ.ಒಟ್ಟು ಜಮೀನಿನ ಎರಡು ಎಕರೆಯಲ್ಲಿ ಭತ್ತ ಬೆಳೆಯಲಾಗುತ್ತಿತ್ತು. ಉಳಿದ ಭೂಮಿಯನ್ನು ಹಾಗೆಯೇ ಬಿಟ್ಟಿದ್ದರು. ಅದನ್ನು ಸದ್ಬಳಕೆ ಮಾಡಿಕೊಳ್ಳಲು ತೀರ್ಮಾನಿಸಿದೆ. ಅದರ ಪರಿಣಾಮವಾಗಿ ಇಂದು ಒಂದು ಎಕರೆಯಲ್ಲಿ ಅಡಕೆ ಫಸಲು ಬರುತ್ತಿದೆ. ಉಳಿದ ಎರಡು ಎಕರೆಯಲ್ಲಿ ಕೆಲವೇ ವರ್ಷಗಳಲ್ಲಿ ಫಸಲು ಕೈಸೇರಲಿದೆ. ಕೋಳಿ ಹಾಗೂ ಕುರಿ ಸಾಕಣೆಗೆ ಪ್ರತ್ಯೇಕ ಶೆಡ್ ನಿರ್ಮಿಸಿಕೊಂಡಿ ದ್ದೇನೆ ಎಂದು ತಮ್ಮ ಸಮಗ್ರ ಕೃಷಿಯ ಬಗ್ಗೆ ವಿವರಣೆ ನೀಡುತ್ತಾರೆ ಕ್ಷಮಾ ಕಟ್ಟೆ.ಇವರ ಸಾಧನೆಯನ್ನು ಪರಿಗಣಿಸಿ ಕೃಷಿ ಇಲಾಖೆಯಿಂದ 2020–21ರಲ್ಲಿ ತೀರ್ಥಹಳ್ಳಿ ತಾಲೂಕಿನ ಸಾಧಕ ರೈತ ಮಹಿಳೆ ಪುರಸ್ಕಾರ ನೀಡಿ ಗೌರವಿಸ ಲಾಗಿದೆ. ಸಹ್ಯಾದ್ರಿ ಪ್ರಕಾಶನದವರು ಇವರ ಸಮಗ್ರ ಕೃಷಿಯನ್ನು ಗುರುತಿಸಿ ಸನ್ಮಾನಿಸಿದ್ದಾರೆ. ಮನಸ್ಸಿದ್ದರೆ ಮಾರ್ಗವಿದೆ ಎಂಬುದಕ್ಕೆ ಕ್ಷಮಾ ಜ್ವಲಂತ ಉದಾ ಹರಣೆ. ರಾಜಧಾನಿಯಲ್ಲಿ ಕೈ ತುಂಬಾ ಸಂಬಳ ಬರುವ ಕೆಲಸವನ್ನು ಬಿಟ್ಟು ಕೃಷಿಯತ್ತ ಮುಖ ಮಾಡಿರುವುದು ಇತರರಿಗೂ ಪ್ರೇರಣೆಯಾಗಿದೆ.


## ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನೂತನ ಅಧ್ಯಕರ ಆಯ್ಕೆ

**ಚಿಕ್ಕಮಗಳೂರು:** ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕರಾಗಿ ಎಂ.ಎಸ್.ಜಯಚಂದ್ರ, ಉಪಾಧ್ಯಕ್ಷರಾಗಿ ಷಕೀಲ್‌ಅಹಮದ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಡಿ.ಟಿ.ನಾಗರಾಜ್ ಘೋಷಿಸಿದರು. ನಂತರ ನಡೆದ ಅಭಿನಂದನಾ ಸಮಾರಂಭದಲ್ಲಿ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಸಮಾಜ ಸೇವಕ ಮೈಲಿಮನೆ ಪೂರ್ಣೇಶ್ ಅಭಿನಂದಿಸಿ ಮಾತನಾಡಿ, ರೈತರ ಸಮಸ್ಯೆಗಳಿಗೆ ಸ್ಪಂಧಿಸಿ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ರೀತಿಯಲ್ಲಿ ಪರಿಹಾರ ಒದಗಿಸಿಸುತ್ತಾರೆಂಬ ಬಹಳ ನಿರೀಕ್ಷೆ ಇದೆ. ತಮ್ಮ ಆಡಳಿತ ಅವದಿಯಲ್ಲಿ ಹೆಚ್ಚು ಪರೋಪಕಾರಿ ಕಾರ್ಯಗಳನ್ನು ನಿರ್ವಹಿಸಲಿ ಎಂದರು. ಮೈಲಿಮನೆ ಪಂಚಾಯ್ತಿ ಮಾಜಿ ಅಧ್ಯಕ್ಷ ಚೇತನ್‌ಗೌಡ ಮಾತನಾಡಿ, ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷ ಉಪಾಧ್ಯಕರುಗಳು ಸಂಘದ ಬೆಳವಣಿಗೆಗೆ ಸಹಕರಿಸಬೇಕು. ರೈತರ ಸಮಸ್ಯೆಗಳನ್ನು ಸಾಮಾನ್ಯವಾಗಿ ಪರಿಗಣಿಸಿ ಕಡೆಗಣಿಸದೇ ಎಲ್ಲಾ ಸಮಸ್ಯೆಗಳಿಗೂ ವ್ಯವಸ್ಥಿತವಾದ ಪರಿಹಾರ ನೀಡಿ ಸಂಘವನ್ನು ಇನ್ನಷ್ಟು ಭದ್ರಗೊಳಿಸಿ ಎಂದರು.

ಸಂಘದ ಅಧ್ಯಕ್ಷ ಎಂ.ಎಸ್ ಜಯಚಂದ್ರ, ಉಪಾಧ್ಯಕ್ಷ ಷಕೀಲ್ ಅಹಮದ್ ಮಾತನಾಡಿದರು.ಈ ಸಂಧರ್ಭದಲ್ಲಿ ಮಾಜಿ ಶಾಸಕ ಬಿ.ಬಿ.ನಿಂಗಯ್ಯ, ಜಿಲ್ಲಾ ಒಕ್ಕಲಿಗರ ಸಂಘದ ಉಪಾಧ್ಯಕ್ಷ ಟಿ.ಡಿ.ಮಲ್ಲೇಶ್, ನಿರ್ದೇಶಕ ರತೀಶ್ ಕುಮಾರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಸತೀಶ್, ಮುಗುಳುವಳ್ಳಿ ನಿರಂಜನ್, ಎಂ.ಜಿ.ಪೂರ್ಣೇಶ್, ಹಫೀಜುರ್ ರೆಹಮಾನ್, ಮಹಮದ್ ತಾಹೇರ್ ಏಕ್ಬಾಲ್, ಅನು ರಾಜೇಗೌಡ, ಸರ್ವರಿಬೇಗಮ್, ದೇವರಾಜು, ಕಿಶನ್, ಅರ್ಪಿತ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಪವನ್‌ಕುಮಾರ್, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ಹೆಚ್.ವೆಂಕಟೇಶ್ ಇದ್ದರು.



## ಜಿಎಸ್‌ಟಿ ಸಂಗ್ರಹ: ವಿತರಕರ ಪಾತ್ರ ಮಹತ್ವದ್ದು



**ಶಿವಮೊಗ್ಗ:** ದೇಶದಲ್ಲಿ ಕರ್ನಾಟಕವನ್ನು ಜಿಎಸ್‌ಟಿ ತೆರಿಗೆ ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿ ನಿಲ್ಲಿಸುವಲ್ಲಿ ವಿತರಕರ ಪಾತ್ರ ಮಹತ್ವದ ಆಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭಾಂಗಣದಲ್ಲಿ ಆಯೋಜಿಸಿದ್ದ ವಿತರಕರ ದಿನಾಚರಣೆ ಉದ್ಘಾಟನೆ ಮಾತನಾಡಿ, ಕರ್ನಾಟಕದ ಆರ್ಥಿಕ ಪ್ರಗತಿ ಯಲ್ಲಿ ವಿತರಕರ ಕೊಡುಗೆ ಮಹತ್ವದ್ದು ಎಂದು ತಿಳಿಸಿದರು.

ಕರ್ನಾಟಕದಲ್ಲಿ ಚಿಲ್ಲರೆ ಮಾರುಕಟ್ಟೆಯನ್ನು ಬೆಳೆಸುವ ಬಗ್ಗೆ ವಿತರಕರಿಗೆ ಮಾಹಿತಿ ಗಳನ್ನು ನೀಡುತ್ತ ದೇಶದ ಆರ್ಥಿಕತೆಗೆ ವಿತರಕರ ಉದ್ಯಮ ಅತಿ ಹೆಚ್ಚಿನ ಕೊಡುಗೆ ನೀಡುತ್ತಿದೆ ಎಂದರು.

ಕರ್ನಾಟಕ ಗ್ರಾಹಕ ವಸ್ತುಗಳ ವಿತರಕರ ಸಂಘಗಳ ಒಕ್ಕೂಟ ಅಧ್ಯಕ್ಷ ಗಿರೀಶ್ ಶಂಕರ್ ಸುಂಕದ ಮಾತನಾಡಿ, ಕಂಪನಿಗಳ ಹಾಗೂ ಸರ್ಕಾರದ ಕೆಲ ನೀತಿಗ ಳಿಂದ ವಿತರಕರ ಅಸ್ತಿತ್ವಕ್ಕೆ ಧಕ್ಕೆ ಬಂದಿರುತ್ತದೆ. ಇಂತಹ ಸಂದರ್ಭದಲ್ಲಿ ನಾವುಗ ಳೆಲ್ಲರೂ ಒಗ್ಗಟ್ಟಾಗಿ ನಮ್ಮ ಮುಂದಿರುವ ಸವಾಲುಗಳನ್ನ ಎದುರಿಸಬೇಕು ಎಂದರು.ಕರ್ನಾಟಕ ಫೆಡರೇಶನ್ ಆಫ್ ಡಿಸ್ಟ್ರಿಬ್ಯೂಟರ್ಸ್ ವೆಲ್‌ಫೇರ್ ಅಸೋಸಿಯೇ ಷನ್ ಅಧ್ಯಕ್ಷ ಜಯಂತ್ ಗಾಣಿಗ್ ಮಾತನಾಡಿ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ವಿತರಕರ ಮಂಡಳಿ ರಚಿಸುವಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ್ದೇವೆ. ಮುಂದಿನ ದಿನಗಳಲ್ಲಿ ಸರ್ಕಾರದಿಂದ ಹೆಚ್ಚಿನ ಮಟ್ಟದ ಭದ್ರತೆಯನ್ನು ವಿತರಿಕ ರಿಗೆ ನೀಡುವ ಭರವಸೆ ನೀಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ. ಗೋಪಿನಾಥ್ ಮಾತ ನಾಡಿ, ಕಂಪನಿ ಹಾಗೂ ವರ್ತಕರಿಗೆ ಕೊಂಡಿಯಾಗಿ ಕಾರ್ಯ ನಿರ್ವಹಿಸು ತ್ತಿರುವ ವಿತರಕರಿಗೆ ಆಧುನಿಕ ಮಾರುಕಟ್ಟೆಯ ವ್ಯವಸ್ಥೆಗೆ ನಾವು ನಮ್ಮ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳಬೇಕಾಗಿದೆ. ತಾಂತ್ರಿಕತೆಯನ್ನು ನಾವು ಉಪ ಯೋಗಿಸಿ ನಮ್ಮ ಆರ್ಡರ್ ಬುಕಿಂಗ್ ಹಾಗೂ ಸಪ್ಲೈ ಕೆಲಸಗಳಿಗೆ ಆಧುನಿಕತೆ ಸ್ಪರ್ಶ ನೀಡಿದಲ್ಲಿ ನಮ್ಮ ಹಲವಾರು ಸಮಸ್ಯೆಗಳನ್ನ ನಾವು ನೀಗಿಸಿಕೊಳ್ಳಬಹುದು. ಈ ನಿಟ್ಟಿನಲ್ಲಿ ನಮ್ಮ ವಿತರಕರು ಗಮನಹರಿಸಬೇಕು ಎಂದರು.

ಶಿವಮೊಗ್ಗ ಜಿಲ್ಲಾ ವಿತರಕ ಸಂಘದ ಅಧ್ಯಕ್ಷ ದೇವರಾಜ್ ಎಂಸಿ ಮಾತನಾಡಿ ದರು. ವಿತರಕರ ದಿನಾಚರಣೆ ಅಂಗವಾಗಿ 29 ಜನ ಸಂಸ್ಥಾಪಕ ಸದಸ್ಯರುಗಳಿಗೆ ಸನ್ಮಾನಿಸಲಾಯಿತು. 27 ಕಂಪನಿಗಳಿಂದ ಫ್ರೀ ಸ್ಯಾಂಪಲ್ ಪಡೆದು 125 ಕಿಟ್ ಗಳನ್ನು ತಯಾರಿಸಿ ಬಂದಂತಹ ಎಲ್ಲ ಸದಸ್ಯರುಗಳಿಗೆ ವಿತರಿಸಲಾಯಿತು. ಭದ್ರಾವತಿ, ಶಿಕಾರಿಪುರ, ಸಾಗರ, ಗದಗ ಹಾಗೂ ಕೊಪ್ಪದಿಂದ ಆಗಮಿಸಿದ ಪದಾಧಿಕಾರಿಗಳಿಗೂ ಗೌರವಿಸಿ ಸನ್ಮಾನಿಸಲಾಯಿತು.

## ತೇರಾಪಂಥ್ ಧರ್ಮಸಂಘದ 161ನೇ ಮರ್ಯಾದ ಮಹೋತ್ಸವ



**ಚಿಕ್ಕಮಗಳೂರು:** ರಾಜನೀತಿಯೊಂದಿಗೆ ಧರ್ಮನೀತಿ ಸಮ್ಮಿಲನವಾದಾಗ ದೇಶದಲ್ಲಿ ಶಾಂತಿ–ಸುಸಂಸ್ಕೃತವಾಗುತ್ತದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಅಭಿಪ್ರಾಯಿಸಿದರು.

ಮಂಗಳವಾರ ಇಲ್ಲಿನ ತೇರಾಪಂಥ್ ಭವನದಲ್ಲಿ ತೇರಾಪಂಥ್ ಸಭಾ ವತಿಯಿಂದ ಏರ್ಪಡಿಸಲಾಗಿದ್ದ ತೇರಾಪಂಥ್ ಧರ್ಮಸಂಘದ 161ನೇ ಮರ್ಯಾದ ಮಹೋತ್ಸವದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಭಾರತ ದೇಶದಲ್ಲಿ ಚಾರ್ತುಮಾಸ ಪೂಜೆ ಮಾಡುವ ಮೂಲಕ ಹಿಂದೆ ರಾಜರ ಕಾಲದಲ್ಲಿ ಧರ್ಮನೀತಿ ಅಳವಡಿಸಿಕೊಳ್ಳುತ್ತಿದ್ದರು ಎಂದರು.

ಭಾರತ ದೇಶದಲ್ಲಿ ಸುಮಾರು 800ಕ್ಕೂ ಹೆಚ್ಚು ಸಾಧು–ಸಾಧ್ವಿಗಳನ್ನು ಹೊಂದಿರುವ ಜೈನ ಸಮಾಜದಲ್ಲಿ ಆಚಾರ್ಯರು ಚಾತುರ್ಮಾಸ ಪೂಜೆ ಮಾಡಲು ದಿನಾಂಕ ನಿಗಧಿ ಮಾಡುವ ಇಂದು ಶುಭದಿನವಾಗಿದೆ ಎಂದು ಎಲ್ಲಾ ಜೈನ್ ಸಮುದಾಯದ ಬಾಂಧವರಿಗೆ ಶುಭಾಶಯ ಕೋರಿ, ಅಹಿಂಸಾತ್ಮಕವಾದ ಪವಿತ್ರ ಜೈನ ಧರ್ಮವಾಗಿದ್ದು, ಅವರ ಊಟ–ಉಪಹಾರ ಸಂಪೂರ್ಣ ಸಸ್ಯಹಾರಿಯಾಗಿದ್ದು, ಹಿಂಸೆಯ ಮಾರ್ಗವನ್ನು ದೂರವಿರಿಸಿ ನಡೆಯುತ್ತಿರುವ ಜೈನ್ ಸಮಾಜದ ಆಚಾರ–ವಿಚಾರಗಳ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**